ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೩

**ಪಟ್ಟಿ – ೦೩**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೆಂಟನೆಯ ಅಧಿವೇಶನ**

**ಗುರುವಾರ, ದಿನಾಂಕ : ೨೯ನೇ ಜನವರಿ, ೨೦೨೬**

---

## ಸಮೂಹ – IV

೧. ಮುಖ್ಯಮಂತ್ರಿಗಳು

೨. ಉಪ ಮುಖ್ಯಮಂತ್ರಿಗಳು

೩. ಗೃಹ ಸಚಿವರು

೪. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

೫. ಅಬಕಾರಿ ಸಚಿವರು

೬. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

---

## ಬೆಂಗಳೂರು ನಗರದ ಟನಲ್ ರಸ್ತೆಯ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೯ (೨೬೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಟನಲ್ ರಸ್ತೆ ನಿರ್ಮಾಣ ಮಾಡಲು ಸರ್ಕಾರವು ತೀರ್ಮಾನಿಸಿರುವುದು ನಿಜವೇ ಹಾಗಿದ್ದಲ್ಲಿ ಈ ಯೋಜನೆಯ ವಿಸ್ತೃತ ಯೋಜನಾ ವರದಿಯ ಪ್ರತಿಯನ್ನು ಒದಗಿಸುವುದು ;

(ಆ) ಈ ಯೋಜನೆಯು ಪರಿಸರಕ್ಕೆ ಹಾನಿಯನ್ನುಂಟು ಮಾಡುವುದೆಂದು ಪರಿಸರ ಪ್ರೇಮಿಗಳು ಹಾಗೂ ಬೆಂಗಳೂರು ನಿವಾಸಿಗಳು ಆಕ್ಷೇಪ ಆಕ್ಷೇಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವರ ಆಕ್ಷೇಪಣೆಗಳನ್ನು ಸರ್ಕಾರ ಪರಿಗಣಿಸಿದೆಯೇ ; (ವಿವರ ನೀಡುವುದು)

(ಇ) ಈ ಯೋಜನೆಗೆ ಮೀಸಲಿಟ್ಟ ಅನುದಾನವೆಷ್ಟು ಹಾಗೂ ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ;

(ಈ) ಈ ಯೋಜನೆಯು ಸಾರ್ವಜನಿಕರಿಗೆ ಎಷ್ಟು ಉಪಯೋಗವಾಗಲಿದೆ ಮತ್ತು ಯಾವ ಯಾವ ವರ್ಗದ ಜನರಿಗೆ ಅನುಕೂಲವಾಗಲಿದೆ ? (ವಿವರ ನೀಡುವುದು)

## ಕೆ.ಸಿ. ವ್ಯಾಲಿ ಯೋಜನೆಯಡಿ ಕೆರೆಗಳಿಗೆ ನೀರು ತುಂಬಿಸುವ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೦ (೨೬೨) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಸಿ ವ್ಯಾಲಿ ನೀರಿನಿಂದ ಭೂಗರ್ಭ ಜಲ ಮಾಲಿನ್ಯವಾಗದಂತೆ ಯಾವ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ;

(ಆ) ಕೆ.ಸಿ ವ್ಯಾಲಿ ಯೋಜನೆಯಲ್ಲಿ ಬರುವ ಆನೇಕಲ್ ತಾಲೂಕಿನ ಜಿಗಣಿ ಹೋಬಳಿಯ ಯಾವ ಕೆರೆಗಳನ್ನು ಸೇರಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಉಳಿಯಂಗ್ಲಾ, ಗವಿಕೆರೆ, ಯಾರಂಜನಹಳ್ಳಿ / ತಿರುಪಾಳ್ಯ ಕೆರೆಗಳಿಗೆ ಕೆ.ಸಿ ವ್ಯಾಲಿ ಯೋಜನೆಯಡಿ ಅನುದಾನ ಮಂಜೂರಾಗಿದೆಯೇ ; ಆಗಿದ್ದಲ್ಲಿ, ಅನುದಾನದ ಮೊತ್ತ ಎಷ್ಟು ;

(ಈ) ಈ ಕೆರೆಗಳಿಗೆ ಅನುದಾನ ಮಂಜೂರಾದ ಸರ್ಕಾರ ಯಾವ ಆದೇಶ (ಆO) ಸಂಖ್ಯೆ ಮತ್ತು ದಿನಾಂಕದಿಂದ ಮಂಜೂರು ಮಾಡಲಾಗಿದೆ ;

(ಉ) ಈ ಕೆರೆಗಳಿಗೆ ಸಂಬಂಧಿಸಿದಂತೆ ನೀರಿನ ಕಾಲುವೆ ಕೆರೆ, ಪುನಃಶ್ಚೇತನ ಪಡಿಸುವ ನಿರ್ಧಾರವನ್ನು ಸರ್ಕಾರ ಕೈಗೊಂಡಿದೆಯೇ ? (ವಿವರ ನೀಡುವುದು)

## ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿರುವ ಘನತ್ಯಾಜ್ಯ ಘಟಕಗಳ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೧ (೨೬೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ಪ್ರತಿದಿನ ಎಷ್ಟು ಘನ ತ್ಯಾಜ್ಯ ಉತ್ಪತ್ತಿಯಾಗುತ್ತಿದೆ ಈ ಘನತ್ಯಾಜ್ಯ ವೈಜ್ಞಾನಿಕವಾಗಿ

ವಿಲೇವಾರಿ ಮಾಡಲು ಎಷ್ಟು ಘನ ತ್ಯಾಜ್ಯ ನಿರ್ವಹಣಾ ಘಟಕಗಳನ್ನು ನಿರ್ಮಾಣ ಮಾಡಲಾಗಿದೆ ; ಈ ಘಟಕಗಳ ವಿಲೇವಾರಿ ಸಾಮರ್ಥ್ಯವೆಷ್ಟು ;

(ಆ) ಬೆಂಗಳೂರು ನಗರದ ನಾಲ್ಕು ದಿಕ್ಕುಗಳಲ್ಲಿ ಘನತ್ಯಾಜ್ಯ ನಿರ್ವಹಣಾ ಘಟಕಗಳನ್ನು ನಿರ್ಮಾಣ ಮಾಡುವ ಯೋಜನೆಯನ್ನು ಸರ್ಕಾರ ರೂಪಿಸಿದೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿರುವ ಅಪಹರಣಕ್ಕೊಳಗಾದ/ಕಾಣೆಯಾಗಿರುವ ಹೆಣ್ಣು ಮಕ್ಕಳು ಮತ್ತು ಮಕ್ಕಳ ಪ್ರಕರಣ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೨ (೨೬೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ (೨೦೨೩–೨೪ ರಿಂದ ೨೦೨೫–೨೬ರವರೆಗೆ) ರಾಜ್ಯದಲ್ಲಿ ಅಪಹರಣಕ್ಕೊಳಗಾದ ಅಥವಾ ಕಾಣೆಯಾಗಿರುವ ಹೆಣ್ಣು ಮಕ್ಕಳು ಹಾಗೂ ಮಕ್ಕಳ ಒಟ್ಟು ಸಂಖ್ಯೆ ಎಷ್ಟು ; (ವರ್ಷವಾರು ಹಾಗೂ ಜಿಲ್ಲಾವಾರು ವಿವರ ಒದಗಿಸುವುದು)

(ಆ) ಈ ಅವಧಿಯಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ಇಂದಿಗೂ ಪತ್ತೆಯಾಗದೆ ಉಳಿದಿರುವ ಪ್ರಕರಣಗಳ ಸಂಖ್ಯೆ ಹಾಗೂ ಶೇಕಡವಾರು ಪ್ರಮಾಣ ಎಷ್ಟು ; (ವಿವರ ನೀಡುವುದು)

(ಇ) ಪತ್ತೆಯಾಗದೆ ಉಳಿದಿರುವ ಪ್ರಕರಣಗಳ ಹಿನ್ನೆಲೆಯಲ್ಲಿ ತನಿಖಾ ಪ್ರಕ್ರಿಯೆಯಲ್ಲಿ ಉಂಟಾದ ವಿಳಂಬಕ್ಕೆ ಕಾರಣಗಳೇನು ; ನಿರ್ಲಕ್ಷ್ಯ

ವಹಿಸಿದ ಪೊಲೀಸ್ ಅಧಿಕಾರಿಗಳ ವಿರುದ್ಧ ಯಾವ ಶಿಸ್ತು ಕ್ರಮ ಕೈಗೊಳ್ಳಲಾಗಿದೆ ; (ವಿವರಗಳನ್ನು ಒದಗಿಸುವುದು)

(ಈ) ರಾಜ್ಯದಲ್ಲಿ ಹೆಣ್ಣು ಮಕ್ಕಳು ಹಾಗೂ ಮಕ್ಕಳ ಅಪಹರಣ/ ಕಾಣೆಯಾಗುವ ಪ್ರಕರಣಗಳ ಹೆಚ್ಚಳವು ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಅದಗೆಟ್ಟಿರುವುದನ್ನು ಸೂಚಿಸಿವುದಿಲ್ಲವೇ ; ಸರ್ಕಾರ ಈ ಪರಿಸ್ಥಿತಿಯನ್ನು ನಿಯಂತ್ರಿಸಲು ಯಾವ ತುರ್ತು ಕ್ರಮಗಳನ್ನು ಕೈಗೊಂಡಿದೆ ; (ವಿವರ ಒದಗಿಸುವುದು)

(ಉ) ಮುಂದಿನ ದಿನಗಳಲ್ಲಿ ಇಂತಹ ಪ್ರಕರಣಗಳನ್ನು ತಡೆಯಲು ಹೊಸ ನೀತಿ ಅಥವಾ ವಿಶೇಷ ಕಾರ್ಯಪಡೆ ರಚಿಸುವ ಬಗ್ಗೆ ಸರ್ಕಾರದ ನಿಲುವೇನು ? (ವಿವರ ಒದಗಿಸುವುದು)

## ಸಣ್ಣ ನೀರಾವರಿ ಮತ್ತು ಅಂತರ್ಜಲ ಇಲಾಖೆಗೆ ಸಂಬಂಧಿಸಿದ ಎಲ್.ಎ.ಸಿ. ಪ್ರಕರಣಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೩ (೨೬೫) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಮತ್ತು ಅಂತರ್ಜಲ ಇಲಾಖೆಗೆ ಸಂಬಂಧಿಸಿದ ಎಲ್.ಎ.ಸಿ ಪ್ರಕರಣಗಳು ಎಷ್ಟು ಬಾಕಿ ಇವೆ ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಗೌರವಾನ್ವಿತ ನ್ಯಾಯಾಲಯಗಳ ಆದೇಶಗಳ ವಿರುದ್ಧ ಎಷ್ಟು ಎಲ್.ಎ.ಸಿ ಪ್ರಕರಣಗಳಲ್ಲಿ ಮೇಲ್ಮನವಿ ಸಲ್ಲಿಸಲಾಗಿದೆ ; ಅದರ ಪ್ರಸ್ತುತ ಸ್ಥಿತಿ ಏನು ;

(ಇ) ಕಳೆದ ೧೦ ವರ್ಷಗಳಲ್ಲಿ ಎಷ್ಟು ಪ್ರಕರಣಗಳಲ್ಲಿ ನ್ಯಾಯಾಲಯ ಹೆಚ್ಚುವರಿ ಪರಿಹಾರ ಧನ ನೀಡಲು ಆದೇಶಿಸಿದೆ ; ಅದರಲ್ಲಿ ಎಷ್ಟು ಪ್ರಕಾರಗಳಿಗೆ ಸರ್ಕಾರ ಅನುದಾನ ಬಿಡುಗಡೆ ಮಾಡಿದೆ ;

(ಈ) ಹೆಚ್ಚುವರಿ ಪರಿಹಾರ ಧನ ಬಿಡುಗಡೆಗೆ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; ಅನುದಾನ ಬಿಡುಗಡೆ ಆಗದೆ ಇರುವುದಕ್ಕೆ ಕಾರಣಗಳೇನು ;

(ಉ) ಅನುದಾನ ಬಿಡುಗಡೆ ವಿಳಂಬದಿಂದ ವಿಶೇಷ ಭೂಸ್ವಾಧೀನ ಅಧಿಕಾರಿಗಳು ಜಿಲ್ಲಾಧಿಕಾರಿಗಳ ವಿರುದ್ಧ ಜಪ್ತಿ/ ವಾರೆಂಟ್ ಅಥವಾ ಅರೆಸ್ಟ್ ವಾರೆಂಟ್ ಹೊರಡಿಸಿರುವ ಪ್ರಕರಣಗಳು ಎಷ್ಟು ; ಸರ್ಕಾರ ಇದರ ಬಗ್ಗೆ ಏನು ಕ್ರಮ ಕೈಗೊಳ್ಳುತ್ತಿದೆ ;

(ಊ) ವಿವಿಧ ಎಲ್.ಎ.ಸಿ ಪ್ರಕರಣಗಳಲ್ಲಿ ಹೆಚ್ಚುವರಿ ಪರಿಹಾರ ಧನ ಬಿಡುಗಡೆ ವಿಳಂಬದಿಂದ ವಿಶೇಷ ಭೂಸ್ವಾಧೀನ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳ ವಿರುದ್ಧ ನ್ಯಾಯಾಲಯ ಹೊರಡಿಸಿದ ಜಪ್ತಿ/ ಅರೆಸ್ಟ್ ವಾರೆಂಟ್‌ಗಳಿಂದ ಸರ್ಕಾರಕ್ಕೆ ಮುಜುಗರ ಉಂಟಾಗುತ್ತಿಲ್ಲವೇ ಇದನ್ನು ತಪ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಶ್ರೀ ಅಂಜನಾದ್ರಿ ದೇವಸ್ಥಾನಕ್ಕೆ ಸಂಬಂಧಿಸಿದ ಯಾತ್ರಿ ನಿವಾಸ ಹಾಗೂ ಇತರೆ ಕಾಮಗಾರಿಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೪ (೨೬೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲ್ಲೂಕಿನ ಚಿಕ್ಕ ರಾಂಪುರ ಗ್ರಾಮದಲ್ಲಿರುವ ಶ್ರೀ ಅಂಜನಾದ್ರಿ ದೇವಸ್ಥಾನಕ್ಕೆ ಸಂಬಂಧಿಸಿದ ಯಾತ್ರಿ ನಿವಾಸ (ಡಾರ್ಮೆಂಟರಿ ಕ್ಲಬ್) ಹಾಗೂ ಇತರೆ ಕಾಮಗಾರಿಗಳಿಗೆ ನಿಗದಿಪಡಿಸಿರುವ ಒಟ್ಟು ಮೊತ್ತ ಎಷ್ಟು ಹಾಗೂ ಆಡಳಿತಾತ್ಮಕ ಅನುಮೋದನೆ ನೀಡಿದ ದಿನಾಂಕ ಯಾವುದು ;

(ಆ) ಮೇಲ್ಕಂಡ ಕಾಮಗಾರಿಗಳನ್ನು ಯಾವ ದಿನಾಂಕದೊಳಗೆ ಪೂರ್ಣಗೊಳಿಸಬೇಕಾಗಿತ್ತು ಮತ್ತು ಸದರಿ ಕಾಮಗಾರಿಗಳು ಪೂರ್ಣಗೊಂಡಿವೆಯೇ ; (ಸಂಪೂರ್ಣ ವಿವರಗಳನ್ನು ಒದಗಿಸುವುದು)

(ಇ) ಕಾಮಗಾರಿಗಳು ಪೂರ್ಣಗೊಳ್ಳದೆ ಇದ್ದಲ್ಲಿ ವಿಳಂಬಕ್ಕೆ ಕಾರಣ ಯಾರು ಮತ್ತು ಈ ಸಂಬಂಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ; (ವಿವರಗಳನ್ನು ಒದಗಿಸುವುದು)

(ಈ) ಆಡಳಿತಾತ್ಮಕ ಅನುಮೋದನೆಯ ನಂತರ ಸದರಿ ಕಾಮಗಾರಿಗಳಿಗೆ ಇದುವರೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ವಿವರಗಳನ್ನು ಒದಗಿಸುವುದು)

(ಉ) ಕಾಮಗಾರಿಗಳು ಇನ್ನೂ ಪೂರ್ಣಗೊಳ್ಳದೆ ಇದ್ದಲ್ಲಿ ಅವುಗಳನ್ನು ಯಾವ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲಾಗುವುದು ? (ವಿವರಗಳನ್ನು ಒದಗಿಸುವುದು)

## ಏತ ನೀರಾವರಿ ಯೋಜನೆ ಅನುಷ್ಠಾನ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೫ (೨೬೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯ ಅಳವಂಡಿ ಬೆಟಗೇರಿ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಮಂಜೂರಾದ ಅನುದಾನ ಎಷ್ಟು ; ಈ ಯೋಜನೆಯಿಂದ ಲಾಭ ಪಡೆಯುವ ಗ್ರಾಮಗಳು ಯಾವುವು ;

(ಆ) ಈ ಯೋಜನೆ ಸಲುವಾಗಿ ಯಾವ ಯಾವ ಗ್ರಾಮದ ಎಷ್ಟು ಎಕರೆ ಜಮೀನುಗಳನ್ನು ಸ್ವಾಧೀನಕ್ಕೆ ತೆಗೆದುಕೊಳ್ಳಲಾಗಿದೆ ; (ವಿವರ ಒದಗಿಸುವುದು)

(ಇ) ಜಮೀನು ಕಳೆದುಕೊಂಡ ಎಷ್ಟು ಜನ ರೈತರಿಗೆ ಪರಿಹಾರ ಧನ ಪಾವತಿಸಲಾಗಿದೆ ; ಪರಿಹಾರ ಧನ ಪಾವತಿಸಲು ಬಾಕಿ ಇರುವ ಪ್ರಕರಣಗಳು ಎಷ್ಟ ; (ವಿವರ ಒದಗಿಸುವುದು)

(ಈ) ಬಾಕಿ ಉಳಿದ ಭೂ ಮಾಲೀಕರಿಗೆ ಪರಿಹಾರ ಧನ ಪಾವತಿಸಲು ಇರುವ ಅಡಚಣೆಗಳು ಏನು ; ಪರಿಹಾರ ಧನ ಪಾವತಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು ; (ವಿವರ ನೀಡುವುದು)

(ಉ) ಈ ಯೋಜನೆಯಡಿ ಮಂಜೂರಾದ ಎಷ್ಟು ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ ; ಬಾಕಿ ಇರುವ ಕಾಮಗಾರಿಗಳು ಎಷ್ಟು ; ಯಾವಾಗ ಪೂರ್ಣಗೊಳಿಸಲಾಗುವುದು ? (ವಿವರ ನೀಡುವುದು)

## ಅರಣ್ಯಾಧಾರಿತ ೧೩ ಬುಡಕಟ್ಟು ಸಮುದಾಯಗಳಿಗೆ ನೇರ ನೇಮಕಾತಿ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೨೩೬ (೨೬೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫-೨೬ನೇ ಸಾಲಿನ ಮಾರ್ಚ್ ಆಯುವ್ಯಯದಲ್ಲಿ ಘೋಷಿಸಿದಂತೆ ೧೩ ಅರಣ್ಯಾಧಾರಿತ ಮೂಲ ಆದಿವಾಸಿ ಬುಡಕಟ್ಟು ಸಮುದಾಯಗಳಿಗೆ ವಿಶೇಷ ನೇರ ನೇಮಕಾತಿ ಮಾಡಲಾಗುವುದು ಎಂದು ಸರ್ಕಾರ ಘೋಷಿಸಿದ್ದು ವಿಶೇಷ ನೇರ ನೇಮಕಾತಿಗಳನ್ನು ಮಾಡಲಾಗಿದೆಯೇ ; (ಮಾಹಿತಿ ನೀಡುವುದು)

(ಆ) ವಿಶೇಷ ನೇರ ನೇಮಕಾತಿಯು ಯಾವ ಯಾವ ಗ್ರೂಪ್ ಹುದ್ದೆಗಳಿಗೆ ಅನ್ವಯಿಸುತ್ತದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಅರಣ್ಯಾ ಆಧಾರಿತ ಬುಡಕಟ್ಟುಗಳಿಗೆ ವಿಶೇಷ ನೇರ ನೇಮಕಾತಿಯೂ ಎಲ್ಲಾ ಗ್ರೂಪ್ ಹುದ್ದೆಗಳಿಗೆ ಅನ್ವಯಿಸದೆ ಕೇವಲ ಸಿ ಮತ್ತು ಡಿ ಗ್ರೂಪ್ ಹುದ್ದೆಗಳಿಗೆ ಮಾತ್ರ ಸೀಮಿತವಾಗಿರುವುದಕ್ಕೆ ಕಾರಣಗಳೇನು ? (ಮಾಹಿತಿ ನೀಡುವುದು)

## ಬುಡಕಟ್ಟು ಸಿದ್ದಿ ಜನಾಂಗದ ಗ್ರಾಮಗಳಲ್ಲಿ ಸಮುದಾಯ ಭವನಗಳ ನಿರ್ಮಾಣ ಮಾಡುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೨೩೭ (೨೬೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ, ಶಿರಸಿ, ಅಂಕೋಲಾ, ಮುಂಡಗೋಡ ಮತ್ತು ಹಳಿಯಾಳ ತಾಲೂಕಿನಲ್ಲಿ ವಾಸಿಸುವ ಬುಡಕಟ್ಟು ಸಿದ್ದಿ ಜನಾಂಗ ಗ್ರಾಮಗಳ ಪೈಕಿ ಎಷ್ಟು ಗ್ರಾಮಗಳಲ್ಲಿ ಸಮುದಾಯ ಭವನಗಳಿವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಬುಡಕಟ್ಟು ಸಿದ್ದಿ ಜನಾಂಗದ ಗ್ರಾಮಗಳಲ್ಲಿ ಆದ್ಯತೆಯ ಮೇರೆಗೆ ಸಮುದಾಯ ಭವನಗಳನ್ನು ನಿರ್ಮಾಣ ಮಾಡಲು ಸರ್ಕಾರ ವಿಶೇಷ ಅನುದಾನ ಮಂಜೂರು ಮಾಡಬಹುದೇ ; ಈ ಕುರಿತು ಸರ್ಕಾರದ ಮುಂದಿನ ಕ್ರಮಗಳೇನು ?

## ಬೆಂಗಳೂರು ನಗರದಲ್ಲಿ ಅಪರಾಧಗಳು ಹೆಚ್ಚಾಗುತ್ತಿರುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾಸಭೆಯಿಂದ ಚುನಾಯಿತರಾದವರು) :–**

೨೩೮ (೨೭೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ರಾಜಧಾನಿಯಲ್ಲಿ ದಿನದಿಂದ ದಿನಕ್ಕೆ ಅಪರಾಧಗಳು ಹೆಚ್ಚಾಗುತ್ತಿರುವುದು ನಿಜವೇ ; ಜನವರಿ–೨೦೨೫ ರಿಂದ ಡಿಸೆಂಬರ್ ೨೦೨೫ ರವರೆಗೆ ಬೆಂಗಳೂರು ನಗರದಲ್ಲಿ ನಡೆದಿರುವ ಅಪರಾಧಗಳು ಎಷ್ಟು ; (ಮಾಹೆಯಾನ ವಿವರ ನೀಡುವುದು)

(ಆ) ಒಳಾಡಳಿತ ಇಲಾಖೆಯಲ್ಲಿ ಅತ್ಯಧಿಕ ಪೊಲೀಸ್ ಸಿಬ್ಬಂದಿ ಕರ್ತವ್ಯ ನಿರ್ವಹಿಸುತ್ತಿದ್ದರು ಅಪರಾಧಗಳು ಹೆಚ್ಚಾಗುತ್ತಿರುವುದಕ್ಕೆ ಕಾರಣಗಳೇನು ;

(ಇ) ಇತ್ತೀಚಿನ ದಿನಗಳಲ್ಲಿ ಡಿಜಿಟಲ್ ಅರೆಸ್ಟ್ ಎಂಬ ನಕಲಿ ಜಾಲದಲ್ಲಿ ರಾಜ್ಯದ ಹಲವು ನಾಗರೀಕರು ತಮ್ಮ ಹಣವನ್ನು (ಮೊತ್ತವು ಲಕ್ಷ/ಕೋಟಿಗಳಲ್ಲಿ) ಕಳೆದುಕೊಂಡಿದ್ದಾರೆ ಇಂತಹ ಎಷ್ಟು ಪ್ರಕಾರಗಳು ಕಳೆದ ಒಂದು ವರ್ಷದಲ್ಲಿ ಬೆಳಕಿಗೆ ಬಂದಿವೆ ;

(ಈ) ಈ ನಕಲಿ ಜಾಲದ ಬಗ್ಗೆ ಜನಜಾಗೃತಿ ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ ಮಾಹಿತಿ ನೀಡುವುದು ?

## ಪ್ರವಾಸೋದ್ಯಮ ಇಲಾಖೆಯಿಂದ ಕೈಗೊಂಡಿರುವ ಕ್ರಮಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೯ (೨೭೩) ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜನವರಿ ೨೦೨೬ರ ಕರಾವಳಿ ಕರ್ನಾಟಕ ಪ್ರವಾಸೋದ್ಯಮ ಸಮಾವೇಶದಲ್ಲಿ ಅನಾವರಣಗೊಂಡ ರೂ. ೧,೨೬೦ ಕೋಟಿಯ ಮಾರ್ಗಸೂಚಿಗಳನ್ನು ಯಾವಾಗ ಅನುಷ್ಠಾನಗೊಳಿಸಲಾಗುವುದು ;

(ಆ) ದಕ್ಷಿಣ ಕನ್ನಡ ಉಡುಪಿ ಮತ್ತು ಉತ್ತರ ಕನ್ನಡದಾದ್ಯಂತ ವಿವಿಧ ಯೋಜನೆಗಳಿಗೆ ೩೧ ಒಪ್ಪಂದಗಳಿಗೆ ಸಹಿ ಹಾಕಲಾಗಿದ್ದು, ಹೂಡಿಕೆದಾರರು ಪ್ರಸ್ತುತ ಪ್ರಮುಖ ಅಡಚಣೆ ಎಂದು ಉಲ್ಲೇಖಿಸಿರುವ ಕರಾವಳಿ ನಿಯಂತ್ರಣ ವಲಯ (CRZ) ಅನುಮೋದನೆಗಳನ್ನು ಸುಗಮಗೊಳಿಸುಲು ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ;

(ಇ) ಪ್ರವಾಸಿಗರ ಸುರಕ್ಷತೆ ಮತ್ತು ಅನುಭವವನ್ನು ಸುಧಾರಿಸಲು ಪ್ರವಾಸಿ ಮಿತ್ರರ (ತರಬೇತಿ ಪಡೆದ ಪ್ರವಾಸಿ ಮಾರ್ಗದರ್ಶಕರು) ಸಂಖ್ಯೆಯನ್ನು ೧,೦೦೦ ಕ್ಕೆ ಹೆಚ್ಚಿಸುವ ಯೋಜನೆಯ ಪ್ರಸ್ತುತ ಅಂತರವೇನು ?

## ಅಬಕಾರಿ ನಿಯಮಗಳ ತಿದ್ದುಪಡಿಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೦ (೨೭೪) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳಕೆಯಾಗದ ಮದ್ಯ ಪರವಾನಗಿಗಳ ಹರಾಜಿಗೆ ಸಂಬಂಧಿಸಿದಂತೆ ತಿದ್ದುಪಡಿ ಮಾಡಿದ ನಿಯಮಗಳ (ನಿಯಮ ೫ ಮತ್ತು ೫A)

ಅನುಷ್ಠಾನಕ್ಕೆ ಕರ್ನಾಟಕ ಹೈಕೋರ್ಟ್ ತಡೆ ನೀಡಿದ ನಂತರ ಈ ಹರಾಜಿನಿಂದ ನಿರೀಕ್ಷಿತ ರೂ. ೧,೦೦೦ ಕೋಟಿಗಳ ಆದಾಯ ಸಂಗ್ರಹ ಗುರಿಯ ಸ್ಥಿತಿಗತಿ ಏನು ;

(ಆ) "ಅತಿಯಾದ ನಿಯೋಜನೆ ಮತ್ತು ಅನಿಯಂತ್ರಿಕತೆಯ ಗಂಭೀರ ಪ್ರಶ್ನೆಗಳನ್ನು (serious questions of excess delegation and arbitrariness) ಕರ್ನಾಟಕ ಹೈಕೋರ್ಟ್ ಗಮನಿಸಲು ಕಾರಣವಾದ ಅಬಕಾರಿ ನಿಯಮಗಳಿಗೆ (೨೦೨೫) ತಿದ್ದುಪಡಿಗಳಿಗೆ ಸಂಬಂಧಿಸಿದಂತೆ ಇಲಾಖೆಯ ಸಮರ್ಥನೆ ಏನು ;

(ಇ) ೨೦೨೫–೨೬ರ ಅವಧಿಯಲ್ಲಿ ಎಷ್ಟು CL-7 (Boarding & Lodging) ಪರವಾನಿಗೆಗಳನ್ನು ನೀಡಲಾಗಿದೆ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಈ ಪರವಾನಿಗೆಗಳ ದುರುಪಯೋಗವನ್ನು ತಡೆಯಲು ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಹಾಗೂ CL-2 ಪರವಾನಗಿ ನೀಡಲಾಗಿರುವ ವೈನ್ ಸ್ಟೋರ್‌ಗಳಲ್ಲಿಯೇ ಸಾರ್ವಜನಿಕರಿಗೆ ಮದ್ಯ ಸೇವಿಸಲು ಕಾನೂನು ಬಾಹಿರವಾಗಿ ಅವಕಾಶ ನೀಡಿದ್ದು, ಇದರಿಂದಾಗಿ ರಸ್ತೆಗಳಲ್ಲಿ ಓಡಾಡುವ ಮಹಿಳೆಯರಿಗೆ ಮತ್ತು ಮಕ್ಕಳಿಗೆ ಸಾಕಷ್ಟು ತೊಂದರೆ ಉಂಟಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಂತಹ ವೈನ್ ಸ್ಟೋರ್‌ಗಳ ವಿರುದ್ಧ ಯಾವುದೇ ರೀತಿಯ ಕ್ರಮ ಕೈಗೊಳ್ಳದೆ ಇರುವುದಕ್ಕೆ ಕಾರಣಗಳೇನು ?

## ರಾಜ್ಯದಲ್ಲಿ ನವೋದ್ಯಮ ನಿಧಿ ಮತ್ತು ಎ ಐ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೧ (೨೭೫) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫ರ ಆರಂಭದಲ್ಲಿ ನವೋದ್ಯಮ ನಿಧಿಯಲ್ಲಿನ (Startup funding) ವರದಿಯಾದ ಕುಸಿತದ ಹಿನ್ನಲೆಯಲ್ಲಿ ವಿಶೇಷವಾಗಿ

"ಎಲಿವೇಟ್" ಕಾರ್ಯಕ್ರಮದ ಅಡಿಯಲ್ಲಿರುವ ಆರಂಭಿಕ ನವೋದ್ಯಮಗಳು (Startup) ಸಕಾಲಿಕ ಅನುದಾನವನ್ನು ಪಡೆಯುವುದನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ;

(ಆ) Centre for Applied Al for Tech Solutions (CATS) ನ ಸ್ಥಿತಿಗತಿ ಏನು ಮತ್ತು ಎಐ–ಚಾಲಿತ ಆಡಳಿತವು ಬೆಂಗಳೂರು ನಗರ ತಂತ್ರಜ್ಞಾನ ಕೇಂದ್ರಕ್ಕೆ ಮಾತ್ರವಲ್ಲದೇ ಗ್ರಾಮೀಣ ಪ್ರದೇಶಗಳಿಗೂ ಪ್ರಯೋಜನವನ್ನು ನೀಡುತ್ತದೆ ಎಂದು ಸರ್ಕಾರ ಹೇಗೆ ಖಚಿತಪಡಿಸುತ್ತಿದೆ ;

(ಇ) ಹೊಸ ೨೦೨೫–೩೦ ಐಟಿ ನೀತಿಯು ಡೀಪ್ ಟೆಕ್, ಎಐ ಮತ್ತು ಸೈಬರ್ ಭದ್ರತೆಯ ಮೇಲೆ ಕೇಂದ್ರಿಕರಿಸುತ್ತಿದೆ. ಎಐ–ರಚಿತವಾಗ ಡೀಪ್‌ಫೇಕ್‌ಗಳು ಮತ್ತು ಸೈಬರ್ ದಾಳಿಗಳಿಂದ ಸ್ಥಳೀಯ ವ್ಯವಹಾರಗಳನ್ನು ರಕ್ಷಿಸಲು ನಿರ್ದಿಷ್ಟ ಕಾರ್ಯಕ್ರಮಗಳು ಇವೆಯೇ ;

(ಈ) ರಾಷ್ಟ್ರೀಯ ಜೈವಿಕ ಆರ್ಥಿಕತೆಯಲ್ಲಿ ರಾಜ್ಯವು ಶೇ.೨೧ರಷ್ಟು ಕೊಡುಗೆ ನೀಡುತ್ತಿದ್ದು, ಮೆಡ್–ಟೆಕ್ ಮತ್ತು ಹೆಲ್ತ್ ಟೆಕ್ ಕ್ಷೇತ್ರಗಳಲ್ಲಿ ಹೆಚ್ಚು ಸ್ಪರ್ಧಾತ್ಮಕವಾಗಿಸಲು ಯಾವ ನಿರ್ದಿಷ್ಟ ಪ್ರೋತ್ಸಾಹಕಗಳನ್ನು ಒದಗಿಸಲಾಗುತ್ತಿದೆ ?

## ಪ್ರವಾಸೋದ್ಯಮ ಇಲಾಖೆಯ ವಾಹನಗಳನ್ನು ಶಾಲಾ ಮಕ್ಕಳ ಶೈಕ್ಷಣಿಕ ಪ್ರವಾಸಕ್ಕೆ ನೀಡುವ ಕುರಿತು

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೨೪೨ (೨೭೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಪ್ರವಾಸೋದ್ಯಮ ಇಲಾಖೆಯಲ್ಲಿ ಪ್ರವಾಸ ಮಾಡಲು ಕೆ.ಎಸ್.ಡಿ.ಸಿ ವ್ಯಾಪ್ತಿಯಲ್ಲಿ ಇರುವ ವಾಹನಗಳ ಸಂಖ್ಯೆ ಎಷ್ಟು; ಅವುಗಳು ಯಾವುವು ;

(ಆ) ಪ್ರವಾಸೋದ್ಯಮ ಇಲಾಖೆಯ ವಾಹನಗಳನ್ನು ಶಾಲಾ–ಕಾಲೇಜು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರವಾಸ ಮಾಡಲು ನೀಡಲಾಗುತ್ತಿದೆಯೇ ; ನೀಡುತ್ತಿದ್ದರೆ, ಯಾವ ರೀತಿಯ ದರವನ್ನು ನಿಗದಿಪಡಿಸಲಾಗಿದೆ ;

(ಇ) ವಾಹನಗಳನ್ನು ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರವಾಸ ಮಾಡಲು ಸರ್ಕಾರ ಉಚಿತವಾಗಿ ನೀಡಲು ಯಾವ ಕ್ರಮ ಕೈಗೊಂಡಿದೆ ?

## ಕಸ ವಿಲೇವಾರಿಯ ಘಟಕಗಳನ್ನು ಸ್ಥಳಾಂತರ ಮಾಡುವ ಬಗ್ಗೆ

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೩ (೨೭೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ವ್ಯಾಪ್ತಿಯ ಯಶವಂತಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಕಸ ವಿಲೇವಾರಿ ಘಟಕಗಳ ಸಂಖ್ಯೆ ಎಷ್ಟು; (ಅವುಗಳು ಯಾವುವು)

(ಆ) ಯಶವಂತಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಕಸ ವಿಲೇವಾರಿ ಘಟಕಗಳಾದ ತಿಪ್ಪೇನಹಳ್ಳಿ ಮತ್ತು ಸೀಗೆಹಳ್ಳಿ, ಕನ್ನಲ್ಲಿ, ಸುಬ್ಬರಾಯನಪಾಳ್ಯ ಹಾಗೂ ಲಿಂಗದೇವರಹಳ್ಳಿ ವ್ಯಾಪ್ತಿಯಲ್ಲಿ ಇರುವ ಕಸ ವಿಲೇವಾರಿ ಘಟಕಗಳಿಂದ ಸಾರ್ವಜನಿಕರಿಗೆ ತುಂಬ ತೊಂದರೆಯಾಗುತ್ತಿದ್ದು, ಈ ಕಸ ವಿಲೇವಾರಿ ಘಟಕಗಳನ್ನು ಬೇರೆ ಕಡೆಗೆ ಸ್ಥಳಾಂತರ ಮಾಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ ?

## ಯಶವಂತಪುರ ವಿಧಾನಸಭಾ ಕ್ಷೇತ್ರಕ್ಕೆ ನೀಡಿರುವ ಅನುದಾನದ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೪ (೨೭೮) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯ ಯಶವಂತಪುರ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ, ೨೦೨೩ ರಿಂದ ೨೦೨೬ರವರೆಗೆ ವಿವಿಧ ಚರಂಡಿ ಮತ್ತು ರಸ್ತೆ ಡಾಂಬರೀಕರಣ ಮಾಡಲು ಎಷ್ಟು ಅನುದಾನವನ್ನು ನೀಡಲಾಗಿದೆ ; ವಾರ್ಡ್‌ವಾರು ಕಾಮಗಾರಿಗಳ ವಿವರವಾದ ಪೂರ್ಣ ಮಾಹಿತಿ ನೀಡುವುದು;

(ಆ) ಯಶವಂತಪುರ ವಿಧಾನಸಭಾ ಕ್ಷೇತ್ರದ ಜಿಬಿಎ ವ್ಯಾಪ್ತಿಯ ಚರಂಡಿ ಅಭಿವೃದ್ಧಿ ಕಾಮಗಾರಿ ಹಾಗೂ ರಸ್ತೆ ಡಾಂಬರೀಕರಣ ಅಭಿವೃದ್ಧಿ ಕಾಮಗಾರಿಗಳಿಗೆ ನೀಡಿರುವ ಅನುದಾನದಲ್ಲಿ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿದೆ ಹಾಗೂ ಎಷ್ಟು ಕಾಮಗಾರಿಗಳು ಚಾಲನೆಯಲ್ಲಿವೆ ಮತ್ತು ಈ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಪ್ರಾರಂಭ ಮಾಡದೇ ಇರುವ ಕಾಮಗಾರಿಗಳ ಸಂಖ್ಯೆ ಎಷ್ಟು? (ವಾರ್ಡ್‌ವಾರು ವಿವರವಾದ ಮಾಹಿತಿ ನೀಡುವುದು)

## ಗ್ರೇಟರ್ ಬೆಂಗಳೂರು ಪ್ರಾಧಿಕಾರದಲ್ಲಿ ಆಸ್ತಿಗಳ ಖಾತಾ ವಿಭಜನೆ ಜಾರಿ ಮಾಡುವ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೫ (೨೭೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಪ್ರದೇಶದ ಜಿಬಿಎ ವ್ಯಾಪ್ತಿಯ ಹಾಗೂ ಬಿ.ಡಿ.ಎ ವ್ಯಾಪ್ತಿಯ ನಿವೇಶನಗಳ ಖಾತಾ ವಿಭಜನೆ ಸೌಲಭ್ಯವನ್ನು ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸರ್ಕಾರದ ಗಮನಕ್ಕೆ ಬಂದಿದ್ದರೆ ಇದರಿಂದ ಸಣ್ಣ ಸಣ್ಣ ಆಸ್ತಿ ಮಾಲೀಕರು ತಮ್ಮ ನಿವೇಶನವನ್ನು ಚಿಕ್ಕ ಚಿಕ್ಕ ಅಳತೆಯಲ್ಲಿ ವಿಭಜನೆ ಮಾಡಿ ಅಥವಾ ತಮ್ಮ ಕುಟುಂಬಕ್ಕೆ ಆರ್ಥಿಕ ಸಹಾಯಕ್ಕೆ ಮಾರಾಟ ಮಾಡಲು ಈ ಖಾತಾ ವಿಭಜನೆ ನಿಲ್ಲಿಸಿರುವುದರಿಂದ ಸಾವಿರಾರು ಆಸ್ತಿ ಮಾಲೀಕರ ಕುಟುಂಬಗಳಿಗೆ ತುಂಬಾ ತೊಂದರೆಯಾಗುತ್ತಿದ್ದು, ಇದನ್ನು ಹಿಂದಿನ ರೀತಿಯಲ್ಲಿ ಖಾತಾ ವಿಭಜನೆ ಮಾಡಲು ಅವಕಾಶ ಕಲ್ಪಿಸಲು ಸರ್ಕಾರ ಯಾವ ಕ್ರಮವನ್ನು ತೆಗೆದುಕೊಂಡಿದೆ ?

## ಕರಾವಳಿ ಭಾಗದಲ್ಲಿ ಮಾದಕ ದ್ರವ್ಯ ಚಟುವಟಿಕೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೬ (೩೭೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರಾವಳಿ ಭಾಗದಲ್ಲಿ ಮಾದಕ ದ್ರವ್ಯ (ಡ್ರಗ್ಸ್) ಚಟುವಟಿಕೆಗಳು ಹೆಚ್ಚುತ್ತಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳೇನು ; (ವಿವರ ನೀಡುವುದು)

(ಆ) ಬೇರೆ ರಾಜ್ಯಗಳಿಂದ ಕರ್ನಾಟಕ ರಾಜ್ಯಕ್ಕೆ ದಾಳಿ ನಡೆಸಿ, ಮಾದಕ ದ್ರವ್ಯ ವಿತರಣೆ ಬಗ್ಗೆ ಪತ್ರ ಹಚ್ಚಿರುವುದರಿಂದ ರಾಜ್ಯದ ಪೊಲೀಸರು ಮೌನವಾಗಿದ್ದಾರೆ ಎಂಬ ಅಭಿಪ್ರಾಯ ವ್ಯಕ್ತವಾಗಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಾದಕ ದ್ರವ್ಯ ಸೇವನೆ ಮತ್ತು ಅದನ್ನು ವಿತರಣೆ ಮಾಡುವವರ ವಿರುದ್ಧ ಸರ್ಕಾರದಿಂದ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ; ಇದರ ಹಿಂದೆ ಇರುವ ವ್ಯಕ್ತಿಗಳಿಗೆ ಇಲಾಖೆ ತನಿಖೆ ನಡೆಸಿದೆಯೇ ; (ವಿವರ ನೀಡುವುದು)

(ಈ) ವಿದ್ಯಾರ್ಥಿಗಳಲ್ಲಿ ಈ ಬಗ್ಗೆ ಅರಿವು ಮೂಡಿಸಲು ಮತ್ತು ಈ ಚಟದಿಂದ ದೂರ ಇರಲು ಸರ್ಕಾರ ಕೈಗೊಳ್ಳುತ್ತಿರುವ ಕ್ರಮಗಳೇನು ? (ವಿವರ ನೀಡುವುದು)

## ನಿವೃತ್ತ ನೌಕರರಿಗೆ ಪಿಂಚಣಿಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೭ (೩೭೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ : ೦೧.೦೭.೨೦೨೨ ರಿಂದ ૩೧.೦೭.೨೦೨೪ ರ ಅವಧಿಯಲ್ಲಿ ನಿವೃತ್ತರಾದ ಸರ್ಕಾರಿ ನೌಕರರಿಗೆ ಪಿಂಚಣಿಯನ್ನು ೭ ನೇ ವೇತನ ಆಯೋಗದ ಪ್ರಕಾರ ನೀಡುತ್ತಿದ್ದು, ನಿವೃತ್ತಿ ಪಿಂಚಣಿ ಉಪಲಬ್ಧಗಳಾದ ಡಿಸಿಆರ್‌ಜಿ, ಕಮ್ಯೂಟೇಶನ್ ಹಾಗೂ ಗಳಿಕೆ ರಜೆ ನಗದೀಕರಣಗಳನ್ನು ೭ನೇ ವೇತನ ಆಯೋಗದ ವರದಿ ಶಿಫಾರಸ್ಸಿನ ಪ್ರಕಾರ ನೀಡದೇ ಆರನೇ ವೇತನ ಆಯೋಗದ ಪ್ರಕಾರ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಬಗ್ಗೆ ಸಂಘಟನೆಗಳು ವ್ಯತ್ಯಾಸದ ಮೊತ್ತ ನೀಡಲು ಆಗ್ರಹಿಸಿ ಕಳೆದ ೧೮ ತಿಂಗಳಿಂದ ಮುಷ್ಕರ ನಡೆಸುತ್ತಿರುವುದು ಹಾಗೂ ಖುದ್ದಾಗಿ ಹಲವು ಬಾರಿ ಮನವಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ವ್ಯತ್ಯಾಸದ ಮೊತ್ತ ಪಾವತಿಗೆ ಎ.ಬಿ.ಸಿ.ಡಿ ಗ್ರೂಪ್ ವಾರು ಹಾಗೂ ಯಾವ ಯಾವ ಪಿಂಚಣಿ ಉಪಲಬ್ಧಗಳಿಗೆ ಎಷ್ಟು ಮೊತ್ತ ಬೇಕಾಗಬಹುದೆಂದು ಅಂದಾಜಿಸಲಾಗಿದೆ ಹಾಗೂ ಈ ಅವಧಿಯಲ್ಲಿ ನಿವೃತ್ತರಾದ ಎ.ಬಿ.ಸಿ.ಡಿ ಗ್ರೂಪ್ ವಾರು ನೌಕರರ ಸಂಖ್ಯೆ ಎಷ್ಟು ;

(ಈ) ದಿನಾಂಕ ೦೧.೦೮.೨೦೨೪ ರಿಂದ ನಿವೃತ್ತರಾದ ನೌಕರರಿಗೆ ೭ ನೇ ವೇತನ ಆಯೋಗದಂತೆ, ಅದರ ಹಿಂದಿನ ದಿನಾಂಕದಿಂದ ನಿವೃತ್ತರಾದ ನೌಕರರಿಗೆ ೬ನೇ ವೇತನ ಆಯೋಗದಂತೆ ಪಿಂಚಣಿ ಉಪಲಬ್ಧ ಗಳಾದ ಡಿಸಿಆರ್‌ಜಿ, ಕಮ್ಯೂಟೇಶನ್ ಹಾಗೂ ಗಳಿಕೆ ರಜೆ ನಗದೀಕರಣ ಸೌಲಭ್ಯ ನೀಡಿರುವುದರಿಂದ ಒಂದೇ ತೆರನಾದ ಕಾರ್ಯನಿರ್ವಹಿಸಿದ ನೌಕರರಲ್ಲಿ ತಾರತಮ್ಯ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಸದರಿ ವ್ಯತ್ಯಾಸದ ಮೊತ್ತವನ್ನು ನಿವೃತ್ತಿ ನೌಕರರಿಗೆ ೨೦೨೬-೨೭ ನೇ ಆಯವ್ಯಯದಲ್ಲಿ ಅನುದಾನ ನಿಗದಿಪಡಿಸಿಕೊಂಡು ಪಾವತಿಸಲಾಗುವುದೇ ?

## Coastal Engineering Division ಅನ್ನು ಮಂಗಳೂರಿಗೆ ಸ್ಥಳಾಂತರಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೮ (೩೭೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದ ಕಡಲತೀರವು ೩ ಜಿಲ್ಲೆಗಳನ್ನು ಹೊಂದಿದ್ದು, ಸುಮಾರು ೩೨೦ ಕಿ.ಮೀ ನಷ್ಟು ಉದ್ದವಿದ್ದು ಮಳೆಗಾಲದ ಸಮಯದಲ್ಲಿ ಸಾಕಷ್ಟು ಕಡಲ ಕೊರೆತ ಉಂಟಾಗಿ, ಪ್ರಾಣ ಹಾನಿ ಹಾಗೂ ಅಸ್ತಿಪಾಸ್ತಿಗಳಿಗೆ ಹಾನಿ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಸಮುದ್ರದಲ್ಲಿನ ಕೊರೆತದ ಕಾರಣಗಳನ್ನು ಕಂಡುಹಿಡಿಯಲು ಡಾಟಾಗಳನ್ನು ಸಂಗ್ರಹ ಮಾಡಲು ಮುಂಜಾಗ್ರತೆ ಕ್ರಮಕೈಗೊಳ್ಳಲು Karnataka Engineering Research Station (KERS)ನ ಎರಡು ಉಪವಿಭಾಗಗಳು ಮಂಗಳೂರು ಹಾಗೂ

ಭಟ್ಕಳದಲ್ಲಿ ಕಾರ್ಯನಿರ್ವಹಿಸುತ್ತಿದ್ದು ವಿಭಾಗ ಕಛೇರಿಯು Coastal Engineering Division, K.R Sagar, ಮೈಸೂರುನಲ್ಲಿರುವುದರಿಂದ ಈ ಮುಖ್ಯ ಕಛೇರಿಯನ್ನು ಕೆ.ಆರ್.ಸಾಗರದಿಂದ ಕಡಲತೀರವಿರುವ ಮಂಗಳೂರಿಗೆ ಸ್ಥಳಾಂತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ನ್ಯಾಯಾಲಯ ಕಟ್ಟಡ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೯ (೩೮೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ನ್ಯಾಯಾಲಯ ಕಟ್ಟಡವನ್ನು ನಿರ್ಮಾಣ ಮಾಡಬೇಕೆಂಬ ಅನೇಕ ಬೇಡಿಕೆಗಳು ಇದ್ದು, ಬೆಳ್ತಂಗಡಿ, ಪುತ್ತೂರು, ಬಂಟ್ವಾಳ ಮತ್ತು ಮಂಗಳೂರಿನಲ್ಲಿ ನ್ಯಾಯಾಲಯ ಕಟ್ಟಡ ಒದಗಿಸಲು ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು ; ಯಾವಾಗ ಪ್ರಾರಂಭಗೊಳ್ಳುವುದು ; ಯಾವ ಹಂತದಲ್ಲಿದೆ ;

(ಆ) ಹೊಸದಾಗಿ ಪ್ರಾರಂಭಗೊಂಡ ತಾಲ್ಲೂಕುಗಳಾದ ಕಡಪ, ಮುಲ್ಕಿ ಮತ್ತು ಉಳ್ಳಾಲದಲ್ಲಿ ನ್ಯಾಯಾಲಯ ಪ್ರಾರಂಭಿಸಬೇಕೆಂಬ ಜನರ ಬೇಡಿಕೆಯನ್ನು ಈಡೇರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಯಾವಾಗ ಪ್ರಾರಂಭಿಸಲಾಗುವುದು ; (ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ನ್ಯಾಯಾಂಗ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಇರುವುದರಿಂದ ನ್ಯಾಯವನ್ನು ಪಡೆಯಲು ವಿಳಂಬವಾಗುತ್ತಿದೆ ಎಂಬ ಕೂಗು ಇದ್ದು, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ೨೦೨೧-೨೩ರ ಅವಧಿಯಲ್ಲಿ ಉಡುಪಿ ಜಿಲ್ಲಾ ಸರ್ಕಾರಿ ವಕೀಲರ ಕರ್ತವ್ಯಲೋಪದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫೦ (೨೮೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೧-೨೩ರ ಅವಧಿಯಲ್ಲಿ ಉಡುಪಿ ಜಿಲ್ಲಾ ಸರ್ಕಾರಿ ವಕೀಲರಾಗಿ ಕಾರ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ನ್ಯಾಯಾಲಯಗಳಲ್ಲಿ ತನಿಖಾ ಹಂತದಲ್ಲಿ ಇದ್ದ ವಿವಿಧ ಪ್ರಕರಣಗಳಲ್ಲಿ ಸರ್ಕಾರದ ಪರವಾಗಿ ಲಿಖಿತ ಹೇಳಿಕೆ ಸಲ್ಲಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಒಟ್ಟು ಎಷ್ಟು ಪ್ರಕರಣಗಳಲ್ಲಿ ಲಿಖಿತ ಹೇಳಿಕೆ ಸಲ್ಲಿಸಿರುವುದಿಲ್ಲ ; ಪ್ರಕರಣಗಳ ವಿವರ ನೀಡುವುದು ;

(ಆ) ಉಡುಪಿ ಜಿಲ್ಲಾ ಸರ್ಕಾರಿ ವಕೀಲರು ಎಸಗಿರುವ ಅಕ್ರಮ/ ಕರ್ತವ್ಯಲೋಪಗಳ ಬಗ್ಗೆ ತನಿಖೆ ನಡೆಸಿ, ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆಯೇ ; ಸಲ್ಲಿಸಲ್ಪಟ್ಟಿದ್ದಲ್ಲಿ, ತನಿಖಾಧಿಕಾರಿಯಾಗಿ ಯಾರನ್ನು ನೇಮಿಸಲಾಗಿದೆ ಮತ್ತು ಸದರಿಯವರ ಕರ್ತವ್ಯಲೋಪದ ಬಗ್ಗೆ ಸರ್ಕಾರದಿಂದ ಏನು ಕ್ರಮ ಕೈಗೊಳ್ಳಲಾಗಿದೆ ವಿವರ ಒದಗಿಸುವುದು ;

(ಇ) ಸರ್ಕಾರದ ಹಿತರಕ್ಷಣೆ ಮಾಡಬೇಕಾದ ಜಿಲ್ಲಾ ಸರ್ಕಾರಿ ವಕೀಲರು ನ್ಯಾಯಾಲಯದಲ್ಲಿ ತನಿಖೆಯಲ್ಲಿರುವ ವಿವಿಧ ಪ್ರಕರಣಗಳಲ್ಲಿ

ಲಿಖಿತ ಹೇಳಿಕೆ ಸಲ್ಲಿಸದಿರುವುದರಿಂದ ಸರ್ಕಾರಕ್ಕೆ ಹಿನ್ನಡೆಯಾಗಿ ಕರ್ತವ್ಯಲೋಪ ಎಸಗಿರುವ ಗಂಭೀರ ಪ್ರಕರಣಗಳಾಗಿದ್ದು, ಇಂತಹ ಪ್ರಕರಣಗಳು ಮರುಕಳಿಸದಂತೆ ನೋಡಿಕೊಳ್ಳುವ ಹಿತದೃಷ್ಟಿಯಿಂದ ವೃತ್ತಿ ದುರ್ನಡತೆಗಾಗಿ ಸದರಿಯವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿಗೆ ಸರ್ಕಾರದಿಂದ ಮನವಿ ಸಲ್ಲಿಸಲಾಗಿದೆಯೇ ? (ವಿವರ ಒದಗಿಸುವುದು)

## ಎನ್.ಪಿ.ಎಸ್.ಬದಲಾಗಿ ಓ.ಪಿ.ಎಸ್. ನೀಡುವ ಬಗ್ಗೆ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೨೫೧ (೨೮೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೦೬ರ ನಂತರ ನೇಮಕಗೊಂಡ ಸರ್ಕಾರಿ ನೌಕರರಿಗೆ ಎನ್.ಪಿ.ಎಸ್. ಪಿಂಚಣಿ ಯೋಜನೆ ಬದಲಾಗಿ ಓ.ಪಿ.ಎಸ್. ನೀಡುವ ಬಗ್ಗೆ ಅಧ್ಯಯನ ಮಾಡಲು ಸಮಿತಿಯನ್ನು ರಚನೆ ಮಾಡಿದ್ದು ನಿಜವೇ ; ಹಾಗಿದ್ದಲ್ಲಿ, ಸಮಿತಿ ಸದಸ್ಯರ ಪಟ್ಟಿ ನೀಡುವುದು ;

(ಆ) ಈ ಸಮಿತಿಗೆ ಅಂತಿಮ ವರದಿ ಸಲ್ಲಿಸಲು ನೀಡಿದ ಕಾಲಮಿತಿ ಎಷ್ಟು ಮತ್ತು ಸಮಿತಿಯು ಇಲ್ಲಿಯವರೆಗೆ ಪ್ರಾಥಮಿಕ ವರದಿ ಸಲ್ಲಿಸಿದೆಯೇ ;

(ಇ) ರಾಜ್ಯದ ವಿವಿಧ ಇಲಾಖೆಗಳಲ್ಲಿ ೦೧–೦೪–೨೦೦೬ರ ನಂತರ ನೇಮಕಗೊಂಡ ನೌಕರರ ಸಂಖ್ಯೆ ಎಷ್ಟು ಎಂದು ಅಂದಾಜು ಮಾಡಿರುವ ಕುರಿತು ಸಂಪೂರ್ಣ ವಿವರ ನೀಡುವುದು ;

(ಈ) ಈ ಒಂದು ಸಮಿತಿಗೆ ನೀಡಿದ ಜವಾಬ್ದಾರಿಗಳೇನು ; ಅಂದರೆ ಟರ್ಮ್ಸ್ ಆಫ್ ರೆಫರೆನ್ಸ್‌ಗಳೇನು ; (ಮಾಹಿತಿ ನೀಡುವುದು)

(ಉ) ಈ ಒಂದು ಸಮಿತಿಗೆ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರಿಗೂ ಪಿಂಚಣಿ ಸೌಲಭ್ಯ ನೀಡಲು ಅಧ್ಯಯನ ಮಾಡಲು ಸೂಚನೆ ನೀಡಲಾಗಿದೆಯೇ ; (ಮಾಹಿತಿ ನೀಡುವುದು)

(ಊ) ಈ ಸಮಿತಿಯು ಇಲ್ಲಿಯವರೆಗೆ ಎಷ್ಟು ಸಭೆಗಳನ್ನು ನಡೆಸಿದೆ ಮತ್ತು ಬೇರೆ ರಾಜ್ಯಗಳಿಗೆ ತೆರಳಿ ಸದರಿ ವಿಷಯ ಕುರಿತು ಮಾಹಿತಿಯನ್ನು ಸಂಗ್ರಹಿಸಿದೆಯೇ ? (ವಿವರ ನೀಡುವುದು)

## ಕಳೆದ ೩ ವರ್ಷಗಳಲ್ಲಿ ಕೆ.ಆರ್.ಪುರಂ ಕ್ಷೇತ್ರಕ್ಕೆ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೨೫೨ (೨೮೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕೆ.ಆರ್.ಪುರಂ ವಿಧಾನಸಭಾ ಕ್ಷೇತ್ರಕ್ಕೆ ಬಿಡುಗಡೆಯಾದ ಅನುದಾನ ಎಷ್ಟು ;

(ಆ) ಹಿಂದಿನ ೩ ವರ್ಷಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಪೂರ್ಣಗೊಂಡಿರುವ ಕಾಮಗಾರಿಗಳು ಹಾಗೂ ಅಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು ;

(ಇ) ಉಳಿಕೆಯಾಗಿರುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಪ್ರತಿ ವರ್ಷ ಇಲಾಖೆಯಿಂದ ನೀಡುತ್ತಿರುವ ಹುದ್ದೆಗಳ ಮಾಹಿತಿ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೨೫೩ (೨೮೫) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರತಿ ವರ್ಷ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯಿಂದ ನಡೆಯುತ್ತಿರುವ ಸಂಸ್ಥೆಗಳ ಸಂಖ್ಯೆ ಎಷ್ಟು ; ಮತ್ತು ಸೃಷ್ಟಿಯಾಗುತ್ತಿರುವ ಹುದ್ದೆಗಳು ಎಷ್ಟು ; ಜಿಲ್ಲಾವಾರು ಮಾಹಿತಿ ನೀಡುವುದು ;

(ಆ) ರಾಜ್ಯದ ಯುವಕರಿಗೆ ನೀಡಿರುವ ಹುದ್ದೆಗಳು ಎಷ್ಟು ; ಹೊರ ರಾಜ್ಯದ ವಿದ್ಯಾರ್ಥಿಗಳಿಗೆ ನೀಡಿರುವ ಹುದ್ದೆಗಳು ಎಷ್ಟು ;

(ಇ) ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಗಳಲ್ಲಿ ಇರುವ ಹುದ್ದೆಗಳನ್ನು ಪಡೆಯಲು ಅರ್ಹ ವಿದ್ಯಾರ್ಥಿಗಳಿಗೆ ತರಬೇತಿಯನ್ನು ನೀಡಲಾಗುತ್ತಿದೆಯೇ ; ನೀಡುತ್ತಿದ್ದಲ್ಲಿ, ಯಾವ ಯಾವ ತರಬೇತಿಯನ್ನು ನೀಡಲಾಗುತ್ತದೆ ? (ವಿವರಗಳನ್ನು ನೀಡುವುದು)

## ಸಣ್ಣ ನೀರಾವರಿ ಇಲಾಖೆಯಿಂದ ಈ ಜಿಲ್ಲೆಗಳಿಗೆ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೨೫೪ (೨೮೬) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಸಾಲಿನಲ್ಲಿ ದಾವಣಗೆರೆ, ಚಿತ್ರದುರ್ಗ, ತುಮಕೂರು, ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ತೆಗೆದುಕೊಂಡಿರುವ ಯೋಜನೆಗಳು ಯಾವುವು ;

(ಆ) ಈ ಯೋಜನೆಗಳ ಅನುಷ್ಠಾನಕ್ಕಾಗಿ ಇದುವರೆಗೂ ಸರ್ಕಾರದಿಂದ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ಯೋಜನೆವಾರು ಹಾಗೂ ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳು ಹೆಚ್ಚಿನ ಕೆರೆಗಳನ್ನು ಹೊಂದಿರುವುದರಿಂದ ಇವುಗಳ ಅಭಿವೃದ್ಧಿಗಾಗಿ ಕೈಗೊಂಡಿರುವ ಕ್ರಮಗಳೇನು ;

(ಈ) ೨೦೨೫-೨೬ನೇ ಸಾಲಿನಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಮಂಜೂರು ಮಾಡಿರುವ ಬೋರ್‌ವೆಲ್‌ಗಳ ಸಂಖ್ಯೆ ಎಷ್ಟು, ಹಾಗೂ ಪ್ರತಿ ಬೋರ್‌ವೆಲ್‌ಗೆ ತೆಗೆಯುವ ಘಟಕ ವೆಚ್ಚ ಎಷ್ಟು ; ಜಿಲ್ಲಾವಾರು ಮಾಹಿತಿ ಒದಗಿಸುವುದು ?

## ವಿವಿಧ ಇಲಾಖೆಗಳಿಗೆ ಹಂಚಿಕೆ ಮಾಡಿದ ಅನುದಾನದ ಕುರಿತು

**ಶ್ರೀ ಕೇಶವ ಪ್ರಸಾದ್.ಎಸ್ (ವಿಧಾನಸಭೆಯಿಂದ ಚುನಾಯಿತರಾದವರು):-**

೨೫೫ (೨೮೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೫-೨೬ರ ಆಯವ್ಯಯದಲ್ಲಿ ವಿವಿಧ ಇಲಾಖೆಗಳಿಗೆ ಹಂಚಿಕೆ ಮಾಡಿದ, ಸರ್ಕಾರ ಮಂಜೂರು ಮಾಡಿರುವ ಮತ್ತು ಡಿಸೆಂಬರ್-೨೦೨೫ರವರೆಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ಇಲಾಖಾವಾರು ವಿವರವನ್ನು ನೀಡುವುದು)

(ಆ) ಬಿಡುಗಡೆ ಮಾಡಿರುವ ಅನುದಾನದಲ್ಲಿ, ಹಣದಲ್ಲಿ ಇಲಾಖೆವಾರು ವೆಚ್ಚ ಮಾಡಿರುವ ಹಣ ಎಷ್ಟು ; ಅನುದಾನದಲ್ಲಿ ಎಷ್ಟು ಹಣ ಖರ್ಚು ಆಗದೆ ಉಳಿದಿದೆ ; (ಇಲಾಖಾವಾರು ವಿವರ ನೀಡುವುದು)

(ಇ) ಮಂಜೂರು ಮಾಡಿದ್ದ ಎಷ್ಟು ಅನುದಾನವನ್ನು ಬೇರೆ ಇಲಾಖೆಗೆ ಮರುಹಂಚಿಕೆ ಮಾಡಲಾಗಿದೆ ; ಮರುಹಂಚಿಕೆಯಾದ ಅನುದಾನ ಯಾವ ಉದ್ದೇಶಕ್ಕೆ ಬಳಕೆ ಆಗಿದೆ ; (ವಿವರಗಳನ್ನು ನೀಡುವುದು)

(ಈ) ೨೦೨೫-೨೬ರ ಆಯವ್ಯಯದಲ್ಲಿ ನಗರಾಭಿವೃದ್ಧಿಯಲ್ಲಿ, ಬೆಂಗಳೂರು ನಗರದ ಮೂಲಸೌಲಭ್ಯ ಅಭಿವೃದ್ದಿಗೆ ರೂ. ೭,೦೦೦

ಕೋಟಿ ಅನುದಾನವನ್ನು ನೀಡಲಾಗಿದ್ದು, ಈ ಅನುದಾನದಲ್ಲಿ ಡಿಸೆಂಬರ್–೨೦೨೫ರವರೆಗೆ ಎಷ್ಟು ಅನುದಾನ ಬಿಡುಗಡೆಯಾಗಿದೆ ; ಈ ಅನುದಾನದಲ್ಲಿ ಎಷ್ಟು ಹಣ ಬಳಕೆಯಾಗಿದೆ ; ಯಾವ ಮೂಲಸೌಲಭ್ಯಗಳ ಅಭಿವೃದ್ಧಿಗೆ ಈ ಹಣ ಬಳಸಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## GBA/BBMP ಗೆ ಬಿಡುಗಡೆಯಾದ ಅನುದಾನ ಮತ್ತು ಬಳಕೆ ಮಾಡಿರುವ ಅನುದಾನದ ಕುರಿತು

**ಶ್ರೀ ಕೇಶವ ಪ್ರಸಾದ್.ಎಸ್ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೬ (೩೧೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪, ೨೦೨೪–೨೫ ಮತ್ತು ೨೦೨೫–೨೬ನೇ ಸಾಲಿನಲ್ಲಿ GBA/BBMP ಗೆ ಮೀಸಲಿಟ್ಟ ಅನುದಾನವೆಷ್ಟು; ಬಿಡುಗಡೆಗೊಳಿಸಿದ ಅನುದಾನವೆಷ್ಟು ; ವೆಚ್ಚವಾದ ಅನುದಾನವೆಷ್ಟು; ಸಂಪೂರ್ಣ ಮಾಹಿತಿ ನೀಡುವುದು ;

(ಆ) ಸದರಿ ಆರ್ಥಿಕ ವರ್ಷಗಳಲ್ಲಿ ಮೀಸಲಿಟ್ಟ ಅನುದಾನದಲ್ಲಿ GBA/ BBMP ಯು ಯಾವ ಯಾವ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿದೆ ; ಎಷ್ಟು ಮೊತ್ತವನ್ನು ಬಳಕೆ ಮಾಡಿದೆ ; ಕಾಮಗಾರಿಗಳಿಗೆ ನೀಡಲಾದ ಅನುದಾನದ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಕಳೆದ ೩ ವರ್ಷಗಳಲ್ಲಿ GBA/BBMP ಯು ಎಷ್ಟು ರಸ್ತೆಗಳನ್ನು, ಚರಂಡಿಗಳನ್ನು ನಿರ್ಮಾಣ ಮಾಡಿದೆ ; ಬಳಕೆ ಮಾಡಿರುವ ಮೊತ್ತವೆಷ್ಟು ; ಕಸ ನಿರ್ವಹಣೆಗೆ ಮೀಸಲಿಟ್ಟ ಮತ್ತು ಬಳಕೆಯಾದ ಅನುದಾನವೆಷ್ಟು ; ಯಾವ ಕಂಪನಿಗಳಿಗೆ ಪಾವತಿಸಲಾಗಿದೆ ;

(ಈ) ಕಳೆದ ಮೂರು ಆರ್ಥಿಕ ವರ್ಷಗಳಲ್ಲಿ GBA/BBMP ಯ ವ್ಯಾಪ್ತಿಯಲ್ಲಿ ವರದಿಯಾದ ರಸ್ತೆಗುಂಡಿಗಳ ಸಂಖ್ಯೆ ಎಷ್ಟು ; ಎಷ್ಟು ರಸ್ತೆ ಗುಂಡಿಗಳನ್ನು ಮುಚ್ಚಲಾಗಿದೆ ; ಎಷ್ಟು ಮೊತ್ತವನ್ನು ರಸ್ತೆಗುಂಡಿಗಳ ಮುಚ್ಚುವುದಕ್ಕಾಗಿ ಮೀಸಲಿಡಲಾಗಿದೆ ; ಇಲ್ಲಿಯವರೆಗೆ ಎಷ್ಟು ಮೊತ್ತವನ್ನು ವೆಚ್ಚ ಮಾಡಲಾಗಿದೆ ; ಆರ್ಥಿಕ ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು ?

## ರಾಜ್ಯದ ಅಣೆಕಟ್ಟುಗಳ ಕುರಿತು

**ಶ್ರೀ ಕೇಶವ ಪ್ರಸಾದ್.ಎಸ್ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೭ (೨೮೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಬೃಹತ್, ಮಧ್ಯಮ ಹಾಗೂ ಸಣ್ಣ ಗಾತ್ರದ ಅಣೆಕಟ್ಟುಗಳಿವೆ ; ಅವುಗಳನ್ನು ಯಾವಾಗ ನಿರ್ಮಿಸಲಾಗಿತ್ತು ಮತ್ತು ಅವುಗಳ (ಲೈಫ್ ಸ್ಪಾನ್) ಜೀವಿತಾವಧಿ ಎಷ್ಟು ;

(ಆ) ರಾಜ್ಯದ ಅಣೆಕಟ್ಟುಗಳ ಒಟ್ಟು ಸ್ಥಾಪಿತ (ಇನ್ ಸ್ಟಾಲ್ ಕೆಪಾಸಿಟಿ) ಸಾಮರ್ಥ್ಯವೆಷ್ಟು ; ಹೂಳು ತುಂಬಿರುವ ಕಾರಣ ಕಡಿಮೆಯಾಗಿರುವ ಸಾಮರ್ಥ್ಯವನ್ನು ಪರಿಶೀಲಿಸಲಾಗಿದೆಯೇ ; ಹೂಳಿನಿಂದಾಗಿ ಪ್ರಸ್ತುತ ಎಷ್ಟು ಅಣೆಕಟ್ಟುಗಳ ಸಾಮರ್ಥ್ಯ ಎಷ್ಟು ಪ್ರತಿಶತ ಕಡಿಮೆಯಾಗಿದೆ;

(ಇ) ಹೆಚ್ಚು ಹೂಳು ತುಂಬಿಸುವ ಅಣೆಕಟ್ಟುಗಳ ಹೂಳನ್ನು ತೆಗೆಯುವ ಬಗ್ಗೆ ಯಾವ ಕ್ರಮಗಳನ್ನು ಅನುಸರಿಸಲಾಗುತ್ತಿದೆ ;

(ಈ) ಅಣೆಕಟ್ಟು ಕ್ರೆಸ್ಟ್ ಗೇಟುಗಳು, ಕಾಲುವೆಗಳು ಮತ್ತಿತರ ಯಾವುದೇ ಪರಿಕರಗಳ ಸುರಕ್ಷತೆಯನ್ನು ಖಾತರಿಪಡಿಸಿಕೊಳ್ಳಲಾಗುತ್ತಿದೆಯೇ; ಹಳೆಯದಾದ ಅಣೆಕಟ್ಟುಗಳಲ್ಲಿ ನೀರು ಕಡಿಮೆ ಇರುವ ಸಂದರ್ಭದಲ್ಲಿ ಹೂಳು ತೆಗೆಯುವ, ಕ್ರೆಸ್ಟ್‌ಗಳನ್ನು ಉನ್ನತೀಕರಿಸುವ ಬಗ್ಗೆ ಸರ್ಕಾರ ಯೋಚಿಸಿದೆಯೇ ;

(ಉ) ಅಣೆಕಟ್ಟುಗಳ ನಿರ್ವಹಣೆ ಮತ್ತು ಸುರಕ್ಷತೆ ಕುರಿತು ವರದಿಯನ್ನು ತಯಾರಿಸಲು ಯಾವುದಾದರೂ ತಾಂತ್ರಿಕ ಸಂಸ್ಥೆಯನ್ನು ಸರ್ಕಾರ ಗೊತ್ತುಪಡಿಸಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ?

## ಬೆಂಗಳೂರು ನಗರದಲ್ಲಿ ಸುರಂಗ ರಸ್ತೆ ನಿರ್ಮಾಣದ ಕುರಿತು

**ಶ್ರೀ ಕೇಶವ ಪ್ರಸಾದ್.ಎಸ್ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೮ (೨೯೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಭೂಗತ ಸುರಂಗ ರಸ್ತೆ ನಿರ್ಮಾಣಕ್ಕೆ ಸಚಿವ ಸಂಪುಟ ಅನುಮೋದನೆ ನೀಡಿದೆಯೇ ; ಯೋಜನೆಗೆ ಡಿ.ಪಿ.ಆರ್. ಸಿದ್ಧಪಡಿಸಲು ಯಾವ ಸಂಸ್ಥೆಗೆ ನೀಡಲಾಗಿದೆ ; ಈ ಸಂಸ್ಥೆಗೆ ನೀಡಿರುವ ಹಣ ಎಷ್ಟು ; ಸಂಸ್ಥೆ ವರದಿ ಸಲ್ಲಿಸಿದೆಯೇ; ವರದಿಯ ಪ್ರಮುಖ ಅಂಶಗಳೇನು ;

(ಆ) ಯೋಜನೆಗೆ ಅಗತ್ಯವಿರುವ ಸರ್ಕಾರಿ ಭೂಮಿ ಲಭ್ಯವಿದೆಯೇ ; ಖಾಸಗಿ ಭೂಮಿ ಸ್ವಾಧೀನಪಡಿಸಿಕೊಳ್ಳುವ ಅಗತ್ಯತೆ ಇದೆಯೇ ; ಖಾಸಗಿ ಭೂಮಿಗೆ ನಿಗದಿಪಡಿಸಿರುವ ಭೂ ಪರಿಹಾರ ಮೊತ್ತ ಎಷ್ಟು ; ಭೂ ಸ್ವಾಧೀನ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಇ) ಯೋಜನೆಯಿಂದ ಪರಿಸರದ ಮೇಲೆ ಆಗುವ ಪರಿಣಾಮಗಳ ಕುರಿತು ಅಧ್ಯಯನ ನಡೆದಿದೆಯೇ ; ಯೋಜನೆಗೆ ಮಣ್ಣಿನ ಪರೀಕ್ಷೆ ಆಗಿದೆಯೇ ; (ವಿವರ ನೀಡುವುದು)

(ಈ) ಡಿ.ಪಿ.ಆರ್. ಅನ್ವಯ ಯೋಜನೆಯ ಅಂದಾಜು ವೆಚ್ಚ ಎಷ್ಟು ; ಪ್ರತಿ ಕಿ.ಮೀ. ಸುರಂಗ ರಸ್ತೆ ನಿರ್ಮಾಣಕ್ಕೆ ಆಗುವ ವೆಚ್ಚ ಎಷ್ಟು; ಯೋಜನೆಗೆ ಅಗತ್ಯವಿರುವ ಹಣವನ್ನು ಯಾವ ಮೂಲದಿಂದ ಸಂಗ್ರಹಿಸಲಾಗುವುದು ; ಸರ್ಕಾರ ಬಿಡುಗಡೆ ಮಾಡಿರುವ ಹಣ ಎಷ್ಟು ; ಸರ್ಕಾರ ಪ್ರಸಕ್ತ ಸಾಲಿನಲ್ಲಿ ಎಷ್ಟು ಹಣವನ್ನು ಸುರಂಗ ಮಾರ್ಗದ ಕಾರ್ಯಕ್ಕೆ ಖರ್ಚು ಮಾಡಲಿದೆ ;

(ಉ) ಸುರಂಗ ರಸ್ತೆ ನಿರ್ಮಾಣಕ್ಕೆ ಟೆಂಡರ್ ಕರೆಯಾಲಾಗಿದೆಯೇ ; ಟೆಂಡರ್‌ನಲ್ಲಿ ಭಾಗವಹಿಸಿರುವ ಕಂಪನಿಗಳು ಯಾವುವು ; ಟೆಂಡರ್ ಪ್ರಕ್ರಿಯೆ ಯಾವ ಹಂತದಲ್ಲಿದೆ ? (ಯೋಜನೆಯ ಹಾಲಿ ಸ್ಥಿತಿಗತಿ ವಿವರ ನೀಡುವುದು)

## 'ಸ್ತ್ರೀಶಕ್ತಿ' ಸಂಘಗಳಿಗೆ ಶೂನ್ಯ ಬಡ್ಡಿ ದರದ ಸಾಲ ಯೋಜನೆ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೯ (೨೯೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ 'ಸ್ತ್ರೀಶಕ್ತಿ' ಸಂಘಗಳ ಮೂಲಕ ನೀಡಲಾಗುತ್ತಿರುವ ಶೂನ್ಯ ಬಡ್ಡಿ ದರದ ಸಾಲದ ಯೋಜನೆಯು ಪ್ರಸ್ತುತ ಸ್ಥಗಿತಗೊಂಡಿದೆಯೇ ;

(ಆ) ಹೌದಾದಲ್ಲಿ, ಈ ಸಂಘಗಳಿಗೆ ಪುನಃ ಸಾಲ ಸೌಲಭ್ಯ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಸಹಕಾರಿ ಬ್ಯಾಂಕುಗಳಲ್ಲಿ ರೈತರು ಇಟ್ಟಿರುವ ಅಡಮಾನದ ಚಿನ್ನವನ್ನು ಹರಾಜು ಮಾಡದಂತೆ ಸರ್ಕಾರ ಯಾವುದೇ ಅಧಿಕೃತ ಆದೇಶ ಹೊರಡಿಸಿದೆಯೇ ? (ಸಂಪೂರ್ಣ ವಿವರ ನೀಡುವುದು)

## ಕಾಗಿಣಾ ಮತ್ತು ಭೀಮಾ ನದಿ ಮೂಲದ ಯೋಜನೆಗಳ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೦ (೨೯೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ಚಿಂಚೋಳಿ ಮತ್ತು ಸೇಡಂ ತಾಲ್ಲೂಕುಗಳಿಗೆ ಅನುಕೂಲವಾಗುವ ರೂ.505 ಕೋಟಿ ಮೊತ್ತದ 'ಕಾಗಿಣಾ ಏತ

ನೀರಾವರಿ ಯೋಜನೆ'ಯ ವಿಸ್ತ್ರತ ಯೋಜನಾ ವರದಿ (DPR) ಸಿದ್ಧವಾಗಿದೆಯೇ ;

(ಆ) ಈ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಿ, ಕಾಮಗಾರಿ ಪ್ರಾರಂಭಿಸಲು ಸರ್ಕಾರ ವಿಧಿಸಿಕೊಂಡಿರುವ ಕಾಲಮಿತಿ ಏನು ;

(ಇ) ಭೀಮಾ ನಗದಿ ಅಡ್ಡಲಾಗಿ ನಿರ್ಮಿಸಲಾಗಿರುವ ಬ್ಯಾರೇಜ್‌ಗಳ ನಿರ್ವಹಣೆ ಇಲ್ಲದೆ ನೀರು ವ್ಯರ್ಥವಾಗುತ್ತಿರುವುದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸೈಬಲ್ ಅಪರಾಧ ಮತ್ತು ಆರ್ಥಿಕ ವಂಚನೆ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೧ (೨೯೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ದಾಖಲಾದ ಸೈಬರ್ ಅಪರಾಧ ಪ್ರಕರಣಗಳ ಸಂಖ್ಯೆ ಎಷ್ಟು ; (ವರ್ಷವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಪ್ರಕರಣಗಳಲ್ಲಿ ಸಾರ್ವಜನಿಕರು ಕಳೆದುಕೊಂಡ ಒಟ್ಟು ಮೊತ್ತ ಎಷ್ಟು ಮತ್ತು ಅದರಲ್ಲಿ ಎಷ್ಟು ಮೊತ್ತವನ್ನು ಪೋಲೀಸರು ಯಶಸ್ವಿಯಾಗಿ ವಾಪಸ್ ಕೊಡಿಸಿದ್ದಾರೆ ;

(ಇ) ಸೈಬರ್ ಅಪರಾಧಗಳ ಪತ್ತೆ ಹಚ್ಚುವಿಕೆ ದರ (Detection Rate) ಕಡಿಮೆಯಾಗಲು ಕಾರಣಗಳೇನು ; ಇದನ್ನು ಸುಧಾರಿಸಲು ಇಲಾಖೆ ಕೈಗೊಂಡಿರುವ ವಿಶೇಷ ಕ್ರಮಗಳೇನು ?

## ಕಲಬುರಗಿ ಬುದ್ಧ ವಿಹಾರ ಪ್ರವಾಸಿಗರಿಗೆ ಅನುಕೂಲತೆಗಳ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೨ (೨೯೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿಯ ಪ್ರಮುಖ ಪ್ರವಾಸಿ ಆಕರ್ಷಣೆಯಾದ ಬುದ್ಧ ವಿಹಾರಕ್ಕೆ (Buddha Vihara) ಭೇಟಿ ನೀಡುವ ಪ್ರವಾಸಿಗರ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಲ್ಲಿಗೆ ಬರುವ ಪ್ರವಾಸಿಗರಿಗಾಗಿ ಸುಸಜ್ಜಿತ ಯಾತ್ರಿ ನಿವಾಸ ಮತ್ತು ಮಾಹಿತಿ ಕೇಂದ್ರ ಸ್ಥಾಪಿಸುವ ಕಾರ್ಯ ಯಾವ ಹಂತದಲ್ಲಿದೆ ?

## "ಓಂ ಶಕ್ತಿ" ಮೆರವಣಿಗೆ ಸಂದರ್ಭದಲ್ಲಿ ನಡೆದ ದುರ್ಘಟನೆ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೩ (೨೯೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಬೆಂಗಳೂರು ನಗರದ ಚಾಮರಾಜಪೇಟೆಯ ಜೆ.ಜೆ.ನಗರ (ವಿ.ಎಸ್.ಗಾರ್ಡನ್) ಪ್ರದೇಶದಲ್ಲಿ "ಓಂ ಶಕ್ತಿ" ಮೆರವಣಿಗೆ ಸಾಗುವ ಸಂದರ್ಭದಲ್ಲಿ ಕಿಡಿಗೇಡಿಗಳು ಕಲ್ಲು ತೂರಾಟ ನಡೆಸಿ, ಮಹಿಳೆಯರು ಮತ್ತು ಮಕ್ಕಳಿಗೆ ಗಾಯಗೊಳಿಸಿರುವ ಘಟನೆಯು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಘಟನೆಗೆ ಸಂಬಂಧಿಸಿದಂತೆ ಈವರೆಗೆ ದಾಖಲಾಗಿರುವ ಎಫ್.ಐ.ಆರ್ (FIR) ಸಂಖ್ಯೆ ಎಷ್ಟು ಈ ಪ್ರಕರಣದಲ್ಲಿ ಬಂಧಿಸಲಾಗಿರುವ ಅಥವಾ ವಶಕ್ಕೆ ಪಡೆಯಲಾಗಿರುವ ಆರೋಪಿಗಳ

ಸಂಖ್ಯೆ ಎಷ್ಟು ಮತ್ತು ಅವರ ವಿರುದ್ಧ ಕೈಗೊಂಡಿರುವ ಕಾನೂನು ಕ್ರಮಗಳೇನು ; (ವಿವರ ನೀಡುವುದು)

(ಇ) ರಾಜ್ಯದ ಗುಪ್ತಚರ (Intelligence) ವ್ಯವಸ್ಥೆಯು ಇಂತಹ ಸಂವೇದನಾಶೀಲ ಘಟನೆಗಳನ್ನು ಮುಂಚಿತವಾಗಿ ಪತ್ತೆಹಚ್ಚಿ ತಡೆಯುವಲ್ಲಿ ವಿಫಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ವೈಫಲ್ಯಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಈ) ಚಾಮರಾಜಪೇಟೆ ಹಾಗೂ ಜೆ.ಜೆ.ನಗರದಂತಹ ಸೂಕ್ಷ್ಮ ಪ್ರದೇಶಗಳಲ್ಲಿ ನಿರಂತರವಾಗಿ ಕಾನೂನು ಮತ್ತು ಸುವ್ಯವಸ್ಥೆ ಹದಗೆಡುತ್ತಿದ್ದು, ಅಲ್ಲಿನ ನಿವಾಸಿಗಳಿಗೆ ಪೊಲೀಸರಿಂದ ಸೂಕ್ತ ರಕ್ಷಣೆ ಮತ್ತು ಸಹಕಾರ ದೊರೆಯುತ್ತಿಲ್ಲ ಎಂಬ ದೂರುಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ; ಅಲ್ಲಿನ ಜನರ ಸುರಕ್ಷತೆಗಾಗಿ ಸರ್ಕಾರ ಕೈಗೊಂಡಿರುವ ವಿಶೇಷ ಕ್ರಮಗಳೇನು ;

(ಉ) ಧಾರ್ಮಿಕ ಮೆರವಣಿಗೆಗಳ ಮೇಲೆ ಕಲ್ಲು ತೂರಾಟದಂತಹ ಘಟನೆಗಳು ಮರುಕಳಿಸದಂತೆ ತಡೆಯಲು ಸದರಿ ಪ್ರದೇಶಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳ ಅಳವಡಿಕೆ ಪೊಲೀಸ್ ಬಲವರ್ಧನೆ (Police Strengthening) ಹಾಗೂ ಸೂಕ್ಷ್ಮ ಸಂವೇದನಾ ಪ್ರದೇಶಗಳೆಂದು ಗುರುತಿಸಿ ವಿಶೇಷ ಭದ್ರತೆ ಒದಗಿಸಲು ಸರ್ಕಾರ ಬದ್ಧವಾಗಿದೆಯೇ ; ಇದ್ದಲ್ಲಿ, ಅದರ ಸಂಪೂರ್ಣ ಕ್ರಿಯಾ ಯೋಜನೆಯನ್ನು ನೀಡುವುದು ?

## ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೪ (೨೯೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕರಾವಳಿ ಸುಮಾರು ೩೨೦ ಕಿ.ಮೀ. ಉದ್ದ ಹೊಂದಿದ್ದು, ಇಲ್ಲಿ ಹೊಸ ಬಗೆಯ ಪ್ರವಾಸಿ ಆಕರ್ಷಣೆಗಳಿಗೆ ಪೂರಕವಾದ ಭೌಗೋಳಿಕ, ಧಾರ್ಮಿಕ, ಸಾಂಸ್ಕೃತಿಕ ಹಾಗೂ ಪಾರಂಪರಿಕ ಹಿನ್ನೆಲೆಯನ್ನು ಹೊಂದಿರುವ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿಗೆ ಹೇರಳ ಅವಕಾಶಗಳಿರುವ ಕರಾವಳಿಯ ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ರೂಪಿಸಿರುವ ಯೋಜನೆಗಳೇನು ;

(ಆ) ಧಾರ್ಮಿಕ, ಜೈವಿಕ ಪರಿಸರ ಮತ್ತು ಬೀಚ್‌ಗಳ ಅಭಿವೃದ್ಧಿಗೆ ಪೂರಕವಾಗಿ ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿಪಡಿಸಬೇಕಾಗಿದ್ದು, ಈ ಕುರಿತು ಸರ್ಕಾರ ರೂಪಿಸಿರುವ ಯೋಜನೆಗಳೇನು ;

(ಇ) ಕರಾವಳಿಯಲ್ಲಿ ಸುಮಾರು ೨೨ ಬೀಚ್ ಹಾಗೂ ೩೦ಕ್ಕೂ ಹೆಚ್ಚು ಪ್ರಮುಖ ಧಾರ್ಮಿಕ ಕೇಂದ್ರಗಳಿಗೆ ಹಾಗೂ ಪ್ರವಾಸೋದ್ಯಮಕ್ಕೆ ವಿಫುಲ ಅವಕಾಶಗಳಿರುವುದರಿಂದ ಪರಿಸರಕ್ಕೆ ಪೂರಕವಾದ ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕಾಗಿದ್ದು, ಕರಾವಳಿಗೆ ಪ್ರತ್ಯೇಕ ಪ್ರವಾಸೋದ್ಯಮ ನೀತಿ ರೂಪಿಸಿ, ಅಭಿವೃದ್ಧಿಪಡಿಸಲು ಸರ್ಕಾರ ಕೂಡಲೇ ಅಗತ್ಯ ಕ್ರಮ ವಹಿಸುವುದೇ ?

## ಮಾದಕ ವಸ್ತುಗಳ ಮಾರಾಟ ಪ್ರಕರಣಗಳ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೫ (೨೯೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಾದಕ ವಸ್ತುಗಳ ತಯಾರಿಕೆ, ಬಳಕೆ, ಸಂಗ್ರಹ ಮತ್ತು ಕಳ್ಳಸಾಗಣೆ ಅವ್ಯಾಹತವಾಗಿ ಮತ್ತು ನಿರಂತರವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅನೇಕ ಯುವಕ, ಯುವತಿಯರು ಮಾದಕ ವ್ಯಸನದ ಸುಳಿಗೆ ಸಿಲುಕಿ ತಮ್ಮ ಜೀವನ ಹಾಳು ಮಾಡಿಕೊಳ್ಳುತ್ತಿದ್ದರೂ ಸರ್ಕಾರವು ಡ್ರಗ್ ಮಾಫಿಯಾವನ್ನು ತಡೆಗಟ್ಟಲು ಸಂಪೂರ್ಣವಾಗಿ ವಿಫಲವಾಗಿದೆ ಎನ್ನುವ ಅಸಮಾಧಾನ ಹಲವಾರು ಪೋಷಕರಲ್ಲಿ ಇದ್ದು, ಡ್ರಗ್ ಮಾಫಿಯಾವನ್ನು ತಡೆಗಟ್ಟಲು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ;

(ಇ) ದಕ್ಷಿಣ ಕನ್ನಡ ಜಿಲ್ಲೆಯ ವಿವಿಧ ಉನ್ನತ ಹಾಗೂ ವೃತ್ತಿ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳು ಬಹಳ ಸುಲಭವಾಗಿ ವ್ಯಾಪಕವಾಗಿ ಮತ್ತು ನಿರಂತರವಾಗಿ ಸಿಗುತ್ತಿವೆ ಎಂಬ ಮಾತುಗಳು ಪದೇ ಪದೇ ಕೇಳಿ ಬರುತ್ತಿದ್ದು, ಇದನ್ನು ತಡೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಕಳೆದ ೩ ವರ್ಷಗಳಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಡ್ರಗ್ಸ್ ಕಳ್ಳಸಾಗಣೆ ಮತ್ತು ಮಾರಾಟದ ಎಷ್ಟು ಪ್ರಕರಣಗಳು ದಾಖಲಾಗಿವೆ ಮತ್ತು ಆ ಪ್ರಕರಣಗಳಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಸದರಿ ಪ್ರಕರಣಗಳಲ್ಲಿ ಎಷ್ಟು ಡ್ರಗ್ಸ್ ಪೆಡ್ಲರ್ಸ್‌ಗಳಿಗೆ ಇದುವರೆಗೆ ಶಿಕ್ಷೆ ಆಗಿದೆ ? (ವಿವರ ನೀಡುವುದು)

## ಕಾಲುವೆ ನಿರ್ಮಾಣ ಮಾಡುವ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೬ (೭೯) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕಿನ ಕೊಡಂಗೆ ಬೈಲಿನಿಂದ ಅರ್ಕಿಜೆ ಬೈಲಿನವರೆಗೆ ಬಹಳ ಹಿಂದಿನಿಂದ ಕೃಷಿ ವ್ಯವಸ್ಥೆಗಾಗಿ ಅಣೆಕಟ್ಟೆಯಿಂದ ಸಾಂಪ್ರದಾಯಿಕ ತೋಡಿನ ಮುಖಾಂತರ ಸುಮಾರು ೪೦ ಕುಟುಂಬಗಳ ಜಮೀನುಗಳಿಗೆ ಕೃಷಿ

ಚಟುವಟಿಕೆಗಳಿಗೆ ನೀರಿನ ವ್ಯವಸ್ಥೆ ಕಲ್ಪಿಸಲಾಗಿದ್ದು, ಈಗ ಸದರಿ ಜಮೀನುಗಳಿಗೆ ನೀರು ಪೂರೈಕೆಯಲ್ಲಿ ಸಂಪೂರ್ಣ ವ್ಯತ್ಯಯವಾಗಲಿದ್ದು, ಪ್ರಸ್ತುತ ಪರಿಣಾಮಕಾರಿಯಾಗಿ ಹಾಗೂ ವ್ಯವಸ್ಥಿತವಾಗಿ ಸದರಿ ಜಮೀನುಗಳಿಗೆ ನೀರು ಪೂರೈಕೆಯಾಗಲು ತುರ್ತಾಗಿ ಕಾಲುವೆ ನಿರ್ಮಾಣ ಮಾಡಲೇಬೇಕಾದ ತುರ್ತು ಅನಿವಾರ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದುವರೆಗೆ ಸದರಿ ಕಾಲುವೆ ನಿರ್ಮಾಣ ಮಾಡಲು ಅಗತ್ಯ ಕ್ರಮ ವಹಿಸದಿರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ ಸುಮಾರು ೪೦ ಕುಟುಂಬಗಳ ಜಮೀನುಗಳಿಗೆ ಕೃಷಿ ಚಟುವಟಿಕೆಗಳಿಗೆ ಅಣೆಕಟ್ಟೆಯಿಂದ ನೀರಿನ ವ್ಯವಸ್ಥೆ ಕಲ್ಪಿಸಲು ಸದರಿ ಕಾಲುವೆ ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು ?

## ಕ್ರೀಡಾ ಹಾಸ್ಟೆಲ್‌ಗಳ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೭ (೩೦೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಒಟ್ಟು ಎಷ್ಟು ಕ್ರೀಡಾ ಹಾಸ್ಟೆಲ್‌ಗಳು ಕಾರ್ಯನಿರ್ವಹಿಸುತ್ತಿವೆ ;

(ಆ) ಸದರಿ ಎಲ್ಲಾ ಕ್ರೀಡಾ ಹಾಸ್ಟೆಲ್‌ಗಳು ಸ್ವಂತ ಕಟ್ಟಡ ಹಾಗೂ ಅವುಗಳಲ್ಲಿ ಎಲ್ಲಾ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆಯೇ ;

(ಇ) ಸದರಿ ಕ್ರೀಡಾ ಹಾಸ್ಟೆಲ್‌ಗಳಲ್ಲಿ ಪ್ರಸ್ತುತ ಇರುವ ದಾಖಲಾತಿ ಸಾಮರ್ಥ್ಯವೆಷ್ಟು ಹಾಗೂ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಪ್ರತಿ ಹಾಸ್ಟೆಲ್‌ನ ವಿವರ ಪ್ರತ್ಯೇಕವಾಗಿ ನೀಡುವುದು)

(ಈ) ಸದರಿ ಕ್ರೀಡಾ ಹಾಸ್ಟೆಲ್‌ಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳಿಗೆ ದೊರೆಯುತ್ತಿರುವ ಸೌಲಭ್ಯಗಳು ಯಾವುವು ;

(ಉ) ಸರ್ಕಾರ ೨೦೨೬–೨೭ನೇ ಸಾಲಿಗೆ ಸದರಿ ಕ್ರೀಡಾ ಹಾಸ್ಟೆಲ್‌ಗಳಲ್ಲಿ ಪ್ರಸ್ತುತ ಇರುವ ದಾಖಲಾತಿ ಸಾಮರ್ಥ್ಯವನ್ನು ಬೇಡಿಕೆಗನುಗುಣವಾಗಿ ಮತ್ತಷ್ಟು ಹೆಚ್ಚಿಸಲು ಅಗತ್ಯ ಕ್ರಮ ವಹಿಸುವುದೇ ?

## ಭದ್ರತಾ ಠೇವಣಿ ಮರು ಪಾವತಿ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೮ (೩೦೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಹಣಕಾಸು/ಗಿರವಿ/ಲೇವಾದೇವಿ ಸಂಸ್ಥೆಗಳನ್ನು ಪ್ರಾರಂಭಿಸುವಾಗ ಹಲವು ಸಂಸ್ಥೆಗಳು ಭದ್ರತಾ ಠೇವಣಿಯನ್ನು ಸರ್ಕಾರಕ್ಕೆ ಪಾವತಿಸಿದ್ದು, ಸದರಿ ಸಂಸ್ಥೆಗಳು ತಮ್ಮ ವ್ಯವಹಾರವನ್ನು ಮುಕ್ತಾಯಗೊಳಿಸಿ ಭದ್ರತಾ ಠೇವಣಿಯನ್ನು ಹಿಂತಿರುಗಿಸುವಂತೆ ಸಂಬಂಧಿಸಿದ ಸಹಕಾರ ಸಂಘಗಳ ಉಪ/ಸಹಾಯಕ ನಿಬಂಧಕರಿಗೆ ಅರ್ಜಿ ಸಲ್ಲಿಸಿ ಹಲವು ವರ್ಷಗಳೇ ಕಳೆದಿದ್ದರೂ, ಅವರಿಗೆ ಇದುವರೆಗೆ ಭದ್ರತಾ ಠೇವಣಿ ಮರು ಪಾವತಿಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಭದ್ರತಾ ಠೇವಣಿಯನ್ನು ಹಿಂತಿರುಗಿಸುವಂತೆ ಎಷ್ಟು ಸಂಸ್ಥೆಗಳು, ಯಾವ ದಿನಾಂಕದಂದು ಅರ್ಜಿ ಸಲ್ಲಿಸಿದ್ದಾರೆ ಮತ್ತು ಅರ್ಜಿ ಸಲ್ಲಿಸಿರುವ ಪ್ರತಿ ಸಂಸ್ಥೆಗೆ ಮರು ಪಾವತಿಯಾಗಬೇಕಾಗಿರುವ ಮೊತ್ತವೆಷ್ಟು ; (ಪ್ರತಿ ಸಂಸ್ಥೆಯ ವಿವರಗಳನ್ನು ಪ್ರತ್ಯೇಕವಾಗಿ ನೀಡುವುದು)

(ಇ) ಸದರಿ ಭದ್ರತಾ ಠೇವಣಿಯುನ್ನು ಹಿಂತಿರುಗಿಸುವಂತೆ ಕೋರಿರುವವರಿಗೆ ಮರು ಪಾವತಿ ಮಾಡಲು ಸರ್ಕಾರ ಇದುವರೆಗೆ ತೆಗೆದುಕೊಂಡ ಕ್ರಮವೇನು ;

(ಈ) ಯಾವ ಕಾಲಮಿತಿಯೊಳಗೆ ಸದರಿ ಸಂಸ್ಥೆಗಳ ಭದ್ರತಾ ಠೇವಣಿಯನ್ನು ಮರುಪಾವತಿ ಮಾಡಲಾಗುವುದು ?

## ಆಡಳಿತ ಸುಧಾರಣೆ ಮತ್ತು ತಂತ್ರಜ್ಞಾನ ವಿಸ್ತರಣೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೯ (೩೦೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) 'ಜನಸೇವಕ' ಮತ್ತು 'ಕರ್ನಾಟಕ ಒನ್' ಯೋಜನೆಗಳನ್ನು ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ವಿಸ್ತರಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ ;

(ಆ) ಸರ್ಕಾರಿ ಕಛೇರಿಗಳಲ್ಲಿ ಭ್ರಷ್ಟಾಚಾರ ತಡೆಗಟ್ಟಲು ಮತ್ತು ಪಾರದರ್ಶಕತೆ ತರಲು 'ಇ–ಆಫೀಸ್' (e-office) ವ್ಯವಸ್ಥೆಯನ್ನು ಶೇ.೧೦೦ ರಷ್ಟು ಜಾರಿಗೊಳಿಸಲಾಗಿದೆಯೇ ;

(ಇ) 'ಸಕಾಲ' ಯೋಜನೆಯಡಿ ಸಾರ್ವಜನಿಕರಿಗೆ ಸೇವೆ ನೀಡುವಲ್ಲಿ ವಿಳಂಬವಾಗುತ್ತಿರುವುದನ್ನು ತಪ್ಪಿಸಲು ಕೈಗೊಂಡಿರುವ ಕ್ರಮಗಳೇನು ?

## ಕೃಷಿ ಸಾಲ ಮನ್ನಾ ಮತ್ತು ಬಡ್ಡಿ ರಿಯಾಯಿತಿ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೦ (೩೦೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಶೂನ್ಯ ಬಡ್ಡಿ ದರದ (Zero Percent interest) ಅಲ್ಪಾವಧಿ ಕೃಷಿ ಸಾಲದ ಮಿತಿ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಕಳೆದ ಮೂರು ವರ್ಷಗಳಲ್ಲಿ ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ಹಾನಿಗೊಳಗಾದ ರೈತರ ಎಷ್ಟು ಮೊತ್ತದ ಸಾಲವನ್ನು ಮನ್ನಾ ಮಾಡಲಾಗಿದೆ ಅಥವಾ ಮರು ಪಾವತಿ ಅವಧಿಯನ್ನು ವಿಸ್ತರಿಸಲಾಗಿದೆ ;

(ಇ) ಸಾಲ ಮನ್ನಾ ಯೋಜನೆಯಡಿ ಬಾಕಿ ಇರುವ ಅನುದಾನದವನ್ನು ಸರ್ಕಾರವು ಸಹಕಾರ ಬ್ಯಾಂಕುಗಳಿಗೆ ಯಾವಾಗ ಬಿಡುಗಡೆ ಮಾಡಲಿದೆ ?

## ಮಾದಕ ದ್ರವ್ಯ ಜಾಲದ ವಿರುದ್ಧ ಕ್ರಮ ಕುರಿತು

**ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೧ (೩೦೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಾದಕ ದ್ರವ್ಯ ಜಾಲವನ್ನು ಮಟ್ಟಹಾಕಲು ಕಳೆದ ಒಂದು ವರ್ಷದಲ್ಲಿ ಎಷ್ಟು ದಾಳಿಗಳನ್ನು ನಡೆಸಲಾಗಿದೆ ;

(ಆ) ಡ್ರಗ್ಸ್ ವ್ಯವಹಾರದಲ್ಲಿ ತೊಡಗಿರುವವರ ಆಸ್ತಿ ಮುಟ್ಟುಗೋಲು ಅಥವಾ ಅವರು ವಾಸಿಸುವ ಬಾಡಿಗೆ ಕಟ್ಟಡಗಳ ವಿರುದ್ಧ ಕ್ರಮ ಜರುಗಿಸವ ಬಗ್ಗೆ ಸರ್ಕಾರದ ನೀತಿ ಏನು ;

(ಇ) ಈ ಹಗರಣಗಳಲ್ಲಿ ಭಾಗಿಯಾಗಿರುವ ಎಷ್ಟು ವಿದೇಶಿ ಪ್ರಜೆಗಳನ್ನು ಈ ವರ್ಷ ಗಡಿಪಾರು ಮಾಡಲಾಗಿದೆ ?

## ಮೈಸೂರು ಜಿಲ್ಲೆಯ ಪ್ರವಾಸೋದ್ಯಮ ಅಭಿವೃದ್ಧಿ ಬಗ್ಗೆ

**ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೨ (೩೦೬) ಮಾನ್ಯ ಕಾನೂನು,ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರಿನ ಕೆ.ಆರ್.ಎಸ್(KRS) ಆವರಣದಲ್ಲಿರುವ ಬೃಂದಾವನ ಉದ್ಯಾನವನವನ್ನು ಅಂತರಾಷ್ಟ್ರೀಯ ಮಟ್ಟಕ್ಕೆ ಮೇಲ್ದರ್ಜೆಗೇರಿಸುವ 'ಡಿಸ್ನಿಲ್ಯಾಂಡ್' ಮಾದರಿಯ ಯೋಜನೆ ಅಥವಾ ನವೀಕರಣ ಕಾರ್ಯವು ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಮೈಸೂರು ವಸ್ತು ಪ್ರದರ್ಶನ ಆವರಣದಲ್ಲಿ ವರ್ಷಪೂರ್ತಿ ಪ್ರವಾಸಿ ಚಟುವಟಿಕೆಗಳನ್ನು ನಡೆಸಲು ಮತ್ತು ಅಲ್ಲಿ ಸುಸಜ್ಜಿತ ಮೂಲಸೌಕರ್ಯ ಕಲ್ಪಿಸಲು ಸರ್ಕಾರ ಮೀಸಲಿಟ್ಟ ಅನುದಾನವೆಷ್ಟು ;

(ಇ) ಮೈಸೂರಿನ ಹಿಮ್ಮಾವು ಬಳಿ ನಿರ್ಮಿಸಲು ಉದ್ದೇಶಿಸಲಾಗಿರುವ 'ಚಲನಚಿತ್ರ ನಗರಿ'(Film City) ಯೋಜನೆಯಿಂದ ಪ್ರವಾಸೋದ್ಯಮಕ್ಕೆ ಆಗುವ ಲಾಭಗಳೇನು ಮತ್ತು ಇದರ ಕಾಮಗಾರಿ ವಿಳಂಬವಾಗಲು ಕಾರಣವೇನು ;

(ಈ) ಈ ಕೇಂದ್ರ ಸರ್ಕಾರದ ಪ್ರಸಾದ್(PRASHAD) ಯೋಜನೆಯಡಿ ಚಾಮುಂಡಿ ಬೆಟ್ಟದಲ್ಲಿ ಪ್ರವಾಸಿ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲು ಬಿಡುಗಡೆಯಾದ ಅನುದಾನವೆಷ್ಟು ? (ವಿವರ ನೀಡುವುದು)

## ಅಬಕಾರಿ ಇಲಾಖೆಯಲ್ಲಿ ಭ್ರಷ್ಟಚಾರ ಮತ್ತು ವರ್ಗಾವಣೆ ಹಗರಣಗಳ ಕುರಿತು

**ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೩ (೩೦೭) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಬಕಾರಿ ಇಲಾಖೆಯಲ್ಲಿ ಇತ್ತೀಚೆಗೆ ಕೇಳಿಬಂದ 'ವರ್ಗಾವಣೆ ದಂಧೆ' ಅಥವಾ 'ಲಂಚದ ಆರೋಪ'ಗಳ ಬಗ್ಗೆ ತನಿಖೆ ನಡೆಸಲು ಸರ್ಕಾರ ಯಾವುದಾದರು ಸಮಿತಿಯನ್ನು ರಚಿಸಿದೆಯೇ ;

(ಆ) ಇಲಾಖೆಯ ಉನ್ನತ ಅಧಿಕಾರಿಗಳ ವಿರುದ್ಧ ದಾಖಲಾಗಿರುವ ಶಿಸ್ತು ಪ್ರಕರಣಗಳ ಸಂಖ್ಯೆ ಎಷ್ಟು; ಕೈಗೊಂಡ ಕ್ರಮಗಳೇನು ?

## ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳ ಕರಾವಳಿ ಪ್ರದೇಶಗಳಲ್ಲಿ ಉಪ್ಪು ನೀರಿನ ಒಳಹರಿವು ತಡೆ ಗೋಡೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೪ (೩೦೯) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳ ಕರಾವಳಿ ತೀರ ಪ್ರದೇಶದಲ್ಲಿರುವ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಮುದ್ರದ ಉಪ್ಪು ನೀರಿನ ಒಳಹರಿವು ತಡೆಗಟ್ಟಲು ಸಣ್ಣ ನೀರಾವರಿ ಇಲಾಖೆಯಿಂದ ಇದುವರೆಗೆ ಕೈಗೊಳ್ಳಲಾಗಿರುವ ಯೋಜನೆಗಳು ಯಾವುವು ; (ವಿವರ ನೀಡುವುದು)

(ಆ) ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಉಪ್ಪು ನೀರಿನ ಒಳಹರಿವು ತಡೆಗಟ್ಟುವ ಉದ್ದೇಶದಿಂದ ಉಪ್ಪು ನೀರು ತಡೆಗೋಡೆ/ಚೆಕ್‌ಡ್ಯಾಂ/ಬಂಡ್‌ಗಳ ನಿರ್ಮಾಣಕ್ಕೆ ಕೈಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ;

(ಇ) ಇವುಗಳಲ್ಲಿ ಪೂರ್ಣಗೊಂಡ ಕಾಮಗಾರಿಗಳು ಹಾಗೂ ಪ್ರಗತಿಯಲ್ಲಿರುವ ಕಾಮಗಾರಿಗಳು ಯಾವುವು ; ಇನ್ನೂ ಪ್ರಾರಂಭವಾಗದೇ ಬಾಕಿ ಇರುವ ಕಾಮಗಾರಿಗಳ ಸಂಖ್ಯೆ ಎಷ್ಟು ; ಮತ್ತು ಅವು ಬಾಕಿಯಿರಲು ಕಾರಣಗಳೇನು ;

(ಈ) ಉಪ್ಪು ನೀರಿನ ಒಳಹರಿವಿನಿಂದಾಗಿ ಕರಾವಳಿ ಪ್ರದೇಶದ ರೈತರ ಕೃಷಿ ಚಟುವಟಿಕೆಗಳಿಗೆ ತೀವ್ರ ತೊಂದರೆ ಉಂಟಾಗಿ ಅಪಾರ ಪ್ರಮಾಣದ ಕೃಷಿ ಭೂಮಿ ನಿಷ್ಪ್ರಯೋಜಕವಾಗಿ ಬಿದ್ದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರಿಂದ ಉಂಟಾಗುವ ಕೃಷಿ ನಷ್ಟವನ್ನು ತಗ್ಗಿಸಲು ಇದುವರೆಗೆ ಕೈಗೊಂಡ ಕ್ರಮಗಳೇನು ;

(ಉ) ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳ ಕರಾವಳಿ ಪ್ರದೇಶಗಳಲ್ಲಿ ಉಪ್ಪು ನೀರಿನ ಸಮ್ಯಸೆಗೆ ಶಾಶ್ವತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಸಮಗ್ರ ಹಾಗೂ ದೀರ್ಘಕಾಲೀನ ವಿಶೇಷ ಯೋಜನೆ ರೂಪಿಸುವುದನ್ನು ಪರಿಗಣಿಸಿರುವುದೇ ; ಇದ್ದಲ್ಲಿ, ಆ ಯೋಜನೆಯನ್ನು ಯಾವ ಅವಧಿಯಲ್ಲಿ ಅನುಷ್ಠಾನಗೊಳಿಸಲಾಗುವುದು ಹಾಗೂ ಅದಕ್ಕೆ ನಿಗದಿಪಡಿಸಿರುವ ಅಂದಾಜು ವೆಚ್ಚ ಎಷ್ಟು ?

## ರಾಜ್ಯದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಯಲ್ಲಿ ಹಾಗೂ ಖಾಸಗಿ ಹೂಡಿಕೆ ಪ್ರಸ್ತಾವನೆಗಳ ಅನುಮೋದನೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೫ (೩೧೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಪ್ರವಾಸೋದ್ಯಮ ನೀತಿ (Tourism Policy) ಯ ಮುಖ್ಯ ಅಂಶಗಳು ಯಾವುವು ; ಈ ನೀತಿಯಂತೆ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಆ) ಕರಾವಳಿ ಪ್ರದೇಶ ಸೇರಿದಂತೆ ನದಿ ಹಾಗೂ ಸಮುದ್ರ ತೀರ, ಚಾರಣ ಪ್ರದೇಶಗಳು, ಧಾರ್ಮಿಕ ಸ್ಥಳಗಳು, ಸಾಂಸ್ಕೃತಿಕ

ಆಚರಣೆಗಳು ಹೀಗೆ ವಿಭಿನ್ನ ಸ್ವರೂಪದ ಪ್ರವಾಸೋದ್ಯಮ ಸಾಮರ್ಥ್ಯವಿರುವ ಪ್ರದೇಶಗಳ ಹಿನ್ನಲೆಯಲ್ಲಿ ಪ್ರವಾಸೋದ್ಯಮ ನೀತಿಯನ್ನು ಪ್ರಾದೇಶಿಕ ಅಗತ್ಯಗಳಿಗುಣವಾಗಿ ಅನುಷ್ಠಾನಗೊಳಿಸಲಾಗುತ್ತಿದೆಯೇ ; ಈ ಸಂಬಂಧ ಕೈಗೊಂಡಿರುವ ಕ್ರಮಗಳೇನು ;

(ಇ) ಕರಾವಳಿಯಲ್ಲಿ ಜಾರಿಯಲ್ಲಿರುವ ಪಾರಿಸಾರಿಕ ನಿಯಮಗಳು ಕರಾವಳಿ ನಿಯಂತ್ರಣ ವಲಯ(CRZ) ನಿಯಮಗಳು ಪ್ರವಾಸೋದ್ಯಮ ಅಭಿವೃದ್ಧಿಗೆ ಅಡ್ಡಿಯಾಗುತ್ತಿರುವ ಹಿನ್ನಲೆಯಲ್ಲಿ, ಈ ನಿಯಮಗಳಲ್ಲಿ ಸೂಕ್ತ ಮಾರ್ಪಟು ಮಾಡುವ ಕುರಿತು ಕೇಂದ್ರ ಸರ್ಕಾರದ ಇಲಾಖೆಗಳಿಗೆ ಮನವರಿಕೆ ಮಾಡಲಾಗಿದೆಯೇ ; ಈ ಕುರಿತು ತಗೆದುಕೊಂಡ ಕ್ರಮಗಳೇನು ;

(ಈ) ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರದಿಂದ ಸುಮಾರು ೨೦ಕ್ಕಿಂತ ಹೆಚ್ಚು ಪ್ರಸ್ತಾವನೆಗಳನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದ್ದರೂ ಕೇವಲ ಬೆರಳೆಣಿಯಷ್ಟು ಪ್ರಸ್ತಾವನೆಗಳಿಗೆ ಮಾತ್ರ ಅನುಮೋದನೆ ನೀಡಲು ಕಾರಣವೇನು ; ಉಳಿದ ಪ್ರಸ್ತಾವನೆಗಳಿಗೆ ಅನುಮೋದನೆ ದೊರೆಯುದಿರುದಕ್ಕೆ ಕಾರಣಗಳೇನು ;

(ಉ) ಕರಾವಳಿಯ ಪ್ರವಾಸಯೋಗ್ಯ ಸ್ಥಳಗಳನ್ನು ಒಳಗೊಂಡಂತೆ, ಸಾಹಸ, ಕೃಷಿ, ಕ್ಯಾರವಾನ್ ಕಡಲತೀರ, ಸಾಂಸ್ಕೃತಿಕ ಮತ್ತು ಪಾರಂಪರಿಕ ಪ್ರವಾಸೋದ್ಯಮ, ನೈಸರ್ಗಿಕ ಮತ್ತು ವನ್ಯಜೀವಿ ಪ್ರವಾಸೋದ್ಯಮ, ಶಿಕ್ಷಣ, ಚಲನಚಿತ್ರ, ಗಾಲ್ಫ್, ವೈದ್ಯಕೀಯ, ಗ್ರಾಮೀಣ ಕ್ರೀಡೆ, ಯೋಗ ಮತ್ತು ಆರೋಗ್ಯ ಸೇರಿದಂತೆ ಸಮಾರು ೨೫ ಪ್ರವಾಸೋದ್ಯಮ ವಲಯಗಳಲ್ಲಿ ಖಾಸಗಿ ಹೊಡಿಕೆ ಆಧಾರಿತ ಪ್ರವಾಸೋದ್ಯಮ ಅಭಿವೃದ್ಧಿ ಪ್ರಸ್ತಾವನೆಗಳಿಗೆ ಸರ್ಕಾರ ಯಾವ ರೀತಿಯಲ್ಲಿ ಉತ್ತೇಜನ ನೀಡಲು ಕ್ರಮವಹಿಸುತ್ತಿದೆ ?

## ರಾಜ್ಯದಲ್ಲಿ ವಿವಿಧ ಇಲಾಖೆಗಳ ಸಿಬ್ಬಂದಿ ಮಾದರಿ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೬ (೩೧೧) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಜಾರಿಯಲ್ಲಿರುವ ವಿವಿಧ ಇಲಾಖೆಗಳ ಸಿಬ್ಬಂದಿ ಮಾದರಿ (Cadre & Staffing Pattern) ಯನ್ನು ಯಾವಾಗ ರೂಪಿಸಲಾಗಿತ್ತು; ಇಂದಿನ ಆಡಳಿತಾತ್ಮಕ ಅಗತ್ಯಗಳು, ಜನಸಂಖ್ಯಾ ವೃದ್ಧಿ ಹಾಗೂ ಸೇವಾ ಬೇಡಿಕೆಗೆ ಅನುಗುಣವಾಗಿ ಈ ಸಿಬ್ಬಂದಿ ಮಾದರಿಯನ್ನು ಪುನರ್‌ಪರಿಶೀಲಿಸಿ ಬದಲಾವಣೆ ಮಾಡಲು ಸರ್ಕಾರ ಯಾವುದಾದರೂ ಯೋಜನೆ ರೂಪಿಸಿದೆಯೇ ; ಇದ್ದಲ್ಲಿ, ಅದರ ವಿವರವೇನು ;

(ಆ) ರಾಜ್ಯದಲ್ಲಿ ಸುಮಾರು ೨ ಲಕ್ಷಕ್ಕಿಂತ ಹೆಚ್ಚು ಖಾಲಿ ಹುದ್ದೆಗಳ ಎದುರಾಗಿ ಗುತ್ತಿಗೆ ಆಧಾರಿತ ಸಿಬ್ಬಂದಿಯನ್ನು ನೇಮಿಸಲಾಗಿದೆಯೇ ; ಗುತ್ತಿಗೆ ಆಧಾರಿತ ಸಿಬ್ಬಂದಿಗಳು ಸರಕಾರಿ ಸೇವಾ ನಿಯಮಗಳು, ಜವಾಬ್ದಾರಿಗಳ ಚೌಕಟ್ಟಿನೊಳಗೆ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತಿದೆಯೇ ; ಈ ವ್ಯವಸ್ಥೆಯ ಕುರಿತು ಸರ್ಕಾರ ಯಾವುದೇ ಮೌಲ್ಯಮಾಪನ ಅಥವಾ ಪರಿಶೀಲನೆ ನಡೆಸಿದೆಯೇ ;

(ಇ) ವಿವಿಧ ಇಲಾಖೆಗಳಲ್ಲಿನ ಕೆಲಸದ ಸ್ವರೂಪ, ತಂತ್ರಜ್ಞಾನ ಬಳಕೆ ಹಾಗೂ ಕಾರ್ಯಭಾರದಲ್ಲಿ ಆಗಿರುವ ಬದಲಾವಣೆಗಳನ್ನು ಪರಿಗಣಿಸಿ, ಸಿಬ್ಬಂದಿ ಮಾದರಿಯನ್ನು ಮಾರ್ಪಡಿಸುವ ಕುರಿತು ಸರ್ಕಾರ ಯಾವುದಾದರೂ ಕ್ರಮಗಳನ್ನು ಕೈಗೊಂಡಿದೆಯೇ ; ಇದ್ದಲ್ಲಿ, ಅದರ ವಿವರಗಳೇನು ;

(ಈ) ಸಾಮಾಜಿಕ ಹಿತದೃಷ್ಟಿಯಿಂದ ಅತ್ಯಾವಶ್ಯಕ ಸೇವೆಗಳನ್ನು ಒದಗಿಸುತ್ತಿರುವ ಆರೋಗ್ಯ, ಪೊಲೀಸ್, ಶಿಕ್ಷಣ, ಪಶು ಸಂಗೋಪನೆ

ಹಾಗೂ ಇತರೆ ಸೇವಾ ಇಲಾಖೆಗಳಲ್ಲಿ ಅಗತ್ಯವಿರುವ ಸಿಬ್ಬಂದಿ ಕೊರತೆಯನ್ನು ನೀಗಿಸಲು ಸರ್ಕಾರ ಯಾವ ಯಾವ ತಾತ್ಕಾಲಿಕ ಹಾಗೂ ದೀರ್ಘಕಾಲಿನ ಕ್ರಮಗಳನ್ನು ಕೈಗೊಂಡಿದೆ ;

(ಉ) ಮುಂದಿನ ದಿನಗಳಲ್ಲಿ ಈ ಇಲಾಖೆಗೆ ಪೂರ್ಣ ಪ್ರಮಾಣದ ಅಗತ್ಯ ಸಿಬ್ಬಂದಿಯನ್ನು ಪೂರೈಸುವ ಕುರಿತು ಸರ್ಕಾರದ ಕಾರ್ಯಯೋಜನೆ ಏನು ?

## ರಾಜ್ಯ ಪೊಲೀಸ್ ಸೇವೆಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೭ (೩೧೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಇಂಟೆಲಿಜೆನ್ಸ್ ಪೊಲೀಸ್ (ಗುಪ್ತಚರ ಇಲಾಖೆ)ಗೆ ಅಧಿಕಾರಿಗಳನ್ನು ಯಾವ ಪ್ರಕ್ರಿಯೆಯ ಮೂಲಕ ನೇಮಿಸಲಾಗುತ್ತದೆ ಅಥವಾ ನಿಯೋಜಿಸಲಾಗುತ್ತದೆ ; ಈ ನೇಮಕಾತಿ/ನಿಯೋಜನೆಗೆ ಅನುಸರಿಸಲಾಗುವ ವಿಧಾನಗಳು ಮತ್ತು ಮಾರ್ಗಸೂಚಿಗಳು ಯಾವುವು ; ಈ ನೇಮಕಾತಿ ಅಥವಾ ನಿಯೋಜನೆಗೆ ಅಂತಿಮ ಅನುಮೋದನೆ ನೀಡುವ ಪ್ರಾಧಿಕಾರ ಯಾರು ;

(ಆ) ಪೊಲೀಸ್ ಇಲಾಖೆಯ ಈ ಗುಪ್ತಚರ ವಿಭಾಗಗಳಿಗೆ ನಿಯೋಜನೆ ಆಧಾರದಲ್ಲಿ ಅಧಿಕಾರಿಗಳನ್ನು ನೇಮಿಸಲು ಅವಕಾಶವಿದೆಯೇ ; ಇದ್ದಲ್ಲಿ, ಯಾವ ವರ್ಗದ, ಯಾವ ಸೇವೆಯ (IPS/KPS) ಇತರೆ ಅಧಿಕಾರಿಗಳನ್ನು ನಿಯೋಜಿಸಲಾಗುತ್ತಿದೆ ; ಈ ನಿಯೋಜನೆಗೆ ಅನುಸರಿಸಲಾಗುತ್ತಿರುವ ಅರ್ಹತಾ ಮಾನದಂಡಗಳೇನು ;

(ಇ) ಇಂಟೆಲಿಜೆನ್ಸ್ ಪೊಲೀಸ್ ಸಿಬ್ಬಂದಿಗಳಿಗೆ ಬಡ್ತಿ (Promotion)ಯ ಅವಕಾಶವಿದೆಯೇ ; ಇದ್ದಲ್ಲ, ಕೊನೆಯದಾಗಿ ಯಾವಾಗ ಬಡ್ತಿ ನೀಡಲಾಗಿದೆ ; ಬಡ್ತಿಗೆ ಸಂಬಂಧಿಸಿದ ನಿಯಮಗಳು ಮತ್ತು

ಮಾರ್ಗಸೂಚಿಗಳು ಯಾವುವು ; ಈ ನಿಯಮಗಳಿಗೆ ಕೊನೆಯದಾಗಿ ಯಾವಾಗ ತಿದ್ದುಪಡಿ ತರಲಾಗಿದೆ ;

(ಈ) ಪ್ರಸ್ತುತ ತಂತ್ರಜ್ಞಾನಧಾರಿತ ಹಾಗೂ ಸಂಕೀರ್ಣ ಭದ್ರತಾ ವ್ಯವಸ್ಥೆಯ ಹಿನ್ನೆಲೆಗಳಲ್ಲಿ, ಇಂಟೆಲಿಜೆನ್ಸ್ ಪೊಲೀಸ್ ಸಿಬ್ಬಂದಿಗಳಿಗೆ ಅಗತ್ಯವಿರುವ ತಾಂತ್ರಿಕ ಕೌಶಲ್ಯ, ಸೈಬರ್ ಗುಪ್ತಚರ, ಆಧುನಿಕ ಮಾಹಿತಿ ವಿಶ್ಲೇಷಣೆ ಅಭಿವೃದ್ಧಿಪಡಿಸಲು ಇಲಾಖೆ ಯಾವ ತರಬೇತಿ ಹಾಗೂ ಕೌಶಲ್ಯಾಭಿವೃದ್ಧಿ ಕ್ರಮಗಳನ್ನು ಕೈಗೊಂಡಿದೆ ;

(ಉ) ಕಳೆದ ಮೂರು ವರ್ಷಗಳಲ್ಲಿ ದಾಖಲಾಗಿರುವ ಸೈಬರ್ ವಂಚನೆ ಪ್ರಕರಣಗಳ ಪೈಕಿ ಎಷ್ಟು ಪ್ರಕರಣಗಳಲ್ಲಿ ಮೋಸಹೋದ ದೂರುದಾರರ ಹಣವನ್ನು ವಸೂಲಾತಿ ಮಾಡಲಾಗಿದೆ ; ವಸೂಲಾತಿ ಮಾಡಲಾದ ಮೊತ್ತದ ವಿವರಗಳೇನು ?

## ಆರ್ಥಿಕ ಇಲಾಖೆಯ ವಿಳಂಬ ನೀತಿಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೮ (೩೮೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೬ ತಿಂಗಳಿನಲ್ಲಿ ಆರ್ಥಿಕ ಇಲಾಖೆಯಲ್ಲಿ ಸ್ವೀಕರಿಸಲಾದ ಒಟ್ಟು ಕಡತಗಳ ಸಂಖ್ಯೆ ಎಷ್ಟು ; (ಇಲಾಖಾವಾರು ಮಾಹಿತಿ ನೀಡುವುದು)

(ಆ) ಕಳೆದ ೬ ತಿಂಗಳಿನಲ್ಲಿ (ದಿನಾಂಕ ೧ನೇ ಜುಲೈ ೨೦೨೬) ಆರ್ಥಿಕ ಇಲಾಖೆಯ FRC ವಿಭಾಗದಲ್ಲಿ ಸ್ವೀಕರಿಸಲಾದ ಒಟ್ಟು ಕಡತಗಳ ಸಂಖ್ಯೆ ಎಷ್ಟು ; ಇಲಾಖಾವಾರು ಸ್ವೀಕರಿಸಿದ ದಿನಾಂಕ ಹಾಗೂ ಸದರಿ ಕಡತ ವಿಲೇ ಆದ ದಿನಾಂಕದೊಂದಿಗೆ ಸಮಗ್ರ ವಿವರವಾದ ಮಾಹಿತಿ ನೀಡುವುದು ;

(ಇ) ಆರ್ಥಿಕ ಇಲಾಖೆಯಲ್ಲಿ ಒಂದು ಬಾರಿ ಸ್ವೀಕರಿಸಲಾದ ಕಡತವನ್ನು ಎಷ್ಟು ಅವಧಿಯೊಳಗಾಗಿ ವಿಲೇ ಮಾಡಬೇಕು ಎಂಬ ನಿಯಮ ಇದೆ ; ಕಳೆದ ೩ ವರ್ಷಗಳಿಂದ ಬಾಕಿ ಇರುವ ಕಡತಗಳ ಸಂಖ್ಯೆ ಎಷ್ಟು ; (ವರ್ಷವಾರು ಇಲಾಖಾವಾರು ವಿವರ ನೀಡುವುದು)

(ಈ) ಆರ್ಥಿಕ ಇಲಾಖೆಯಲ್ಲಿ ಕಡತಗಳ ಪರಿಶೀಲನೆ ಮತ್ತು ಆದೇಶಗಳ ವಿಳಂಬದಿಂದಾಗಿ ರಾಜ್ಯದ ಅಭಿವೃದ್ಧಿ ಕುಂಟಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಉ) ಆರ್ಥಿಕ ಇಲಾಖೆಯಲ್ಲಿ ಕಡತಗಳ ವಿಳಂಬ ನಿರ್ವಹಣೆಯಿಂದಾಗಿ ರಾಜ್ಯದ ಜನರ ನಿತ್ಯ ಜೀವನದ ಮೇಲೆ ಆಗುವ ಪರಿಣಾಮಗಳಿಗೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗುತ್ತದೆ ? (ವಿವರ ನೀಡುವುದು)

## ಗ್ಯಾರಂಟಿ ಯೋಜನೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೯ (೩೯೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ಯಾರಂಟಿ ಯೋಜನೆಗಳಿಗೆ ಕಳೆದ ಎರಡು ವರ್ಷಗಳಲ್ಲಿ ಎಷ್ಟು ಮೊತ್ತ ವೆಚ್ಚ ಮಾಡಲಾಗಿದೆ ; ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಂಖ್ಯೆ ಎಷ್ಟು ; (ಗ್ಯಾರಂಟಿ ಯೋಜನೆವಾರು ವೆಚ್ಚವಾರು ಹಾಗೂ ಜಿಲ್ಲಾವಾರು ವಿವರ ನೀಡುವುದು)

(ಆ) ಗ್ಯಾರಂಟಿ ಯೋಜನೆಗಳನ್ನು ಘೋಷಿಸುವಾಗ ಯಾವ ಯಾವ ಷರತ್ತು ಅಥವಾ ನಿಯಮಗಳನ್ನು ರೂಪಿಸಲಾಗಿತ್ತು ನನಗೂ ಫ್ರೀ ನಿನಗೂ ಫ್ರೀ ಎಂಬ ಘೋಷಣೆಯ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಇ) ಗ್ಯಾರಂಟಿ ಯೋಜನೆಯ ಉಸ್ತುವಾರಿ ಕಮಿಟಿಗೆ ಎಷ್ಟು ಜನರನ್ನು ನೇಮಕ ಮಾಡಲಾಗಿದೆ ; ಯಾವ ಯಾವ ಹುದ್ದೆಗಳಿಗೆ ನೇಮಕ ಮಾಡಲಾಗಿದೆ ; ಎಷ್ಟು ಮೊತ್ತ ವೆಚ್ಚ ಮಾಡಲಾಗುತ್ತಿದೆ ; ಹುದ್ದೆ ಅಥವಾ ಜವಾಬ್ದಾರಿ ಹಾಗೂ ಹೆಸರಿನೊಂದಿಗೆ ವಿಧಾನಸಭಾ ಕ್ಷೇತ್ರದಿಂದ ಹಿಡಿದು ರಾಜ್ಯದ ಜವಾಬ್ದಾರಿಯವರೆಗೆ ಸಮಗ್ರ ವಿವರ ನೀಡುವುದು ;

(ಈ) ಗ್ಯಾರಂಟಿ ಯೋಜನೆಗಳನ್ನು ರಾಜ್ಯದಲ್ಲಿ ವಾಸಿಸುವ ಕನ್ನಡಿಗರಿಗೆ ಮಾತ್ರ ಘೋಷಣೆ ಮಾಡಿರುವುದೇ ; ಅನ್ಯ ಭಾಷಿಕರಿಗೆ ಕನ್ನಡ ಕಲಿಕೆಯ ಷರತ್ತಿನೊಂದಿಗೆ ಫಲಾನುಭವಿಗಳಾಗುವ ಷರತ್ತು ವಿಧಿಸುವ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಉ) ಕನ್ನಡ ಮಾತನಾಡದ, ಕನ್ನಡ ಕಲಿಯದ, ಕನ್ನಡ ಭಾಷೆಯ ಬಗ್ಗೆ ಗೌರವ ಇಲ್ಲದವರಿಗೆ ಗ್ಯಾರಂಟಿ ಯೋಜನೆ ಫಲಾನುಭವಿಗಳನ್ನಾಗಿಸುವುದು ಸರಿಯೇ ? (ವಿವರ ನೀಡುವುದು)

## ಪೊಲೀಸರು ಅಪರಾಧ ಪ್ರಕರಣದಲ್ಲಿ ಭಾಗಿಯಾಗುತ್ತಿರುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೦ (೩೨೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಪೊಲೀಸ್ ಇಲಾಖೆಯ ಎಷ್ಟು ಸಿಬ್ಬಂದಿ ಹಾಗೂ ಅಧಿಕಾರಿಗಳು ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿದ್ದು ; ಯಾವ ಯಾವ ಸೆಕ್ಷನ್‌ಗಳ ಅನ್ವಯ ಕೇಸು ದಾಖಲಾಗಿದೆ ; ಅದರಲ್ಲಿ ಬಂಧಿತರಾಗಿರುವವರು ಎಷ್ಟು ; (ನಮೂದಾದ ಎಫ್ ಐ ಆರ್ ಸಂಖ್ಯೆ, ಪೊಲೀಸ್ ಅಧಿಕಾರಿ ಸಿಬ್ಬಂದಿಗಳ ಹೆಸರು, ಜಿಲ್ಲಾವಾರು ಪೊಲೀಸ್ ಠಾಣಾವಾರು ಸಮಗ್ರ ವಿವರ ನೀಡುವುದು)

(ಆ) ಕಾನೂನು ಸುವ್ಯವಸ್ಥೆ ಕಾಪಾಡಬೇಕಾದ ಪೊಲೀಸರೇ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಈ ಕುರಿತು ಸರ್ಕಾರದ ನಿಲುವೇನು ;

(ಇ) ಸರ್ಕಾರ ಈ ಅಪರಾಧ ಎಸಗಿದ ಪೊಲೀಸ್ ಸಿಬ್ಬಂದಿಗಳನ್ನು ಶಿಕ್ಷಿಸುವ ಮೂಲಕ ಅಥವಾ ವಿಚಾರಣೆ ಮಾಡುವ ಮೂಲಕ ಮತ್ತಷ್ಟು ಅಪರಾಧ ತಪ್ಪಿಸಲು ತೆಗೆದುಕೊಂಡ ಕ್ರಮವೇನು ; ಈ ಕುರಿತು ಸರ್ಕಾರದ ನಿಲುವೇನು ? (ವಿವರ ನೀಡುವುದು)

## "ಬಿ" ಖಾತೆಗಳನ್ನು "ಎ" ಖಾತೆಗಳಾಗಿ ಪರಿವರ್ತನೆ ಮಾಡುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೨೮೧ (೩೨೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಬಿಎ ವ್ಯಾಪ್ತಿಯಲ್ಲಿ ಇರುವ ಅಂದಾಜು "ಬಿ" ಖಾತೆಗಳ ಸಂಖ್ಯೆ ಹಾಗೂ ಎ ಖಾತೆಗಳ ಸಂಖ್ಯೆ ಎಷ್ಟು ;

(ಆ) ಜಿಬಿಎ ವತಿಯಿಂದ "ಬಿ" ಖಾತಾ ಸ್ವತ್ತುಗಳನ್ನು "ಎ" ಖಾತೆಗೆ ಪರಿವರ್ತನೆ ಮಾಡಿಕೊಳ್ಳಲು ಯಾವ ದಿನಾಂಕದಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ ; ಇಲ್ಲಿಯವರೆಗೆ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; ಪರಿವರ್ತನೆ ಮಾಡಿದ ಖಾತೆಗಳ ಸಂಖ್ಯೆ ಎಷ್ಟು ;

(ಇ) ಸದರಿ ಸೌಲಭ್ಯಕ್ಕಾಗಿ ಸರ್ಕಾರದಿಂದ ಎಷ್ಟು ಬಗೆಯ ಶುಲ್ಕಗಳನ್ನು ವಿಧಿಸಲಾಗುವುದು ; ಅವುಗಳ ಪ್ರಮಾಣವೆಷ್ಟು ;

(ಈ) "ಬಿ" ಖಾತೆದಿಂದ "ಎ" ಖಾತೆಗೆ ಪರಿವರ್ತನೆಗೆ ವಿಧಿಸಿರುವ ಶುಲ್ಕ ದುಬಾರಿಯಾಗಿದ್ದು, ಜನ ಸಾಮಾನ್ಯರಿಗೆ ಹೊರೆಯಾಗುವುದಿಲ್ಲವೇ ; ಸದರಿ ಶುಲ್ಕವನ್ನು ಕಡಿಮೆ ಮಾಡುವ ಪ್ರಸ್ತಾವ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಎಷ್ಟು ಕಡಿಮೆ ಮಾಡಲಾಗುವುದು ;

(ಉ) "ಎ" ಖಾತಾ ಪರಿವರ್ತನೆಗೆ ಅರ್ಜಿ ಸಲ್ಲಿಸಲು ಆಸ್ತಿ ಮಾಲೀಕರು ನೀರಸ ಪ್ರತಿಕ್ರಿಯೆ ನೀಡಲು ಕಾರಣಗಳೇನು ;

(ಊ) ಅರ್ಜಿ ಸಲ್ಲಿಸದೆ ಎಷ್ಟು ದಿನಗಳಲ್ಲಿ ಖಾತಾ ಪರಿವರ್ತನೆ ಮಾಡಲಾಗುವುದು ; ಇದರ ಪ್ರಕ್ರಿಯೆ ಏನು ;

(ಋ) ಭೂಮಿಯ ಮೌಲ್ಯವನ್ನು ಯಾವ ರೀತಿಯಲ್ಲಿ ಲೆಕ್ಕ ಹಾಕಲಾಗುವುದು ? (ಪತ್ರದಲ್ಲಿ ಚದರ ಅಡಿ ಮತ್ತು ಗುಂಟೆಯ ಲೆಕ್ಕದಲ್ಲಿ ಇರುವ ಆಸ್ತಿಗಳ ಮೌಲ್ಯ)

## ಜಿ.ಬಿ.ಎ ವ್ಯಾಪ್ತಿಯ ಸರ್ಕಾರಿ ಆಸ್ತಿಯ ಒತ್ತುವರಿಯ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೨೮೨ (೩೨೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಆಸ್ತಿ ಎಂದರೇನು ; ಸದರಿ ಆಸ್ತಿಗಳ ನಿರ್ವಹಣೆ ರಕ್ಷಣೆ ಮಾಡಬೇಕಾದ ಹೊಣೆ ಯಾವ ಇಲಾಖೆಯ ಮೇಲೆ ಇರುತ್ತದೆ ;

(ಆ) ಕಳೆದ ಐದು ವರ್ಷಗಳಲ್ಲಿ ಬಿಬಿಎಂಪಿ/ಜಿಬಿಎ ವ್ಯಾಪ್ತಿಯ ಎಷ್ಟು ಸರ್ಕಾರಿ ಆಸ್ತಿಗಳ ಒತ್ತುವರಿಯನ್ನು ತೆರವುಗೊಳಿಸಲಾಗಿದೆ ; ಇದರಿಂದ ಎಷ್ಟು ಕುಟುಂಬಗಳು ನಿರಾಶ್ರಿತರಾಗಿದ್ದಾರೆ ; (ಪ್ರತಿ ಪ್ರಕರಣಕ್ಕೂ ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಸರ್ಕಾರಿ ಆಸ್ತಿಯನ್ನು ಒತ್ತುವರಿ ಮಾಡಿಕೊಂಡರೆ ಇರುವ ದಂಡ ಅಥವಾ ಶಿಕ್ಷೆ ಏನು ; ಎಷ್ಟು ಜನರ ಮೇಲೆ ಪ್ರಕರಣ ದಾಖಲಿಸಲಾಗಿದೆ ;

(ಈ) ಒತ್ತುವರಿಗೆ ಪ್ರೇರಣೆ ನೀಡುವವರ ಅಥವಾ ಸಹಾಯ ಮಾಡುವವರ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು ;

(ಉ) ಜಿಬಿಎ ವ್ಯಾಪ್ತಿಯ ಸರ್ಕಾರಿ ಆಸ್ತಿ ರಕ್ಷಣೆ ಮಾಡಬೇಕಾದ ಜವಾಬ್ದಾರಿ ಯಾವ ಅಧಿಕಾರಿಗಳ ವ್ಯಾಪ್ತಿಗೆ ಬರುವುದು ಸರ್ಕಾರಿ ಆಸ್ತಿ ರಕ್ಷಣೆ ಮಾಡದ/ಒತ್ತುವರಿಗೆ ಅವಕಾಶ ಮಾಡಿಕೊಟ್ಟ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಊ) ಒತ್ತುವರಿ ತೆರವು ಪ್ರಕರಣಗಳಲ್ಲಿ ಎಷ್ಟು ಒತ್ತುವರಿದಾರರಿಗೆ ಬದಲೀ ನಿವೇಶನ ಅಥವಾ ವಸತಿ ವ್ಯವಸ್ಥೆಯನ್ನು ಸರ್ಕಾರ ಕಲ್ಪಿಸಿದೆ ; ಕಲ್ಪಿಸದೇ ಇದ್ದಲ್ಲಿ ಕೋಗಿಲು ಪ್ರದೇಶದಲ್ಲಿ ಒತ್ತುವರಿ ಮಾಡಿದ ಒತ್ತುವರಿದಾರರಿಗೆ ಮಾತ್ರ ವಸತಿ ಸೌಲಭ್ಯ ಕಲ್ಪಿಸಲು ಸರ್ಕಾರ ಮುಂದಾಗಿರುವುದೇಕೆ ; ಇದು ಪಕ್ಷಪಾತವಲ್ಲವೇ ;

(ಋ) ಒತ್ತುವರಿದಾರರಿಗೆ ವಸತಿ ಸೌಕರ್ಯ ಕಲ್ಪಿಸಿದಲ್ಲಿ ಪ್ರೇರಣೆ ನೀಡಿದಂತೆ ಆಗುವುದಿಲ್ಲವೇ ?

## ರೈತರಿಗೆ ಭೂ ಪರಿಹಾರ ನೀಡುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೨೮೩ (೩೨೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಡಿ.ಎ ವತಿಯಿಂದ ನಿರ್ಮಾಣವಾಗುತ್ತಿರುವ ಡಾ॥ ಕೆ.ಶಿವರಾಮ ಕಾರಂತ ಬಡಾವಣೆಯ ಸೋಮಶೆಟ್ಟಿಹಳ್ಳಿ ಗ್ರಾಮದ ಎಷ್ಟು ರೈತರಿಗೆ ದೃಢೀಕರಣ ಪತ್ರ ನೀಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಹಲವು ರೈತರು ಎಲ್ಲಾ ದಾಖಲೆಗಳನ್ನು ಸಲ್ಲಿಸಿದ್ದರೂ ಸಹ ದೃಢೀಕರಣ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸೋಮಶೆಟ್ಟಿಹಳ್ಳಿ ಗ್ರಾಮದ ಸರ್ವೆ ನಂ ೫೦/೧ ಅನ್ನು ಬಡಾವಣೆ ನಿರ್ಮಾಣಕ್ಕಾಗಿ ಭೂಸ್ವಾಧೀನ ಮಾಡಿಕೊಳ್ಳಲಾಗಿದೆಯೇ ;

(ಈ) ಜಮೀನು ಸ್ವಾಧೀನ ಪಡಿಸಿಕೊಂಡ ನಂತರ ಶೇ ೪೦ರ ಅನುಪಾತಕ್ಕೆ ದೃಢೀಕರಣ ನೀಡದಿರಲು ಕಾರಣಗಳೇನು ; ದೃಢೀಕರಣ ಪಡೆಯಲು ಅವರು ಸಲ್ಲಿಸಿರುವ ದಾಖಲೆಗಳು ಯಾವುವು ಮತ್ತು ಬಾಕಿಯಿರುವ ದಾಖಲೆಗಳು ಯಾವುವು ;

(ಉ) ಸೋಮಶೆಟ್ಟಿಹಳ್ಳಿ ಗ್ರಾಮದ ಸರ್ವೆ ನಂ ೫೦/೧ ರ ಮಾಲೀಕರು ಎಲ್ಲಾ ದಾಖಲೆಗಳನ್ನು ಸಲ್ಲಿಸಿದ್ದರೂ ಸಹ ಅವರಿಗೆ ದೃಢೀಕರಣ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ದೃಢೀಕರಣ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸೈಬರ್ ವಂಚನೆ ಪ್ರಕರಣಗಳ ಬಗ್ಗೆ

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೪ (೩೨೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ದಾಖಲಾದ ಸೈಬರ್ ವಂಚನೆ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಅಂಕಿ ಸಂಖ್ಯೆಗಳ ವಿವರ ನೀಡುವುದು)

(ಆ) ಈ ಪ್ರಕರಣಗಳಲ್ಲಿ ಹಣ ಕಳೆದಕೊಂಡ ಸಂತ್ರಸ್ತರಿಗೆ ೨ ಗಂಟೆಯೊಳಗೆ (Golden Hour) ಸಹಾಯ ಮಾಡಲು ಇರುವ ತಾಂತ್ರಿಕ ಸೌಲಭ್ಯಗಳೇನು ;

(ಇ) ಸೈಬರ್ ಅಪರಾಧ ತಡೆಗೆ ಪೊಲೀಸ್ ಇಲಾಖೆಯಲ್ಲಿ ಪ್ರತ್ಯೇಕ 'ಸೈಬರ್ ವರ್ಟಿಕಲ್' ಸ್ಥಾಪನೆಯ ಪ್ರಗತಿ ಯಾವ ಹಂತದಲ್ಲಿದೆ ?

## ಗಣಕೀಕರಣ ಮತ್ತು 'ಡಿಜಿಟಲ್ ಸಹಕಾರ' ಬಗ್ಗೆ

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೫ (೩೨೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು (PACS) ಕೇಂದ್ರ ಸರ್ಕಾರದ ತಂತ್ರಾಂಶದೊಂದಿಗೆ ಲಿಂಕ್ ಮಾಡುವ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಆ) ಈ ಗಣಕೀಕರಣದಿಂದ ರೈತರಿಗೆ ಸಿಗಲಿರುವ ನೇರ ಸೌಲಭ್ಯಗಳೇನು ಮತ್ತು ಮಧ್ಯವರ್ತಿಗಳ ಹಾವಳಿ ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬಸವಕಲ್ಯಾಣದ ನೂತನ ಅನುಭವ ಮಂಟಪದ ಬಗ್ಗೆ

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೬ (೩೨೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಸವ ಕಲ್ಯಾಣದಲ್ಲಿ ನಿರ್ಮಾಣವಾಗುತ್ತಿರುವ ನೂತನ ಅನುಭವ ಮಂಟಪ ಕಾಮಗಾರಿಗೆ ಈವರೆಗೆ ಬಿಡುಗಡೆಯಾದ ಅನುದಾನವೆಷ್ಟು ಮತ್ತು ಈ ಯೋಜನೆಯನ್ನು ಪ್ರವಾಸಿಗರಿಗಾಗಿ ಮುಕ್ತಗೊಳಿಸಲು ನಿಗದಿಪಡಿಸಿರುವ ಕಾಲಮಿತಿ ಏನು ;

(ಆ) ಬೀದರ್ ಜಿಲ್ಲೆಯ ಗುರುನಾನಕ್ ಝೀರಾ ಮತ್ತು ಪಾಪನಾಶ ದೇವಾಲಯಗಳಿಗೆ ಭೇಟಿ ನೀಡುವ ಯಾತ್ರಾರ್ಥಿಗಳ ಅನುಕೂಲಕ್ಕಾಗಿ ಯಾತ್ರಿ ನಿವಾಸ ಹಾಗೂ ವಾಹನ ನಿಲುಗಡೆ (Parking) ಸೌಲಭ್ಯಗಳನ್ನು ಅಭಿವೃದ್ಧಿಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಬೀದರ್‌ನಲ್ಲಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಹಮ್ಮಿಕೊಳ್ಳಲಾದ **'ಡಿಸ್ಕವರ್ ಬೀದರ್'** (Discover Bidar) ಅಭಿಯಾನದ ಪ್ರಗತಿ ಮತ್ತು ಅದಕ್ಕಾಗಿ ವ್ಯಯಿಸಲಾದ ಮೊತ್ತವೆಷ್ಟು ?

## ಬೀದರ್ ಕೋಟೆ ಮತ್ತು ಸ್ಮಾರಕಗಳ ಅಭಿವೃದ್ಧಿ ಬಗ್ಗೆ

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೭ (ಇ.೨೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯು ಐತಿಹಾಸಿಕವಾಗಿ ಮಹತ್ವದ್ದಾಗಿದ್ದರೂ ಅಲ್ಲಿ ಸ್ಮಾರಕಗಳ ಸಂರಕ್ಷಣೆ ಮತ್ತು ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೀದರ್ ಕೋಟೆಯಲ್ಲಿ ಅಳವಡಿಸಲು ಉದ್ದೇಶಿಸಲಾಗಿದ್ದ ಧ್ವನಿ ಮತ್ತು ಬೆಳಕು ಪ್ರದರ್ಶನ (Sound and Light Show) ಯೋಜನೆಯು ಪ್ರಸ್ತುತ ಯಾವ ಹಂತದಲ್ಲಿದೆ ಮತ್ತು ಈ ಯೋಜನೆಗಾಗಿ ಮಂಜೂರಾದ ಅನುದಾನವೆಷ್ಟು ;

(ಇ) ಕೇಂದ್ರ ಸರ್ಕಾರದ Swadesh Darshan 2.0 ಅಥವಾ CBDD(Challenge Based Destination Development) ಅಡಿಯಲ್ಲಿ ಬೀದರ್ ಜಿಲ್ಲೆಗೆ ಮಂಜೂರಾದ ಪ್ರವಾಸೋದ್ಯಮ ಯೋಜನೆಗಳಾವುವು ? (ವಿವರ ನೀಡುವುದು)

## ಚೆಕ್ ಡ್ಯಾಂ ಮತ್ತು ಬ್ಯಾರೇಜ್‌ಗಳ ನಿರ್ಮಾಣ ಕುರಿತು

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೮ (ಇ.೨೮) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಮಾಂಜ್ರಾ ಮತ್ತು ಕಾರಂಜಾ ನದಿ ಪಾತ್ರದಲ್ಲಿ ಅಂತರ್ಜಲ ಮರುಪೂರಣಕ್ಕಾಗಿ ಹೊಸದಾಗಿ ಎಷ್ಟು ಚೆಕ್ ಡ್ಯಾಂ (Check Dams) ಹಾಗೂ ಬ್ಯಾರೇಜ್ ನಿರ್ಮಿಸಲು ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಈಗಾಗಲೇ ನಿರ್ಮಿಸಲಾಗಿರುವ ಅನೇಕ ಚೆಕ್ ಡ್ಯಾಂಗಳು ಹಾನಿಗೊಳಗಾಗಿ ನೀರು ಪೋಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅವುಗಳ ದುರಸ್ತಿಗೆ ಮೀಸಲಿಟ್ಟ ಅನುದಾನವೆಷ್ಟು ?

## ಸಿ.ಆ.ಸು ಇಲಾಖೆಯಿಂದ ತಪ್ಪು ಮಾಹಿತಿ ನೀಡಿರುವ ಬಗ್ಗೆ

**ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) :–**

೨೮೯ (೩೨೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಅಧಿವೇಶನದಲ್ಲಿ ಪ್ರಶ್ನೆ ಸಂಖ್ಯೆ ೧೪೦೮ರಲ್ಲಿ ಡಿಸೆಂಬರ್೨೯, ೨೦೨೪ರಂದು ನಡೆದ ಕೆಎಎಸ್ ಪೂರ್ವಭಾವಿ ಪ್ರಶ್ನೆ ಪತ್ರಿಕೆಯಲ್ಲಿ ಸಾಕಷ್ಟು ಲೋಪ ದೋಷಗಳಾಗಿದ್ದರಿಂದ ಈ ಕುರಿತು ಕೇಳಿರುವ ಪ್ರಶ್ನೆಗೆ ಇಲಾಖೆಯ ಅಧಿಕಾರಿಗಳು ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆ ಅನ್ಯಾಯವಾಗಿರುವುದಿಲ್ಲವೆಂದು ಉತ್ತರ ನೀಡುವ ಮೂಲಕ ಸದನಕ್ಕೆ ತಪ್ಪು ಮಾಹಿತಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತಪ್ಪು ಮಾಹಿತಿ ನೀಡಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗುವುದು ;

(ಆ) ೨೦೨೪ರ ಆಗಸ್ಟ್ ೨೭ರಂದು ನಡೆದ ಕೆಎಎಸ್ ಪೂರ್ವಭಾವಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಯಲ್ಲಿ ಒಟ್ಟು ಎಷ್ಟು ಪ್ರಶ್ನೆಗಳು ಭಾಷಾಂತರ ಲೋಪ ದೋಷದಿಂದ ಕೂಡಿದ್ದವು ; ಯಾವ ಯಾವ ಪ್ರಶ್ನೆಗಳಿಗೆ ಗ್ರೇಸ್ ಅಂಕಗಳನ್ನು ನೀಡಲಾಗದೆ ; (ವಿವರ ನೀಡುವುದು)

(ಇ) ೨೦೨೪ರ ಡಿಸೆಂಬರ್ ೨೯ರಂದು ನಡೆದ ಕೆಎಎಸ್ ಪೂರ್ವಭಾವಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಯಲ್ಲಿ ಒಟ್ಟು ಎಷ್ಟು ಪ್ರಶ್ನೆಗಳು ಭಾಷಾಂತರ ಲೋಪ ದೋಷದಿಂದ ಕೂಡಿದ್ದವು ; ಯಾವ ಯಾವ ಪ್ರಶ್ನೆಗಳಿಗೆ ಗ್ರೇಸ್ ಅಂಕಗಳನ್ನು ನೀಡಲಾಗಿದೆ ? (ವಿವರ ನೀಡುವುದು)

## ಸರ್ಕಾರಿ ನೌಕರರಿಗೆ ಎನ್.ಪಿ.ಎಸ್ ಬದಲಾಗಿ ಓ.ಪಿ.ಎಸ್ ಜಾರಿಗೊಳಿಸುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೨೯೦ (೩೩೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೦೬ರ ನಂತರ ನೇಮಕಗೊಂಡ ಸರ್ಕಾರಿ ನೌಕರರಿಗೆ ಎನ್.ಪಿ.ಎಸ್ ಪಿಂಚಣಿ ಯೋಜನೆ ಬದಲಾಗಿ ಓ.ಪಿ.ಎಸ್. ನೀಡುವ ಬಗ್ಗೆ ಅಧ್ಯಯನ ಮಾಡಲು ಸಮೀತಿಯನ್ನು ರಚನೆ ಮಾಡಿದ್ದು ನಿಜವೇ; ಹಾಗಿದ್ದಲ್ಲಿ, ಸಮೀತಿ ಸದಸ್ಯರ ಪಟ್ಟಿ ನೀಡುವುದು ;

(ಆ) ಈ ಸಮೀತಿಗೆ ಅಂತಿಮ ವರದಿ ಸಲ್ಲಿಸಲು ನೀಡಿದ ಕಾಲಮಿತಿ ಎಷ್ಟು ಮತ್ತು ಸಮೀತಿಯು ಇಲ್ಲಿಯವರೆಗೆ ಪ್ರಿಲಿಮನರಿ ರಿಪೋರ್ಟ್ ನೀಡಿದೆಯೇ;

(ಇ) ರಾಜ್ಯದ ವಿವಿಧ ಇಲಾಖೆಗಳಲ್ಲಿ ೦೧.೦೪.೨೦೦೬ರ ನಂತರ ನೇಮಕಗೊಂಡ ನೌಕರರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಈ ಸಮೀತಿಯು ಅನುಸರಿಸುತ್ತಿರುವ ಟರ್ಮ್ಸ್ ಆಫ್ ರೆಫರೆನ್ಸ್‌ಗಳೇನು ; (ಮಾಹಿತಿ ನೀಡುವುದು)

(ಉ) ಈ ಸಮೀತಿಗೆ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರಿಗೂ ಪಿಂಚಣಿ ಸೌಲಭ್ಯ ನೀಡುವ ಬಗ್ಗೆ ಅಧ್ಯಯನ ಮಾಡಲು ಸೂಚನೆ ನೀಡಲಾಗಿದೆಯೇ ; (ಮಾಹಿತಿ ನೀಡುವುದು)

(ಊ) ಈ ಸಮೀತಿಯು ಇಲ್ಲಿಯವರೆಗೆ ನಡೆಸಿದ ಸಭೆಗಳು ಎಷ್ಟು; ಈ ಕುರಿತು ಬೇರೆ ರಾಜ್ಯಗಳಿಗೆ ತೆರಳಿ ಸದರಿ ವಿಷಯ ಕುರಿತು ಮಾಹಿತಿಯನ್ನು ಸಂಗ್ರಹಿಸಲಾಗಿದೆಯೇ ? (ವಿವರ ನೀಡುವುದು)

## ನಿಗಮ ಹಾಗೂ ಮಂಡಳಿಗಳ ಅಧ್ಯಕ್ಷರುಗಳಿಗೆ ನೀಡುವ ಸೌಲಭ್ಯಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೨೯೧ (೩೩೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ವಿವಿಧ ಇಲಾಖೆಯಡಿ ಬರುವ ಒಟ್ಟು ನಿಗಮ, ಮಂಡಳಿಗಳು ಎಷ್ಟು; ಅವು ಯಾವುವು ; (ಇಲಾಖಾವಾರು ಮಾಹಿತಿ ನೀಡುವುದು);

(ಆ) ನಿಗಮ ಮಂಡಳಿಗಳ ಅಧ್ಯಕ್ಷರಿಗೆ ನಿಗದಿಪಡಿಸಿರುವ ವೇತನ ಸೌಲಭ್ಯ ಹಾಗೂ ಇತರೆ ಭತ್ಯೆಗಳೆಷ್ಟು ; (ವಿವರ ನೀಡುವುದು)

(ಇ) ನಿಗಮ ಹಾಗೂ ಮಂಡಳಿಗಳ ಅಧ್ಯಕ್ಷರುಗಳ ಆಪ್ತ ಕಾರ್ಯದರ್ಶಿ, ವಿಶೇಷ ಕರ್ತವ್ಯಾಧಿಕಾರಿ, ಆಪ್ತ ಸಹಾಯಕರು ಹಾಗೂ ಇತರೆ ಸಿಬ್ಬಂದಿಗಳಿಗೆ ನಿಗದಿ ಪಡಿಸಿರುವ ಸಂಬಳದ ಹಾಗೂ ಇತರೆ ಭತ್ಯೆಗಳ ಪಟ್ಟಿ ; (ಮಾಹಿತಿ ನೀಡುವುದು)

(ಈ) ನಿಗಮ, ಮಂಡಳಿಗಳ ಅಧ್ಯಕ್ಷರುಗಳ ಆಪ್ತ ಸಿಬ್ಬಂದಿಗಳು ಹಾಗೂ ಶಾಸಕರುಗಳ ಆಪ್ತ ಸಹಾಯಕರುಗಳಿಗೆ ಒಂದೇ ರೀತಿಯ ಸಂಬಳವನ್ನು ನಿಗದಿ ಪಡಿಸಲಾಗಿದೆಯೇ ; ಇಲ್ಲವಾದಲ್ಲಿ, ಆಪ್ತ ಸಹಾಯಕರೆಲ್ಲರಿಗೂ ಒಂದೇ ರೀತಿಯ ಸಂಬಳವನ್ನು ನಿಗದಿ ಪಡಿಸಲು ಸರ್ಕಾರವು ಯಾವ ಕ್ರಮ ಕೈಗೊಳ್ಳಲಿದೆ?

# ಕಲ್ಯಾಣ ಕರ್ನಾಟಕಕ್ಕೆ ಪ್ರತ್ಯೇಕವಾಗಿ ಕೆ.ಎಸ್.ಆರ್.ಪಿ ಘಟಕವನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೨೯೨ (೩೩೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಕಲ್ಯಾಣ ಕರ್ನಾಟಕಕ್ಕೆ ಪ್ರತ್ಯೇಕವಾಗಿ ಕೆ.ಎಸ್.ಆರ್.ಪಿ ಘಟಕವನ್ನು ಸ್ಥಾಪಿಸುವ ಪ್ರಸ್ತಾವನೆಯನ್ನು ಎರಡನೇ ಬಾರಿಗೆ ಹಣಕಾಸು ಇಲಾಖೆ ತಿರಸ್ಕರಿಸಿದ್ದು, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ ಇವರಿಂದ ಹಣಕಾಸು ಇಲಾಖೆಗೆ ಮತ್ತೊಮ್ಮೆ ಪ್ರಸ್ತಾವನೆ ಸಲ್ಲಿಸುವಂತೆ ನೀಡಿರುವ ಮನವಿ ಪತ್ರವು ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಹಲವು ವರ್ಷಗಳಿಂದ ಕಲ್ಯಾಣ ಕರ್ನಾಟಕ ಭಾಗಕ್ಕೆ ಪ್ರತ್ಯೇಕ ಕೆ.ಎಸ್.ಆರ್.ಪಿ ಘಟಕವನ್ನು ಸ್ಥಾಪಿಸುವಂತೆ ಮನವಿ ಮಾಡುತ್ತಿರುವುದನ್ನು ಪರಿಗಣಿಸದೆ ನಂತರದಲ್ಲಿ ಪ್ರಸ್ತಾವನೆ ನೀಡಿರುವ ಮೈಸೂರು ಜಿಲ್ಲೆಯಲ್ಲಿ ಮಾತ್ರ ಹೊಸ ಕೆ.ಎಸ್.ಆರ್.ಪಿ ಘಟಕ ಸ್ಥಾಪನೆಗೆ ಅನುಮತಿ ನೀಡಲು ಕಾರಣವೇನು ಹಾಗೂ ಕಲ್ಯಾಣ ಕರ್ನಾಟಕಕ್ಕೆ ಪ್ರತ್ಯೇಕ ಕೆ.ಎಸ್.ಆರ್.ಪಿ ಘಟಕವನ್ನು ಸ್ಥಾಪಿಸದೆ ಇರಲು ಕಾರಣವೇನು ; (ವಿವರ ನೀಡುವುದು)

(ಇ) ಕೆ.ಎಸ್.ಆರ್.ಪಿ ಘಟಕದಲ್ಲಿ ಕಲ್ಯಾಣ ಕರ್ನಾಟಕಕ್ಕೆ ಸಂಬಂಧಿಸಿದಂತೆ ಪುರುಷ ಹಾಗೂ ಮಹಿಳೆಯರಿಗೆ ಹಂಚಿಕೆಯಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; ಮತ್ತು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಈ) KSRP ಮತ್ತು IRB ಘಟಕಗಳು ಪ್ರತ್ಯೇಕಿಸಿದ್ದರಿಂದ ಕಲ್ಯಾಣ ಕರ್ನಾಟಕದ ಎಷ್ಟು KSRP ಮತ್ತು IRB ಅಧಿಕಾರಿ ಸಿಬ್ಬಂದಿಗಳಿಗೆ ಈಗಾಗಲೇ IRB ಘಟಕಕ್ಕೆ ಪದೋನ್ನತಿ ನೀಡಲಾಗಿದೆ ; ಹಾಗೂ ಎಷ್ಟು ಅಧಿಕಾರಿ ಸಿಬ್ಬಂದಿಗಳು ಹೆಚ್ಚುವರಿಯಾಗಿ ಉಳಿದಿದ್ದಾರೆ ?

## ಮೈಸೂರಿನಲ್ಲಿ ಪುರಷ ಕ್ರೀಡಾ ವಸತಿ ನಿಲಯ ನಿರ್ಮಿಸುವ ಕುರಿತು

**ಡಾ. ಯತೀಂದ್ರ ಎಸ್. (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೯೩ (೩೩೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆಯಲ್ಲಿ ಪುರಷ ಕ್ರೀಡಾ ಪಟುಗಳಿಗೆ ಕೇವಲ ೫ನೇ ತರಗತಿಯಿಂದ ೧೦ನೇ ತರಗತಿಯವರೆ ಮಾತ್ರ ವಸತಿ ನಿಲಯದ ವ್ಯವಸ್ಥೆಯಿರುವುದರಿಂದ ಪುರಷ ಕ್ರೀಡಾ ಪಟುಗಳಿಗೆ ಕ್ರೀಡಾಭ್ಯಾಸವನ್ನು ಮುಂದುವರೆಸಲು ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪುರಷ ಕ್ರೀಡಾಪಟುಗಳಿಗೆ ಪ್ರತ್ಯೇಕ ಕ್ರೀಡಾ ವಸತಿ ನಿಲಯವನ್ನು ನಿರ್ಮಾಣ ಮಾಡಲು ಜಾಗವನ್ನು ಒದಗಿಸಲಾಗಿದೆಯೇ ; ಕಟ್ಟಡ ನಿರ್ಮಾಣಕ್ಕೆ ಎಷ್ಟು ಅನುದಾನವನ್ನು ಒದಗಿಸಲಾಗುತ್ತಿದೆ; ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆಯೇ? (ವಿವರ ಒದಗಿಸುವುದು)

## ಡಿ ದೇವರಾಜ ಅರಸು ನಾಲೆ (ವರುಣ ನಾಲೆ) ಭೂಸ್ವಾಧೀನ ಪರಿಹಾರ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೪ (೩೩೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾವೇರಿ ನೀರಾವರಿ ನಿಗಮ ನಿಯಮಿತದಡಿ ವರುಣಾ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಡಿ ದೇವರಾಜ ಅರಸು ನಾಲೆ (ವರುಣ ನಾಲೆ) ಕಬಿನಿ ನಾಲೆ ಮತ್ತು ಇನ್ನಿತರ ಅಭಿವೃದ್ಧಿ ಕಾಮಗಾರಿಗಳಿಗೆ ಸಾಕಷ್ಟು ಜಮೀನನ್ನು ಭೂ ಸ್ವಾಧೀನ ಪಡಿಸಿಕೊಂಡಿದ್ದು, ಕೆಲವು ರೈತರಿಗೆ ಭೂ ಪರಿಹಾರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈವರೆಗೆ ಸದರಿ ಯೋಜನೆಯ ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಎಷ್ಟು ಭೂ ಪರಿಹಾರ ಬಾಕಿ ಪ್ರಕರಣಗಳಿವೆ; ಸದರಿ ಭೂ ಪರಿಹಾರ ಬಾಕಿ ಪ್ರಕರಣಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ಒದಗಿಸುವುದು)

## ಕಾಫಿ ಬೆಳೆಗಳಿಗೆ ನೀಡುವ ಬೆಳೆ ಪರಿಹಾರ ಕುರಿತು

**ಶ್ರೀ ಕುಶಾಲಪ್ಪ ಎಂ. ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೫ (೩೩೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕೊಡುಗು ಜಿಲ್ಲೆಯಲ್ಲಿ ಹೆಚ್ಚಿನ ಮಳೆಯಿಂದಾಗಿ ಹಾನಿಗೀಡಾಗಿರುವ ಕಾಫಿ ಬೆಳೆಗಳಿಗೆ ಸರ್ಕಾರ ನೀಡಿರುವ ಬೆಳೆ ಪರಿಹಾರ ಎಷ್ಟು ; (ವರ್ಷವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯಲ್ಲಿ ಮಳೆಯಿಂದಾಗಿ ನಷ್ಟವಾದ ಕಾಫಿ ಬೆಳೆಯ ಹಾನಿಯ ಪ್ರಮಾಣ ಎಷ್ಟು ; ಬೆಳೆಹಾನಿ ಕುರಿತು ಜಂಟಿ ಸಮೀಕ್ಷೆ ನಡೆಸಲಾಗಿದೆಯೇ ; (ಯಾವ ಯಾವ ಇಲಾಖೆ ಜತೆಗೂಡಿ ಸಮೀಕ್ಷೆ ನಡೆಸಿದೆ) ಯಾವ ಆಧಾರದ ಮೇಲೆ ಸಮೀಕ್ಷೆಯನ್ನು ನಡೆಸಲಾಗಿದೆ ಮತ್ತು ನಷ್ಟವಾದ ಬೆಳೆ ಹಾನಿಗೆ ಯಾವ ನಿಯಮಗಳ ಅನ್ವಯ ಪರಿಹಾರ ನೀಡಲಾಗುವುದು; ಸಮೀಕ್ಷೆಯ ವರದಿಯನ್ನು ನೀಡುವುದು ;

(ಇ) ಈ ಸಮೀಕ್ಷೆಯನ್ನು ಸ್ಥಳೀಯವಾಗಿ ವಿರೋಧಿಸಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು ; ಮರು ಸಮೀಕ್ಷೆ ಮಾಡಲು ಇಲಾಖೆಯು ಕ್ರಮ ಕೈಗೊಳ್ಳುವುದೇ ;

(ಈ) ಈ ಸಮೀಕ್ಷೆಯ ಅನ್ವಯ ಬಿಡುಗಡೆ ಮಾಡಲಾದ ಪರಿಹಾರ ಮೊತ್ತ ಎಷ್ಟು ; ಬಿಡುಗಡೆ ಮಾಡಬೇಕಾಗಿರುವ ಮೊತ್ತ ಎಷ್ಟು ? (ಸಂತ್ರಸ್ತರ ಮಾಹಿತಿಯೊಂದಿಗೆ ಒದಗಿಸುವುದು)

## ಕೊಡಗು ಜಿಲ್ಲೆಯ ಕೆರೆಗಳ ಅಭಿವೃದ್ಧಿಯ ಕುರಿತು

**ಶ್ರೀ ಕುಶಾಲಪ್ಪ ಎಂ. ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೬ (೩೯೭) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು ಮತ್ತು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಕೆರೆಗಳ ಅಭಿವೃದ್ಧಿಗಾಗಿ ಮಂಜೂರಾದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು):

(ಇ) ಬಿಡುಗಡೆಯಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಕೈಗೊಂಡ ಕಾಮಗಾರಿಗಳು, ಪ್ರಗತಿಯಲ್ಲಿರುವ ಕಾಮಗಾರಿಗಳು ಮತ್ತು ಪೂರ್ಣಗೊಂಡಿರುವ ಕಾಮಗಾರಿಗಳ ತಾಲ್ಲೂಕುವಾರು ವಿವರ ನೀಡುವುದು?

## ಕೆ.ಇ.ಎ ಮತ್ತು ಕೆ.ಪಿ.ಎಸ್.ಸಿ ಸಾಮಾನ್ಯ ಜ್ಞಾನ ಪರೀಕ್ಷೆ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ :–**

೨೯೭ (೩೪೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಗ್ರೂಪ್ 'ಸಿ' ವೃಂದದ ಸಾಮಾನ್ಯ ಜ್ಞಾನ ಪರೀಕ್ಷೆಯ ಕಾಲಾವಧಿ ೨ ಗಂಟೆ ಇದ್ದು, ಕರ್ನಾಟಕ ಲೋಕಸೇವಾ ಆಯೋಗ ನಡೆಸುವ ಗ್ರೂಪ್ 'ಸಿ' ವೃಂದದ ಸಾಮಾನ್ಯ ಜ್ಞಾನ ಪರೀಕ್ಷೆಯ ಕಾಲಾವಧಿಯು ೧ ಗಂಟೆ ೩೦ ನಿಮಿಷ ನಿಗಧಿ ಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕಾರಣಕ್ಕಾಗಿ ಒಂದೇ ವೃಂದದ ಪರೀಕ್ಷೆಗಳಿಗೆ ಬೇರೆ–ಬೇರೆ ಕಾಲವಧಿ ನಿಗಧಿಪಡಿಸಲಾಗಿದೆ ; (ವಿವರ ನೀಡುವುದು)

(ಆ) ಕರ್ನಾಟಕ ಲೋಕಸೇವಾ ಆಯೋಗ ನಡೆಸುವ ಗ್ರೂಪ್ 'ಸಿ' ವೃಂದದ ಸಾಮಾನ್ಯ ಜ್ಞಾನ ಪರೀಕ್ಷೆಯ ಕಾಲಾವಧಿಯು ೧ ಗಂಟೆ ೩೦ ನಿಮಿಷ ನಿಗಧಿ ಪಡಿಸಿರುವುದರಿಂದ ಲಕ್ಷಾಂತರ ಸ್ಪರ್ಧಾರ್ಥಿಗಳಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮಗಳನ್ನು ವಿವರವಾಗಿ ಮತ್ತು ಸ್ಪಷ್ಟವಾಗಿ ವಿವರಿಸುವುದು ;

(ಇ) ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಗ್ರೂಪ್ 'ಸಿ' ವೃಂದದ ಸಾಮಾನ್ಯ ಜ್ಞಾನ ಪರೀಕ್ಷೆಯ ಕಾಲಾವಧಿಯಂತೆ ಕರ್ನಾಟಕ ಲೋಕಸೇವಾ ಆಯೋಗ ನಡೆಸುವ ಗ್ರೂಪ್ 'ಸಿ' ವೃಂದದ ಸಾಮಾನ್ಯ ಜ್ಞಾನ ಪರೀಕ್ಷೆಯ ಕಾಲಾವಧಿಯನ್ನು ೨ ಗಂಟೆಗಳಿಗೆ ನಿಗಧಿಪಡಿಸಲು ಇರುವ ಅಡಚಣೆಗಳಾದರೂ ಏನು ; ಸಮಯ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಕಾಲಾವಧಿ ಹೆಚ್ಚಿಸಿ ಆದೇಶ ಹೊರಡಿಸಲಾಗುವುದು ?

## ಬಿ.ಬಿ.ಎಂ.ಪಿಗೆ ಸೇರಿಸಲ್ಪಟ್ಟ ೧೧೦ ಹಳ್ಳಿಗಳ ಅಭಿವೃದ್ಧಿ ಬಗ್ಗೆ

**ಡಾ|| ಕೆ. ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೮ (೩೪೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹೊಸದಾಗಿ ೭ ನಗರಸಭೆಗಳು (ಬ್ಯಾಟರಾಯನಪುರ, ಯಲಹಂಕ, ಕೆ.ಆರ್.ಪುರಂ, ರಾಜರಾಜೇಶ್ವರಿ ನಗರ, ಬೊಮ್ಮನಹಳ್ಳಿ, ದಾಸರಹಳ್ಳಿ, ಮಹದೇವಪುರ) ಮತ್ತು ೧ ಪುರಸಭೆ (ಕೆಂಗೇರಿ) ಸೇರಿದಂತೆ ಅವುಗಳ ವ್ಯಾಪ್ತಿಯಲ್ಲಿದ್ದ ೧೧೦ ಹಳ್ಳಿಗಳನ್ನು ಯಾವಾಗ ಸೇರಿಸಲಾಯಿತು ;

(ಆ) ಅಂದಿನಿಂದ ಇಂದಿನವರೆಗೆ ಸದರಿ ಹಳ್ಳಿಗಳಿಗೆ ರಸ್ತೆ ಅಭಿವೃದ್ಧಿಗೆ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆ ಮತ್ತು ಇನ್ನಿತರ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಎಷ್ಟು ಖರ್ಚು ಮಾಡಲಾಗಿದೆ ; (ವರ್ಷವಾರು, ಶೀರ್ಷಿಕೆ ವಾರು ವಿವರ ನೀಡುವುದು)

(ಇ) ಪ್ರತಿ ವರ್ಷವೂ ಇಷ್ಟೊಂದು ಅಧಿಕ ಮೊತ್ತದ ಹಣ ವಿನಿಯೋಗ ಮಾಡಿದ ನಂತರವೂ ಸದರಿ ೧೧೦ ಹಳ್ಳಿಗಳ ಮೂಲಸೌಲಭ್ಯ ಅಭಿವೃದ್ಧಿ ಕಾರ್ಯ ಪೂರ್ಣಗೊಳ್ಳದೆ ಜನರು ನಿತ್ಯ ಅನುಭವಿಸುತ್ತರುವ ಭವಣೆಯ ಬಗ್ಗೆ ದೂರುಗಳು ಕೇಳಿ ಬರುತ್ತಿವೆ ಈ ವಿಳಂಬಕ್ಕೆ ಕಾರಣಗಳೇನು ;

(ಈ) ೧೧೦ ಹಳ್ಳಿಗಳಿಗೆ ಮೂಲ ಸೌಲಭ್ಯ ಅಭಿವೃದ್ಧಿ ಕಾರ್ಯ ಪೂರ್ಣಗೊಳ್ಳಲು ಇನ್ನೆಷ್ಟು ಸಮಯ ಬೇಕು ; ವಿವರಗಳನ್ನು ನೀಡುವುದು ;

(ಉ) ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆಯ ಹಿನ್ನೆಲೆಯಲ್ಲಿ ಈ ೧೧೦ ಹಳ್ಳಿಗಳ ಸ್ಥಿತಿಗತಿಗಳೇನು ?

# ಬೆಂಗಳೂರು ನಗರದ ಪೊಲೀಸ್ ವ್ಯವಸ್ಥೆಯನ್ನು ಬಲಪಡಿಸುವ ಬಗ್ಗೆ

**ಶ್ರೀ ಡಾ|| ಕೆ. ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೯ (೩೪೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಗಾಧವಾಗಿ ಬೆಳೆದಿರುವ ಮತ್ತು ನಿರಂತರವಾಗಿ ಬೆಳೆಯುತ್ತಲೇ ಇರುವ ಬೆಂಗಳೂರು ನಗರದ ಅಗತ್ಯಗಳನ್ನು ಪರಿಗಣಿಸಿ ಘನ ಸರ್ಕಾರವು ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚಿಸಿದಂತೆ, ನಗರದಲ್ಲಿನ ಅಪರಾಧ, ಕಾನೂನು ಮತ್ತು ಸುವ್ಯವಸ್ಥೆ, ಸಂಚಾರ ಸಮಸ್ಯೆಗಳು ಮುಂತಾದವುಗಳನ್ನು ಪರಿಗಣಿಸಿ ಬೆಂಗಳೂರು ನಗರದಲ್ಲಿ ಪೊಲೀಸ್ ವ್ಯವಸ್ಥೆಯನ್ನು ಬಲಪಡಿಸುವ ಉದ್ದೇಶ ಸರ್ಕಾರಕ್ಕಿದೆಯೇ ;

(ಆ) ಪ್ರಸ್ತುತ ೭೪೧ ಚದರ ಕಿಲೋ ಮೀಟರ್ ವಿಸ್ತೀರ್ಣವಿದ್ದು, ೧೪೦ ಲಕ್ಷ ಜನಸಂಖ್ಯೆ ಇರುವ ಬೆಂಗಳೂರು ನಗರದಲ್ಲಿ ೧೨೩ ಲಕ್ಷ ವಿವಿಧ ಬಗೆಯ ವಾಹನಗಳಿದ್ದು ಪ್ರತಿದಿನ ಸರಾಸರಿ ೨೦೦೦ ವಾಹನಗಳಂತೆ ತಿಂಗಳಿಗೆ ೬೦,೦೦೦ ವಾಹನಗಳು ಬೆಂಗಳೂರು ನಗರಕ್ಕೆ ಸೇರಲ್ಪಡುತ್ತಿವೆ, ದೇಶದಲ್ಲಿಯೇ ಅತ್ಯಧಿಕ ವಾಹನಗಳಿರುವ ನಗರಗಳ ಸಾಲಿನಲ್ಲಿ ಬೆಂಗಳೂರು ೩ನೇ ಸ್ಥಾನದಲ್ಲಿದ್ದು ಉದ್ಯೋಗ ಶಿಕ್ಷಣ, ವ್ಯಾಪಾರಕ್ಕೆಂದು ನಗರಕ್ಕೆ ಬರುತ್ತಿರುವವರ ಸಂಖ್ಯೆ ದಿನೇ ದಿನೇ ಹೆಚ್ಚಾಗುತ್ತಲೇ ಇರುವುದರಿಂದ ಬೆಂಗಳೂರು ನಗರವನ್ನು ಪುನರ್ ರಚಿಸಿ ಗ್ರೇಟರ್ ಬೆಂಗಳೂರು ಪ್ರಾಧಿಕಾರವನ್ನು ರಚಿಸಿದಂತೆ, ಬೆಂಗಳೂರು ಪೊಲೀಸ್ ಕಮಿಷನರೇಟ್‌ನ್ನು ಪುನರ್ ರಚಿಸಿ ಪೊಲೀಸ್ ಆಯುಕ್ತರ ಮತ್ತೊಂದು ಹುದ್ದೆಯನ್ನು ಇನ್ನಿತರ ಪೂರಕ ಹುದ್ದೆಗಳೊಂದಿಗೆ ಹೊಸದಾಗಿ ಸೃಜಿಸಿ ಪೊಲೀಸ್ ವ್ಯವಸ್ಥೆಯನ್ನು

ಬಲಪಡಿಸುವ ಅವಶ್ಯಕತೆ ಇದ್ದು ಈ ಬಗ್ಗೆ ಸರ್ಕಾರ ತೀವ್ರವಾಗಿ ಚಿಂತನೆ ನಡೆಸಿದೆಯೇ;

(ಇ) ದೇಶದ ಕೆಲವು ನಗರಗಳಲ್ಲಿ ಎರಡು ಪೊಲೀಸ್ ಆಯುಕ್ತರ ಹುದ್ದೆಗಳು ಇರುವ ಹಿನ್ನಲೆಯಲ್ಲಿ ಸರ್ಕಾರ ಈ ಬಗ್ಗೆ ಕೂಡಲೇ ಕಾರ್ಯಪ್ರವೃತ್ತವಾಗಲಿದೆಯೇ ?

## ಸೈಬರ್ ವಂಚನೆ ಪ್ರಕರಣಗಳ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೦ (೩೪೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚಿನ ೦೩ ವರ್ಷಗಳಲ್ಲಿ ಪತ್ತೆಯಾದ ಮತ್ತು ದಾಖಲಾದ ಸೈಬರ್ ವಂಚನೆ ಡಿಜಿಟಲ್ ಅರೆಸ್ಟ್ ಮತ್ತು ಡಿಜಿಟಲ್ ಆರ್ಥಿಕ ಅಪರಾಧ ಪ್ರಕರಣಗಳು ಎಷ್ಟು; ಅವುಗಳ ಮೊತ್ತವೆಷ್ಟು ; ಆರೋಪಿಗಳಿಂದ ವಸೂಲಿ ಮಾಡಲಾದ ಮೊತ್ತವೆಷ್ಟು; ಪತ್ತೆಯಾಗದೇ ಇರುವ ಪ್ರಕರಣಗಳು ಎಷ್ಟು ; ಪತ್ತೆಯಾಗದ ಇಂತಹ ಪ್ರಕರಣಗಳ ಒಟ್ಟು ಆರ್ಥಿಕ ಮೊತ್ತವೆಷ್ಟು ;

(ಆ) ಸೈಬರ್/ಡಿಜಿಟಲ್ ವಂಚನೆ ಮತ್ತು ಆರ್ಥಿಕ ಅಪರಾಧ ಪ್ರಕರಣಗಳನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳು ಯಾವುವು ;

(ಇ) ರಾಜ್ಯದಲ್ಲಿ ಇತ್ತೀಚಿನ ೦೩ ವರ್ಷಗಳಲ್ಲಿ ಪತ್ತೆಯಾದ ಮತ್ತು ದಾಖಲಾದ ಮಾದಕ ದ್ರವ್ಯ ಉತ್ಪದನೆ, ಸಾಗಾಣಿಕೆ, ಮಾರಾಟ ಮತ್ತು ಸೇವನೆ ಪ್ರಕರಣಗಳು ಎಷ್ಟು ; ಅವುಗಳ ಮೊತ್ತವೆಷ್ಟು; ಬಂದಿಸಿದ ಆರೋಪಿಗಳಲ್ಲಿ ವಿದ್ಯಾರ್ಥಿಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಹೊರದೇಶದ ಎಷ್ಟು ವಿದ್ಯಾರ್ಥಿಗಳು ಇಂತಹ ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆ ; ಇಂತಹ ಪ್ರಕರಣಗಳಲ್ಲಿ ಏನೇನು ಶಿಸ್ತು ಕ್ರಮ ಕೈಗೊಳ್ಳಲಾಗಿದೆ ;

(ಉ) ಮಾದಕ ದ್ರವ್ಯ ಸೇವೆಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳು ಏನು ;

(ಊ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪೊಲೀಸ್ ಠಾಣೆಗಳನ್ನು ತರೆಯಲಾಗಿದೆಯೇ; ಸದರಿ ಠಾಣೆಗಳಿಗೆ ಮಂಜೂರುಗೊಳಿಸಿದ ವಿವಿಧ ದರ್ಜೆಯ ಹುದ್ದೆಗಳು ಎಷ್ಟು; ಅವುಗಳಲ್ಲಿ ಭರ್ತಿಯಾದ ಮತ್ತು ಖಾಲಿ ಇರುವ ಹುದ್ದೆಗಳು ಎಷ್ಟು ; ಖಾಲಿ ಹುದ್ದೆಗಳನ್ನು ಭರ್ತಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಸರ್ಕಾರಿ ಕಾರ್ಯಕ್ರಮಗಳ ಶಿಷ್ಠಾಚಾರ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೧ (೩೪೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಕಾರ್ಯಕ್ರಮಗಳನ್ನು ಆಯೋಜಿಸುವಾಗ ಪಾಲಿಸಬೇಕಾದ ಶಿಷ್ಠಾಚಾರದ ಬಗ್ಗೆ ಆದೇಶವನ್ನು ಸರ್ಕಾರವು ಮಾಡಿರುತ್ತದೆ ಇದರಲ್ಲಿ ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸರ್ಕಾರಿ ಕಾರ್ಯಕ್ರಮಗಳನ್ನು ನಡೆಸುವಾಗ ಪಾಲಿಸಬೇಕಾದ ಶಿಷ್ಠಾಚಾರದ ಮಾಹಿತಿ ಮಾತ್ರ ಇದೆ, ಆದರೆ ಗ್ರಾಮ ಪಂಚಾಯಿತಿ ಅಥವಾ ಗ್ರಾಮ ಮಟ್ಟದ ಕಾರ್ಯಕ್ರಮಗಳ ಶಿಷ್ಠಾಚಾರವನ್ನು ಅದರಲ್ಲಿ ಕಾಣಿಸದಿರಲು ಕಾರಣವೇನು ;

(ಆ) ಗ್ರಾಮ ಪಂಚಾಯತ್‌ಗಳು ಗ್ರಾಮ ಮಟ್ಟದಲ್ಲಿ ನಡೆಸುವ ಸರ್ಕಾರಿ ಕಾರ್ಯಕ್ರಮಗಳನ್ನು ಯಾವ ಶಿಷ್ಠಾಚಾರದತೆ ನಡೆಸಬೇಕು; ಮಾರ್ಗಸೂಚಿ ಒದಗಿಸುವುದು ;

(ಇ) ಗ್ರಾಮ ಪಂಚಾಯತ್ ಸ್ವಂತ ನಿಧಿ ೧೫ ನೇ ಹಣಕಾಸು, ಸಿಎಸ್‌ಆರ್ ಅನುದಾನದಲ್ಲಿ ಒಂದು ಕಟ್ಟಡವನ್ನು ನಿರ್ಮಿಸಿದರೆ ಅದರ ಉದ್ಘಾಟನೆ ಯಾರು ಮಾಡಬೇಕು; ಆ ಕಾರ್ಯಕ್ರಮಕ್ಕೆ ಸರ್ಕಾರ ಶಿಷ್ಠಾಚಾರದಂತೆ ಯಾರಿಗೆಲ್ಲಾ ಆಹ್ವಾನ ನೀಡಬೇಕು ; ಮಾದರಿ ಆಮಂತ್ರಣ ಪತ್ರಿಕೆಯ ಪ್ರತಿಯನ್ನು ಒದಗಿಸುವುದು ;

(ಈ) ಗ್ರಾಮ ಪಂಚಾಯತ್ ಸರ್ಕಾರದ ವಿಶೇಷ ಅನುದಾನದಿಂದ ರಸ್ತೆ, ಶೌಚಾಲಯ, ಶಾಲಾ ಕೊಠಡಿ ಅಂಗನವಾಡಿ, ಸ್ಮಶಾನ ಅಥವಾ ಕಟ್ಟಡವನ್ನು ನಿರ್ಮಿಸಿದರೆ ಅದರ ಲೋಕಾರ್ಪಣೆ ಕಾರ್ಯಕ್ರಮಕ್ಕೆ ಪಾಲಿಸಬೇಕಾದ ಶಿಷ್ಠಾಚಾರದ ಕ್ರಮ ಏನು ? (ವಿವರಣೆ ನೀಡುವುದು)

## ಅತಿಥಿ ಉಪನ್ಯಾಸಕರ ವೇತನ ಹೆಚ್ಚಳ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೦೨ (೩೪೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ವೇತನವು ತುಂಬಾ ಕಡಿಮೆ ಇದ್ದು ಇದನ್ನು ಹೆಚ್ಚಳ ಮಾಡುವ ಬಗ್ಗೆ ಸರ್ಕಾರ ೨೦೨೬-೨೭ನೇ ಸಾಲಿನ ಆಯ-ವ್ಯಯದಲ್ಲಿ ಕ್ರಮ ವಹಿಸುವುದೇ ;

(ಆ) ರಾಜ್ಯದ ಹಲವಾರು ಅತಿಥಿ ಉಪನ್ಯಾಸಕರು ಹಲವು ಬಾರಿ ಈ ನಿಟ್ಟಿನಲ್ಲಿ ಹೋರಾಟವನ್ನು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ;

(ಇ) ಅತಿಥಿ ಉಪನ್ಯಾಸಕರು ತಿಂಗಳಿಗೆ ಕನಿಷ್ಠ ರೂ.೩೦,೦೦೦/- ವೇತನ ನೀಡುವಂತೆ ಮನವಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ; ಈ ನಿಟ್ಟಿನಲ್ಲಿ ಸರ್ಕಾರದ ನಿಲುವೇನು ;

(ಈ) ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ವರ್ಷದಲ್ಲಿ ೧೦ ತಿಂಗಳ ವೇತನ ನೀಡುತ್ತಿದ್ದು ಇದನ್ನು ೨೦೨೬-೨೭ನೇ ಸಾಲಿನಿಂದ ವರ್ಷ ಪೂರ್ತಿ (೧೨ ತಿಂಗಳು) ನೀಡಲು ಕ್ರಮ ವಹಿಸಲಾಗುವುದೇ ; ಇಲ್ಲವಾದಲ್ಲಿ ೨ ತಿಂಗಳ 'ದೈನಂದಿನ ಖರ್ಚು ವೆಚ್ಚಗಳಿಗೆ ಪರ್ಯಾಯ ಮಾರ್ಗ ಏನು ?

## ಕ್ರೀಡಾಪಟುಗಳ ನೇಮಕಾತಿಗೆ ಮೀಸಲಾತಿ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೦೩ (೩೪೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಕ್ರೀಡೆಯಲ್ಲಿ ಸಾಧನೆ ಮಾಡಿದ ರಾಜ್ಯದ ಕ್ರೀಡಾಪಟುಗಳ ನೇಮಕಾತಿಗೆ ಕ್ರೀಡಾ ಮೀಸಲಾತಿ ಕಲ್ಪಿಸಲಾಗಿದೆಯೇ ; ಕಲ್ಪಿಸಿದಲ್ಲಿ ಯಾವ ಇಲಾಖೆಗಳಲ್ಲಿ ಎಷ್ಟು ಮೀಸಲಾತಿ ಕಲ್ಪಿಸಿ ನೇಮಕಾತಿಗೆ ಅವಕಾಶ ಕಲ್ಪಿಸಲಾಗಿದೆ ; ಹುದ್ದೆಗಳ ದರ್ಜೆ ಮತ್ತು ಪದನಾಮ ಸಹಿತ ವಿವರ ನೀಡುವುದು ;

(ಆ) ಯಾವ ವರ್ಷದಿಂದ ಸದರಿ ಮೀಸಲಾತಿಯನ್ನು ಪ್ರಾರಂಭಿಸಲಾಗಿದೆ ಮತ್ತು ಕ್ರೀಡಾ ಕೋಟಾದಡಿ ನೇಮಕಾತಿಗೊಳ್ಳಲು ಇರಬೇಕಾದ ವಿವಿಧ ಅರ್ಹತೆ ಮತ್ತು ನೇಮಕಾತಿ ಮಾನದಂಡವೇನು ;

(ಇ) ಕ್ರೀಡಾ ಕೋಟಾದಡಿ ವಿವಿಧ ಇಲಾಖೆಗಳಿಗೆ ಮಂಜೂರಾದ ವಿವಿಧ ದರ್ಜೆಯ ಒಟ್ಟು ಹುದ್ದೆಗಳು ಎಷ್ಟು; ಭರ್ತಿಯಾದ ಮತ್ತು ಪ್ರಸ್ತುತ ಖಾಲಿ ಇರುವ ಹುದ್ದೆಗಳು ಎಷ್ಟು; ಕ್ರೀಡಾ ಕೋಟಾದಲ್ಲಿ ಈವರೆಗೂ ನೇಮಿಸಿದ ವಿವಿಧ ದರ್ಜೆಯ ಹುದ್ದೆಗಳು ಎಷ್ಟು; ಸದರಿ ಕೋಟಾದಡಿ ನೇಮಕ ಗೊಂಡವರ ಕ್ರೀಡಾ ಸಾಧನೆಗಳು ಏನು ; (ಸಂಪೂರ್ಣ ವಿವರ ನೀಡುವುದು)

(ಈ) ಸರ್ಕಾರದ ವಿವಿಧ ನಿಗಮ, ಮಂಡಳಿ, ಪ್ರಾಧಿಕಾರ ಮತ್ತು ಸಾರ್ವಜನಿಕ ಉದ್ದಿಮೆಗಳಲ್ಲಿರುವ ಹುದ್ದೆಗಳ ಭರ್ತಿಗೆ ಕ್ರೀಡಾ ಮೀಸಲಾತಿಯನ್ನು ಕಲ್ಪಿಸಲಾಗಿದೆಯೇ ;

(ಉ) ಕ್ರೀಡಾಪಟುಗಳು ಇಲಾಖೆಗೆ ನೇಮಕಾತಿಯಾದ ನಂತರ ಅವರಿಗೆ ಕ್ರೀಡೆಯಲ್ಲಿ ಸಾಧನೆ ಮಾಡಲು ಸರ್ಕಾರದಿಂದ ಏನೆಲ್ಲಾ ಪ್ರೋತ್ಸಾಹವನ್ನು ನೀಡಲಾಗುತ್ತಿದೆ ? (ಮಾಹಿತಿ ನೀಡುವುದು)

## ನ್ಯಾಷನಲ್ ಹೆರಾಲ್ಡ್ ಪತ್ರಿಕೆಗೆ ಸಂಬಂಧಿಸಿದ ಮಾಹಿತಿ ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೩೦೪ (೩೪೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನ್ಯಾಷನಲ್ ಹೆರಾಲ್ಡ್ ಪತ್ರಿಕೆಗೆ ರಾಜ್ಯ ಸರ್ಕಾರವು ಜಾಹಿರಾತಿಗಾಗಿ ಎಷ್ಟು ಹಣವನ್ನು ಇಲ್ಲಿಯವರೆಗೆ ಸಂದಾಯ ಮಾಡಿದೆ ; (ಸಂಪೂರ್ಣ ವಿವರ ಒದಗಿಸುವುದು)

(ಆ) ನ್ಯಾಷನಲ್ ಹೆರಾಲ್ಡ್ ಪತ್ರಿಕೆಯು ಎಷ್ಟು ಸಂಖ್ಯೆಗಳಲ್ಲಿ ಸರ್ಕ್ಯುಲೇಷನ್ ತಲುಪುತ್ತಿದೆ ;

(ಇ) ಈ ಪತ್ರಿಕೆಗೆ ಜಾಹೀರಾತು ಹೊರತುಪಡಿಸಿ ಯಾವ ಬಾಬ್ತಿನಲ್ಲಿ ಹಣವನ್ನು ಬಿಡುಗಡೆ ಮಾಡಲಾಗಿದೆ ; (ವಿವರ ಒದಗಿಸುವುದು)

(ಈ) ನ್ಯಾಷನಲ್ ಹೆರಾಲ್ಡ್ ಪತ್ರಿಕೆಗೆ ಈ ಪ್ರಮಾಣದಲ್ಲಿ ಹಣ ಬಿಡುಗಡೆ ಮಾಡಲು ಕಾರಣಗಳೇನು ;

(ಉ) ಮಾರ್ಕೆಟಿಂಗ್ ಮತ್ತು ಕನ್ಸಲ್ಟೆಂಟ್ಸ್ (ಕರ್ನಾಟಕ ಸರ್ಕಾರದ ಉದ್ಯಮ) ಸಂಸ್ಥೆಯಿಂದ ಬಿಡುಗಡೆ ಮಾಡಲಿರುವ ಹಣದ ವಿವರ ಒದಗಿಸುವುದು ?

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿನ ಸಿ ಅಂಡ್ ಆರ್ ನಿಯಮಗಳ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೩೦೫ (೩೫೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನೌಕರರಿಗೆ ಸಂಬಂಧಪಟ್ಟಂತೆ ಸಿ ಅಂಡ್ ಆರ್ ನಿಯಮಗಳನ್ನು ತಿದ್ದುಪಡಿ ಮಾಡಿ ಎಷ್ಟು ವರ್ಷ ಆಗಿರುತ್ತದೆ ; ಪ್ರಸ್ತುತ ಕಾಲಘಟ್ಟಕ್ಕೆ ಅನುಗುಣವಾಗಿ ನೌಕರರ ನಿಯಮಾವಳಿಗಳನ್ನು ಬದಲಾವಣೆ ಮಾಡುವ ಉದ್ದೇಶ ರಾಜ್ಯ ಸರ್ಕಾರಕ್ಕೆ ಇರುತ್ತದೆಯೇ ;

(ಆ) ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನೌಕರರಿಗೆ ಸಂಬಂಧಪಟ್ಟಂತೆ ಕರ್ನಾಟಕ ರಾಜ್ಯ ಸರ್ಕಾರ ಐಎಎಸ್ ನಿವೃತ್ತ ಅಧಿಕಾರಿ ಶ್ರೀನಿವಾಸಮೂರ್ತಿರವರ ನಾಯಕತ್ವದಲ್ಲಿ ಸಲಹಾ ಸಮಿತಿಯನ್ನು ರಚಿಸಲಾಗಿತ್ತೆ ; ಆಗಿದ್ದಲ್ಲಿ, ಸದರಿ ಸಮಿತಿಯು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತದೆಯೇ :

(ಇ) ರಾಜ್ಯದಲ್ಲಿ ಎಷ್ಟು ಜಿಲ್ಲೆಗಳಲ್ಲಿ ಜಿಲ್ಲಾ ಅಧಿಕಾರಿಗಳನ್ನು ಮತ್ತು ಜಿಲ್ಲಾ ವಾರ್ತಾ ಕಛೇರಿಗಳನ್ನು ಹೊಂದಿರುತ್ತದೆ; ಜಿಲ್ಲಾ ಕಛೇರಿಗಳ ನಿರ್ವಹಣೆಗೆ ಪ್ರತಿ ತಿಂಗಳು ನೀಡುತ್ತಿರುವ ಅನುದಾನವೆಷ್ಟು; ಇದನ್ನು ಹೆಚ್ಚಿಸುವ ಉದ್ದೇಶ ಸರ್ಕಾರದ ಮುಂದೆ ಇರುತ್ತದೆಯೇ ;

(ಈ) ಇಲಾಖೆಯಲ್ಲಿ ತಾಲ್ಲೂಕು ಕೇಂದ್ರಗಳಲ್ಲಿ ಸಹಾಯಕ ನಿರ್ದೇಶಕರನ್ನು ಅಥವಾ ವಾರ್ತಾ ಅಧಿಕಾರಿಗಳನ್ನು ನೇಮಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಯಾವಾಗ ಇದನ್ನು ಕಾರ್ಯಗತಗೊಳಿಸಲಾಗುವುದು ?

# ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೩೦೬ (೩೫೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ೧೧೦ ಹಳ್ಳಿಗಳಿಗೆ ಕಾವೇರಿ ನೀರಿನ ಸಂಪರ್ಕ ಕಲ್ಪಿಸುವ ಯೋಜನೆಯಲ್ಲಿ ಇಲ್ಲಿಯವರೆಗೆ ಎಷ್ಟು ಗ್ರಾಮಗಳಿಗೆ ನೀರಿನ ಸಂಪರ್ಕ ಕಲ್ಪಿಸಲಾಗಿದೆ ; ನೀರಿನ ಸಂಪರ್ಕಕ್ಕೆ ಬಾಕಿ ಇರುವ ಗ್ರಾಮಗಳೆಷ್ಟು ;

(ಆ) ಈ ಯೋಜನೆಯ ಕಾಮಗಾರಿಗೆ ನಿಗದಿಗೊಳಿಸಿದ್ದ ಅಂದಾಜು ಪಟ್ಟಿ ಎಷ್ಟು ; ಕಾಮಗಾರಿ/ಯೋಜನೆಯನ್ನು ಜಾರಿಗೊಳಿಸಲು ನಿಗದಿಗೊಳಿಸಿದ ಸಮಯವೆಷ್ಟು ; ಕಾಮಗಾರಿ ಸಂಪೂರ್ಣ ಜಾರಿಯಾಗದೇ ಇದ್ದಲ್ಲಿ ಕಾರಣಗಳೇನು ;

(ಇ) ಸದರಿ ಯೋಜನೆಯ ಕಾಮಗಾರಿಯನ್ನು ಎಷ್ಟು ಪ್ಯಾಕೇಜುಗಳಲ್ಲಿ ಗುತ್ತಿಗೆದಾರರಿಗೆ ನೀಡಲಾಗಿದೆ ; ಪ್ರತಿ ಕಾಮಗಾರಿಗಳಿಗೆ ನಿಗದಿಪಡಿಸಿರುವ ಕಾಲಮಿತಿ ಎಷ್ಟು ; ನಿಗದಿತ ಸಮಯದಲ್ಲಿ ಕಾಮಗಾರಿ ಪೂರ್ಣಗೊಳಿಸಿ ಕುಡಿಯುವ ನೀರಿನ ಸಂಪರ್ಕ ನೀಡಲಾಗಿದೆಯೇ ; (ಪೂರ್ಣ ವಿವರಗಳನ್ನು ಒದಗಿಸುವುದು)

(ಈ) ಕಾವೇರಿ ಕುಡಿಯುವ ನೀರಿನ ಯೋಜನೆಯಲ್ಲಿ ತಲಘಟ್ಟಪುರ ಹಳೇ ಸರ್ವೆ ನಂಬರ್ ಭಾಗದ (ನ್ಯಾಯಾಂಗ ಬಡಾವಣೆ ಮುಖ್ಯರಸ್ತೆ ೧ ರಿಂದ ೪) ಕೆಲವು ರಸ್ತೆಗಳ ನಿವಾಸಿಗಳಿಗೆ ನೀರಿನ ಸಂಪರ್ಕ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವಾಗ ನೀರಿನ ಸಂಪರ್ಕ ನೀಡಲಾಗುವುದು ?

## ಗೃಹ ಇಲಾಖೆಯ ಸಂಚಾರಿ ಪೊಲೀಸರ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :-**

೩೦೭ (೩೫೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರ ಮತ್ತು ಬೆಂಗಳೂರು ಸಂಚಾರಿ ಪೋಲೀಸರು ಸಂಚಾರಿ ನಿಯುಮಗಳ ಉಲ್ಲಂಘನೆ ಸಂಬಂಧ ದಂಡ ವಸೂಲಾತಿಯಲ್ಲಿ ಹಳೆಯ ಪ್ರಕರಣಗಳಿಗೆ ಶೇ.೫೦% ರಷ್ಟು ರಿಯಾಯಿತಿ ನೀಡುತ್ತಿರುವುದಾಗಿ ಸುತ್ತೋಲೆ ನೀಡಿದ್ದು, ೨೧-೧೧-೨೦೨೫ ರಿಂದ ೧೨-೧೨-೨೦೨೫ ರವರೆಗೆ ಅವಕಾಶ ನೀಡಿದ್ದರೂ, ಸಂಚಾರಿ ನಿಯಮಗಳ ಉಲ್ಲಂಘನೆಯಲ್ಲಿ ದಂಡ ಪಾವತಿಸಲು ಸರ್ಕಾರ ನಿಗದಿಪಡಿಸಿರುವ ಕಾಲಮಿತಿ ಎಷ್ಟು;

(ಆ) ಕಾಲಮಿತಿ ಕಾಯಿದೆಯ ಅಡಿಯಲ್ಲಿ ಕಾಲಮಿತಿ ಮೀರಿದ ಪ್ರಕರಣಗಳಲ್ಲಿ ಸಂಚಾರಿ ದಂಡಗಳನ್ನು ವಸೂಲಿ ಮಾಡಲು ಅವಕಾಶ ಇದೆಯೇ ; ಇದ್ದಲ್ಲಿ, ಅದರ ವಿವರಗಳನ್ನು ಒದಗಿಸುವುದು ;

(ಇ) ಸಂಚಾರಿ ನಿಯಮಗಳನ್ನು ಉಲ್ಲಂಘನೆ ಮಾಡಿದ ಪ್ರಕರಣಗಳಲ್ಲಿ ಆರೋಪಿಗಳ ವಿರುದ್ಧ ಎಫ್ಐಆರ್ ದಾಖಲಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; ಕೆಲವು ಸಂಚಾರಿ ಉಲ್ಲಂಘನೆಯ ಪ್ರಕರಣಗಳು ಸಣ್ಣ ಅಪರಾಧಗಳ ವ್ಯಾಪ್ತಿಯಲ್ಲಿ ಬರುತ್ತಿದ್ದು, ಇಂತಹ ಪ್ರಕರಣಗಳಲ್ಲಿ ಎಫ್ಐಆರ್ ದಾಖಲಿಸುವುದು ನಿಯಮಬಾಹಿರ ಆಗುವುದಿಲ್ಲವೇ ;

(ಈ) ಮೂರು ವರ್ಷ ಗತಿಸಿದ ಪ್ರಕರಣಗಳಲ್ಲಿ ಸಂಚಾರಿ ನಿಯಮಗಳ ಉಲ್ಲಂಘನೆಯ ದಂಡ ವಸೂಲಾತಿಯನ್ನು ಕೈಬಿಡುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಯಾವಾಗ ಇದನ್ನು ಜಾರಿಗೊಳಿಸಲಾಗುವುದು ;

(ಉ) ಕರ್ನಾಟಕದಲ್ಲಿ ಪ್ರತಿ ವರ್ಷ ಸಂಚಾರಿ ನಿಯಮಗಳ ಉಲ್ಲಂಘನೆ ಪ್ರಕರಣದಲ್ಲಿ ವಸೂಲಾಗುತ್ತಿರುವ ದಂಡದ ಮೊತ್ತ ಎಷ್ಟು? (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

## ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೩೦೮ (೩೫೫) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಕಳೆದ ೩ ವರ್ಷಗಳಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಮಾಹಿತಿಯನ್ನು ಪ್ರಸಾರ ಮಾಡುವ ಮತ್ತು ವೈಜ್ಞಾನಿಕ ಅರಿವನ್ನು ಮೂಡಿಸುವ ನಿಟ್ಟಿನಲ್ಲಿ ಎಷ್ಟು ಕಾರ್ಯಕ್ರಮಗಳನ್ನು ಆಯೋಜಿಸಿರುತ್ತದೆ ; (ಪೂರ್ಣ ಮಾಹಿತಿಯನ್ನು ಒದಗಿಸುವುದು)

(ಆ) ಪಿಲಿಕುಳ ಪ್ರಾದೇಶಿಕ ವಿಜ್ಞಾನ ಕೇಂದ್ರಕ್ಕೆ ಕೇಂದ್ರ ಸರ್ಕಾರ ಕಳೆದ ೧೦ ವರ್ಷಗಳಲ್ಲಿ ನೀಡಿರುವ ಅನುದಾನ ಎಷ್ಟು ; ಬಿಡುಗಡೆಗೆ ಬಾಕಿ ಇರುವ ಅನುದಾನಗಳೆಷ್ಟು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಇ) ಮಂಗಳೂರು ಬಳಿ ಇರುವ ಪಿಲಿಕುಳ ನಿಸರ್ಗಧಾಮದಲ್ಲಿ ಇರುವ ಸ್ವಾಮಿ ವಿವೇಕಾನಂದ ತಾರಾಲಯಕ್ಕೆ ಇಲ್ಲಿಯವರೆಗೆ ಎಷ್ಟು ವಿದ್ಯಾರ್ಥಿಗಳು ಭೇಟಿ ನೀಡಿ ವೀಕ್ಷಣೆ ಮಾಡಿರುತ್ತಾರೆ ; ಈ ತಾರಾಲಯಕ್ಕೆ ಶೈಕ್ಷಣಿಕ ಪ್ರವಾಸ ಮಾಡುವ ವಿದ್ಯಾರ್ಥಿಗಳಿಗೆ ಮತ್ತು ಶೈಕ್ಷಣಿಕ ಸಂಸ್ಥೆಗಳಿಗೆ ಸರ್ಕಾರ ಯಾವ ರೀತಿಯ ಉತ್ತೇಜನ ನೀಡುತ್ತಿದೆ ;

(ಈ) ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಡಿಯಲ್ಲಿ ರಾಜ್ಯದಲ್ಲಿ ಎಷ್ಟು ತಾರಾಲಯಗಳು ಇರುತ್ತವೆ ; ಇವುಗಳಿಗೆ ಪ್ರತಿ ವರ್ಷ ರಾಜ್ಯ ಸರ್ಕಾರ ನೀಡುತ್ತಿರುವ ಅನುದಾನ ಎಷ್ಟು ; (ವಿವರಗಳನ್ನು ಒದಗಿಸುವುದು)

(ಉ) ಧಾರವಾಡದ ಪ್ರಾದೇಶಿಕ ವಿಜ್ಞಾನ ಕೇಂದ್ರಕ್ಕೆ ಕೇಂದ್ರ ಸರ್ಕಾರ ವಾರ್ಷಿಕವಾಗಿ ನೀಡುತ್ತಿರುವ ಅನುದಾನವೆಷ್ಟು ; ೨೦೧೨ ರಿಂದ ಇಲ್ಲಿಯವರೆಗೆ ಕೇಂದ್ರ ಸರ್ಕಾರ ಎಷ್ಟು ಅನುದಾನ/ಸಹಾಯಧನ ನೀಡಿದೆ ? (ವಿವರಗಳನ್ನು ಒದಗಿಸುವುದು)

## ಎಸ್‌ಸಿ./ ಎಸ್‌ಟಿ. ಜ್ಯೇಷ್ಠತೆ ಸಂರಕ್ಷಣಾ ಕಾಯ್ದೆ ಅನುಷ್ಠಾನದ ಸುತ್ತೋಲೆ ಹಿಂಪಡೆಯುವಿಕೆ ಕುರಿತು

**ಶ್ರೀ ಎಫ್.ಹೆಚ್. ಜಕ್ಕಪ್ಪನವರ್ (ನಾಮನಿರ್ದೇಶನ ಹೊಂದಿದವರು) :–**

೩೮೯ (೩೫೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಕೆ.ಪವಿತ್ರ ತೀರ್ಪು–೧ರ ನಂತರ ರಾಜ್ಯ ಸರ್ಕಾರವು ಜ್ಯೇಷ್ಠತೆ ಸಂರಕ್ಷಣಾ ಕಾಯ್ದೆ ರೂಪಿಸಿ ಅಧಿಸೂಚನೆ ಸಂಖ್ಯೆ ಸಂವ್ಯಶಾಇ ೪೪ ಶಾಸನ ೨೦೧೭. ದಿನಾಂಕ:೨೩.೦೬.೨೦೧೮ನ್ನು ಜಾರಿಗೊಳಿಸಿದ್ದಾಗಿಯೂ, ಸದರಿ ಕಾಯ್ದೆ ಜಾರಿಯಾಗದಂತೆ ಸಿಆಸುಇಲಾಖೆ ಸಂಖ್ಯೆ : ಸಿಆಸುಇ ೧೮೬ ಎಸ್‌ಆರ್‌ಎಸ್ ೨೦೧೮, ದಿನಾಂಕ : ೨೪.೦೬.೨೦೧೯ ರಂದು ಸುತ್ತೋಲೆ ಹೊರಡಿಸುವುದರ ಮೂಲಕ ಎಸ್‌ಸಿ/ಎಸ್‌ಟಿ ನೌಕರರ ಜ್ಯೇಷ್ಠತೆ ಸಂರಕ್ಷಣೆಯಾಗದಂತೆ ನಿರ್ದೇಶನ ನೀಡಿರುವುದರಿಂದ ವಿವಿಧ ಇಲಾಖೆಗಳಲ್ಲಿ ಜ್ಯೇಷ್ಠತೆಯನ್ನು ಸಂರಕ್ಷಿಸಲಾಗದೇ ಇರುವುದಕ್ಕೆ ಕಾರಣವಾದ ಸುತ್ತೋಲೆಯನ್ನು ಸರ್ಕಾರ ಪೂರ್ವಾನ್ವಯವಾಗಿ ವಾಪಸ್ ಪಡೆಯುವುದೇ ;

(ಆ) ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ಉಡುಪಿ ಜಿಲ್ಲಾಧಿಕಾರಿಗಳಿಗೆ ಸಂಖ್ಯೆ:ಸಿಆಸುಇ/೮೫/ಸೇನೇನಿ/೨೦೨೧, ದಿನಾಂಕ:೦೪.೦೮.೨೦೨೧ ರಲ್ಲಿ ತಪ್ಪು ಸ್ಪಷ್ಟೀಕರಣ ನೀಡಿ ಮೀಸಲಾತಿ ಜಾರಿಯಾಗದಂತೆ ನಿರ್ದೇಶನ ನೀಡಿರುವ ಅಧಿಕಾರಿಗಳ ಮೇಲೆ ಸರ್ಕಾರ ಶಿಸ್ತು ಕ್ರಮ ಕೈಗೊಳ್ಳದೆ ಇರಲು ಕಾರಣವೇನು ;

(ಇ) ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಪತ್ರ ಸಂಖ್ಯೆ : ಸಿಆಸುಇ ೧೭೪ ಸೇನಿಎ ೨೦೨೩ (ಸೇವಾ ನಿಯಮಗಳು–ಎ) ದಿನಾಂಕ : ೨೭.೦೭.೨೦೨೩ ರಂದು ಲೋಕೋಪಯೋಗಿ ಇಲಾಖೆಗೆ ಮೀಸಲಾತಿ ಪಾಲನೆ ಮಾಡದಂತೆ ಅಭಿಪ್ರಾಯ ನೀಡಿದ ಅಧಿಕಾರಿಗಳ ಮೇಲೆ ಸರ್ಕಾರ ಇದುವರೆವಿಗೂ ಯಾವುದೇ ಕ್ರಮ ಕೈಗೊಳ್ಳದೇ ಇರುವುದಕ್ಕೆ ಕಾರಣಗಳೇನು ;

(ಈ) ಸಿಆಸು ಇಲಾಖೆಯು ಸಾರಿಗೆ ಇಲಾಖೆಗೆ ಪತ್ರ ಸಂಖ್ಯೆ: ಸಿಆಸುಇ ೨೫೮ ಸೇನಿಎ ೨೦೨೪, ದಿನಾಂಕ : ೨೬.೧೧.೨೦೨೪ ರಂದು ಮತ್ತು ಒಳಾಡಳಿತ ಇಲಾಖೆಗೆ ಹಿಂಬರಹ ಸಂಖ್ಯೆ ಸಿಆಸುಇ ೪೨ ಸೇನಿಎ ೨೦೨೪, ದಿನಾಂಕ : ೨೬.೦೨.೨೦೨೪ ರಂದು ರೋಸ್ಟರ್ ಬಿಂದುಗಳನ್ನು ಪಾಲಿಸುವ ಅಗತ್ಯವಿಲ್ಲವೆಂದು ಹಿಂಬರಹ ನೀಡಿ ಮೀಸಲಾತಿ ರೋಸ್ಟರ್ ಪಾಲನೆ ಮಾಡದಂತೆ ತಿಳಿಸಿರುವುದರಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಧಿಕಾರಿ/ನೌಕರರು ಬಡ್ತಿ ಮೀಸಲಾತಿಯಿಂದ ವಂಚಿತರಾಗುವುದಕ್ಕೆ ಕಾರಣರಾದವರ ಮೇಲೆ ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ ; ಸ್ಪಷ್ಟಪಡಿಸುವುದು ?

## ಸಿಂಧನೂರು ತಾಲ್ಲೂಕಿನ ಸುಪ್ರಸಿದ್ಧ ಅಂಬಾ ಮಠವನ್ನು ಪ್ರಸಿದ್ಧ ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೦ (೩೫೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ಸಿಂಧನೂರ ತಾಲ್ಲೂಕಿನ ಸುಪ್ರಸಿದ್ಧ ಅಂಬಾದೇವಿಯ ಅಂಬಾಮಠ ದೇವಸ್ಥಾನವು ಪುರಾತನ ದೇವಾಲಯುವಾಗಿದ್ದು, ಲಕ್ಷಾಂತರ ಭಕ್ತರ ಧಾರ್ಮಿಕ ಕ್ಷೇತ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಧಾರ್ಮಿಕ ಸ್ಥಳಕ್ಕೆ ಆಗಿಂದಾಗ್ಗೆ ಸುತ್ತಮುತ್ತಲಿನ ಪ್ರದೇಶಗಳಿಂದ ಹಾಗೂ ನೆರೆಯ ರಾಜ್ಯಗಳಿಂದ ಭಕ್ತಾಧಿಗಳು ಆಗಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸದರಿ ಸ್ಥಳವನ್ನು ಪ್ರಸಿದ್ಧ ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ;

(ಈ) ಇದ್ದಲ್ಲಿ, ಯಾವ ಹಂತದಲ್ಲಿದೆ ಹಾಗೂ ಯಾವ ಕಾಲಮಿತಿಯೊಳಗೆ ಸದರಿ ಸ್ಥಳವನ್ನು ಪ್ರಸಿದ್ಧ ಪ್ರವಾಸಿ ತಾಣವಾಗಿ ಘೋಷಿಸಲಾಗುತ್ತದೆ ?

## ಸಿಂಧನೂರು ತಾಲ್ಲೂಕಿನ ಕೆರೆಗಳ ಅಭಿವೃದ್ಧಿಗೆ ಹಾಗೂ ಲಿಫ್ಟ್ ಇರಿಗೇಷನ್' ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಿರುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೧ (೩೬೦) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಗೆ ಬರುವ ಒಟ್ಟು ಕೆರೆಗಳ ಸಂಖ್ಯೆ ಎಷ್ಟು ;

(ಆ) ಸದರಿ ಕೆರೆಗಳ ಅಭಿವೃದ್ಧಿಗೆ ಇಲಾಖೆಯಿಂದ ಕಳೆದ ೨೦ ವರ್ಷಗಳಲ್ಲಿ ಎಷ್ಟು ಹಣ ಮಂಜೂರಾಗಿರುತ್ತದೆ ; (ಪೂರ್ಣ ವಿವರ ನೀಡುವುದು)

(ಇ) ಸಿಂಧನೂರು ತಾಲ್ಲೂಕಿಗೆ ಕಳೆದ ೨೦ ವರ್ಷಗಳಿಂದ ಇಲ್ಲಿಯವರೆಗೆ ಮಂಜೂರಾಗಿರುವ ಒಟ್ಟು 'ಲಿಫ್ಟ್ ಇರಿಗೇಷನ್' ಕಾಮಗಾರಿಗಳ ವಿವರ ನೀಡುವುದು ;

(ಈ) ಸದರಿ 'ಲಿಫ್ಟ್ ಇರಿಗೇಷನ್' ಕಾಮಗಾರಿಗಳಿಗೆ ಸರ್ಕಾರದಿಂದ ಬಿಡುಗಡೆಯಾಗಿರುವ ಹಣ ಎಷ್ಟು ;

(ಉ) ಪ್ರಸ್ತುತ ಮಂಜೂರಾಗಲು ಬಾಕಿಯಿರುವ 'ಲಿಫ್ಟ್ ಇರಿಗೇಷನ್' ಕಾಮಗಾರಿಗಳಾವುವು ? (ವಿವರ ನೀಡುವುದು)

## ಸಿಂಧನೂರು ತಾಲ್ಲೂಕಿನ ಕೆಲವು ಗ್ರಾಮಗಳಲ್ಲಿ ಅಕ್ರಮ ಮದ್ಯ ಮಾರಾಟವಾಗುತ್ತಿರುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೨ (೩೬೧) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನಲ್ಲಿ ಪ್ರಸ್ತುತ ಅಬಕಾರಿ ಇಲಾಖಾ ವ್ಯಾಪ್ತಿಯ ಎಷ್ಟು ಸಂಖ್ಯೆಯ ನೋಂದಣಿಯಾಗಿರುವ ಮದ್ಯದ ಅಂಗಡಿಗಳು (ಎಲ್ಲಾ ವಿಧದ) ಕಾರ್ಯನಿರ್ವಹಿಸುತ್ತಿವೆ ;

(ಆ) ಸಿಂಧನೂರು ತಾಲ್ಲೂಕಿನಲ್ಲಿ ದಿನವೊಂದಕ್ಕೆ ಸರಾಸರಿ ಎಷ್ಟು ಪ್ರಮಾಣದ ಮದ್ಯ ಮಾರಾಟವಾಗುತ್ತಿದೆ ;

(ಇ) ಸಿಂಧನೂರು ತಾಲ್ಲೂಕಿನಲ್ಲಿ ವಿವಿಧ ಗ್ರಾಮಗಳಲ್ಲಿನ ಕಿರಾಣಿ ಅಂಗಡಿಗಳಲ್ಲಿ ಅಕ್ರಮ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಸಂಬಂಧ ಎಷ್ಟು ಪ್ರಕರಣಗಳು ದಾಖಲಾಗಿವೆ ಹಾಗೂ ಈ ರೀತಿಯ ಅಕ್ರಮ ಮದ್ಯ ಮಾರಾಟ ಮಾಡುವವರ ವಿರುದ್ಧ ಯಾವ ಕ್ರಮವಹಿಸಲಾಗಿದೆ ?

## ಕಳೆದ ೨೦ ವರ್ಷಗಳಿಂದ ಸಿಂಧನೂರು ತಾಲ್ಲೂಕಿಗೆ ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆಯಿಂದ ಬಿಡುಗಡೆಯಾಗಿರುವ ಅನುದಾನದ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೩ (೩೬೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨೦ ವರ್ಷಗಳಿಂದ ಈ ತಹಲ್‌ವರೆಗೆ ಸಿಂಧನೂರು ತಾಲ್ಲೂಕಿಗೆ ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆಯಿಂದ ಎಷ್ಟು ಮೊತ್ತದ ಅನುದಾನ ಬಿಡುಗಡೆಯಾಗಿದೆ ; (ಯೋಜನೆವಾರು ವಿವರ ನೀಡುವುದು)

(ಆ) ಸದರಿ ಬಿಡುಗಡೆಯಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿ/ಯೋಜನೆಗಳನ್ನು ಈಗಾಗಲೇ ಪೂರ್ಣಗೊಳಿಸಲಾಗಿದೆ ; ಪೂರ್ಣಗೊಳ್ಳಲು ಬಾಕಿಯಿರುವ ಕಾಮಗಾರಿಗಳಾವು ; (ವಿವರ ನೀಡುವುದು)

(ಇ) ಬಾಕಿಯಿರುವ ಯೋಜನೆ/ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲು ಕ್ರಮ ವಹಿಸಲಾಗುವುದು ?

## ಬ್ಯಾಂಕ್ ಖಾತೆಯನ್ನು ತೆರೆದಿರುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೩೧೪ (೩೬೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬ್ಯಾಂಕ್ ಖಾತೆಯನ್ನು ಹೊಸದಾಗಿ ತೆರೆಯಲು ಆರ್ಥಿಕ ಇಲಾಖೆಯಿಂದ ನಿರ್ದೇಶನಗಳನ್ನು ನೀಡಲಾಗಿದೆಯೇ ; ನೀಡಿದ್ದಲ್ಲಿ, ಇಲಾಖಾವಾರು ಆದೇಶ/ನಿರ್ದೇಶನವನ್ನು ಪಾಲನೆ ಮಾಡುತ್ತಿದ್ದಾರೆಯೇ ; ಪಾಲನೆ ಮಾಡದಿದ್ದಲ್ಲಿ, ಸದರಿಯವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ/೦೫/ಟಿ.ಎ.ಆರ್/೨೦೧೭, ದಿನಾಂಕ:೩೦.೦೧.೨೦೧೭ರ ಪ್ರಕಾರ ಎಷ್ಟು ರಾಜ್ಯ ಸರ್ಕಾರದ ಇಲಾಖೆಗಳು, ಸ್ಥಳೀಯ ಸಂಸ್ಥೆಗಳು (ಆರ್.ಡಿ.ಪಿ.ಆರ್ ಮತ್ತು ನಗರ ಸ್ಥಳೀಯ ಸಂಸ್ಥೆಗಳು), ಪ್ರಾಧಿಕಾರಗಳು, ಮಂಡಳಿಗಳು, ನಿಗಮಗಳು, ಸೊಸೈಟಿಗಳು ದಿನಾಂಕ:೩೦.೦೧.೨೦೧೭ ನಂತರ ತೆರೆಯಲಾಗಿರುವ ಬ್ಯಾಂಕ್ ಖಾತೆಗಳಿಗೆ ಆರ್ಥಿಕ ಇಲಾಖೆಯ ಸಮ್ಮತಿ/ಅನುಮೋದನೆಯನ್ನು ಪಡೆಯಲಾಗಿದೆಯೇ: (ಸಂಪೂರ್ಣವಾದ ಮಾಹಿತಿಯನ್ನು ನೀಡುವುದು)

(ಇ) ಸದರಿ ಸರ್ಕಾರದ ಆದೇಶದ ಪ್ರಕಾರ ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರಗಳ ಇಲಾಖೆಯ ಪ್ರಧಾನ ವ್ಯವಸ್ಥಾಪಕರಿಗೆ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆಗಳ ಅಂಕಿ ಅಂಶಗಳನ್ನೊಳಗೊಂಡ ಮಾಹಿತಿಯನ್ನು ಒಂದು ತಿಂಗಳೊಳಗೆ ರಾಜ್ಯ ಸರ್ಕಾರದ ಇಲಾಖೆಗಳು, ಸ್ಥಳೀಯ ಸಂಸ್ಥೆಗಳು (ಆರ್.ಡಿ.ಪಿ.ಆರ್ ಮತ್ತು ನಗರ ಸ್ಥಳೀಯ ಸಂಸ್ಥೆಗಳು). ಪ್ರಾಧಿಕಾರಗಳು, ಮಂಡಳಿಗಳು, ನಿಗಮಗಳು, ಸೊಸೈಟಿಗಳು ನೀಡಲು

ಸೂಚಿಸಲಾಗಿತ್ತು ; ಆದೇಶದನ್ವಯ ಮಾಹಿತಿಯನ್ನು ಒದಗಿಸಲಾಗುತ್ತಿದೆಯೇ ; ಅಂಕಿ ಅಂಶಗಳನ್ನೊಳಗೊಂಡ ಮಾಹಿತಿಯನ್ನು ಒದಗಿಸುವುದು ;

(ಈ) ಸರ್ಕಾರದ ಆದೇಶದ ಪ್ರಕಾರ ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರಗಳ ಇಲಾಖೆಯು ಆರು ತಿಂಗಳೊಳಗೆ ರಾಜ್ಯ ಸರ್ಕಾರದ ಇಲಾಖೆಗಳು, ಸ್ಥಳೀಯ ಸಂಸ್ಥೆಗಳು (ಆರ್.ಡಿ.ಪಿ.ಆರ್ ಮತ್ತು ನಗರ ಸ್ಥಳೀಯ ಸಂಸ್ಥೆಗಳು), ಪ್ರಾಧಿಕಾರಗಳು, ಮಂಡಳಿಗಳು, ನಿಗಮಗಳು, ಸೊಸೈಟಿಗಳು ಹೊಂದಿರುವ ಖಾತೆಗಳ ಅಂಕಿ–ಅಂಶಗಳನ್ನು ಬ್ಯಾಂಕ್‌ಗಳಿಂದ ಪಡೆಯಲು, ನೀಡಲು ಸೂಚಿಲಾಗಿದೆ ; ಆದೇಶದನ್ವಯ ಮಾಹಿತಿಯನ್ನು ಪಡೆಯಲಾಗಿದೆಯೇ ; ಅಂಕಿ–ಅಂಶಗಳನ್ನೊಳಗೊಂಡ ಮಾಹಿತಿಯನ್ನು ಒದಗಿಸುವುದು ;

(ಉ) ಆದೇಶದನ್ವಯ ಪಡೆಯಲಾದ ಅಂಕಿ–ಅಂಶಗಳನ್ನು ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರಗಳ ಇಲಾಖೆಯು ಮೌಲ್ಯಮಾಪನ ಮಾಡಿದೆಯೇ ? (ಸಂಪೂರ್ಣವಾದ ಮಾಹಿತಿಯನ್ನು ನೀಡುವುದು)

## ಫ್ಲೆಕ್ಸ್, ಬ್ಯಾನರ್ಸ್ ಮತ್ತು ಕಟೌಟ್‌ಗಳಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಯ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೫ (೩೬೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರವು ಸೇರಿದಂತೆ ರಾಜ್ಯಾದ್ಯಂತ ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಯಾವುದೇ ಫ್ಲೆಕ್ಸ್. ಬ್ಯಾನರ್ಸ್ ಮತ್ತು ಕಟೌಟ್‌ಗಳನ್ನು ಸಾರ್ವಜನಿಕ ಪ್ರದೇಶಗಳಲ್ಲಿ ಹಾಕಬಾರದೆಂಬುದಾಗಿ

ಸರ್ಕಾರದಿಂದ ಯಾವುದಾದರೂ ಆದೇಶ ಹೊರಡಿಸಲಾಗಿದೆಯೇ ; (ಆದೇಶದ ಪ್ರತಿ ಒದಗಿಸುವುದು)

(ಆ) ಹಾಗಿದ್ದಲ್ಲಿ, ಅನಧಿಕೃತವಾಗಿ ಬ್ಯಾನರ್‌ಗಳನ್ನು ಹಾಕಿದವರಿಗೆ ಯಾವ ರೀತಿಯ ದಂಡ ಮತ್ತು ಶಿಕ್ಷೆಯನ್ನು ನೀಡಲಾಗುವುದು ;

(ಇ) ಸರ್ಕಾರದ ಆದೇಶವಿದ್ದರೂ ನಗರ ಪ್ರದೇಶಗಳಲ್ಲಿ ಅತೀ ಹೆಚ್ಚಾಗಿ ಫ್ಲೆಕ್ಸ್. ಬ್ಯಾನರ್ಸ್, ಕಟೌಟ್‌ಗಳನ್ನು ಎಲ್ಲೆಂದರಲ್ಲಿ ಹಾಕಿರುವುದು ಸ್ಥಳೀಯ ಅಧಿಕಾರಿಗಳ ಗಮನಕ್ಕೆ ಬಂದಿಲ್ಲವೇ ; ಹಾಗಿದ್ದಲ್ಲಿ ಇದುವರೆಗೂ ತೆಗೆದುಕೊಂಡ ಕ್ರಮವೇನು ;

(ಈ) ಈ ರೀತಿಯಾಗಿ ಹಾಕಲಾಗುತ್ತಿರುವ ಬ್ಯಾನರ್ ಮತ್ತು ಕಟೌಟ್‌ಗಳಿಂದ, ಸಾರ್ವಜನಿಕರಿಗೆ ಮತ್ತು ವ್ಯಾಪಾರಸ್ಥರಿಗೆ ತೊಂದರೆಯಾಗುತ್ತಿರುವುದು ಹಾಗೂ ಜಗಳ ಮತ್ತು ಸಾವುಗಳು ಸಂಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಇದುವರೆಗೂ ಎಷ್ಟು ದಂಡವನ್ನು ವಸೂಲಿ ಮಾಡಲಾಗಿದೆ ; ಎಷ್ಟು ಜನರ ಮೇಲೆ ಪ್ರಕರಣಗಳು ದಾಖಲಾಗಿದೆ ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಆರೋಗ್ಯ, ಗ್ರಂಥಾಲಯ ಹಾಗೂ ಭಿಕ್ಷಾಟನಾ ಉಪಕರ (ಸೆಸ್) ಹಣ ಬಾಕಿ ಉಳಿಸಿಕೊಂಡಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೬ (೩೬೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭ ರಿಂದ ೨೦೨೨ ರವರೆಗೂ ಬಿಬಿಎಂಪಿ ಯಿಂದ ಸಂಗ್ರಹಿಸಲಾಗಿರುವ ಆರೋಗ್ಯ ಉಪಕರ, ಗ್ರಂಥಾಲಯ ಉಪಕರ ಮತ್ತು ಭಿಕ್ಷಾಟನಾ ಉಪಕರಗಳ ಹಣವೆಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಸಂಗ್ರಹಿಸಲಾಗಿರುವ ಸೆಸ್ ಹಣವನ್ನು ಸಂಬಂಧಪಟ್ಟ ಇಲಾಖೆಗಳಿಗೆ ವರ್ಗಾಯಿಸಲಾಗಿದೆಯೇ ; (ಪೂರ್ಣ ವಿವರ ಒದಗಿಸುವುದು)

(ಇ) ಈ ರೀತಿ ಸಂಗ್ರಹಿಸಲಾದ ಉಪಕರವನ್ನು ಯಾವ ಯಾವ ಕಾರ್ಯಗಳಿಗೆ ಎಷ್ಟೆಷ್ಟು ಮೊತ್ತವನ್ನು ಬಳಕೆ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಬಿಬಿಎಂಪಿಯು ರೂ. ೧.೨೭೫.೦೦ ಕೋಟಿ ಆರೋಗ್ಯ ಸೆಸ್. ರೂ.೨೫೬.೦೦ ಕೋಟಿ ಗ್ರಂಥಾಲಯ ಸೆಸ್ ಮತ್ತು ರೂ. ೩೧.೪೮ ಕೋಟಿ ಭಿಕ್ಷಾಟನಾ ಉಪಕರವನ್ನು ಸಂಬಂಧಪಟ್ಟ ಇಲಾಖೆಗಳಿಗೆ ಪಾವತಿಸಲು ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಇದರ ಬಗ್ಗೆ ತೆಗೆದುಕೊಂಡ ಕ್ರಮವೇನು ಹಾಗೂ ಇದು ಕೆಎಂಸಿ ಕಾಯ್ದೆಯ ನಿಬಂಧನೆಗಳ ಉಲ್ಲಂಘನೆಯಾಗುವುದಿಲ್ಲವೇ ?

## ಬೆಂಗಳೂರಿನಲ್ಲಿ ಸೈಬರ್ ಪ್ರಕರಣ ಹೆಚ್ಚಾಗಿರುವುದರ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೭ (೩೬೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಇಲ್ಲಿಯವರೆಗೂ ರಾಜ್ಯದಲ್ಲಿ ಎಷ್ಟು ಸೈಬರ್ ವಂಚನೆ ಪ್ರಕರಣಗಳು ದಾಖಲಾಗಿವೆ ; ಎಷ್ಟು ಸೈಬರ್ ವಂಚಕರನ್ನು ಬಂಧಿಸಲಾಗಿದೆ ;

(ಆ) ೨೦೨೪ ರ ವರ್ಷದಲ್ಲಿ ರಾಜ್ಯದ ವಿವಿಧ ಬ್ಯಾಂಕುಗಳಿಂದ ೨.೯೧೪.೯೭ ಕೋಟಿ ರೂ. ಸೈಬರ್ ಖಾತೆಗಳಿಗೆ ವರ್ಗಾವಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಬ್ಯಾಂಕ್‌ಗಳ ವಿವರಗಳನ್ನು ಒದಗಿಸುವುದು ;

(ಇ) ಬೆಂಗಳೂರಿನಲ್ಲಿ ಅತಿ ಹೆಚ್ಚು ಸೈಬರ್ ವಂಚನೆ ಪ್ರಕರಣ ದಾಖಲಾಗಿದ್ದು, ವಿವಿಧ ಸೈಬರ್ ಪೊಲೀಸ್ ಠಾಣೆ ಸೇರಿ ಒಟ್ಟು ೪,೯೦೨ ಎಫ್‌ಐಆರ್ ದಾಖಲಾಗಿರುವುದು ನಿಜವೇ ; ಹಾಗಿದ್ದಲ್ಲಿ, ವಂಚನೆಗೆ ಒಳಗಾದ ಜನರಿಗೆ ಎಷ್ಟು ಹಣವನ್ನು ಹಿಂತಿರುಗಿಸಲಾಗಿರುತ್ತದೆ ;

(ಈ) ಸಾರ್ವಜನಿಕರು ಸೈಬರ್ ವಂಚನೆಗೆ ಒಳಗಾಗುವುದನ್ನು ತಡೆಯಲು ಸರ್ಕಾರದಿಂದ ತೆಗೆದುಕೊಂಡ ಮುಂಜಾಗ್ರತಾ ಕ್ರಮಗಳೇನು ?

## ಬೆಂಗಳೂರು ನಗರದ ಓಕಳಿಪುರಂ ನಿಂದ ರೈಲ್ವೆ ನಿಲ್ದಾಣದವರೆಗೂ ಅವೈಜ್ಞಾನಿಕವಾಗಿ ಕಾಮಗಾರಿ ಮಾಡಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೮ (೩೬೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಓಕಳಿಪುರಂ ನಿಂದ ರೈಲ್ವೆ ನಿಲ್ದಾಣದವರೆಗೂ ನಿರ್ಮಾಣ ಮಾಡಲಾಗಿರುವ ರಾಜೀವ್‌ಗಾಂಧಿ ಸಿಗ್ನಲ್ ಮುಕ್ತ ಅಷ್ಟಪಥ ರಸ್ತೆಯ ಕಾಮಗಾರಿಯು ಯಾವಾಗ ಪ್ರಾರಂಭವಾಯಿತು ಹಾಗೂ ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಈ ಕಾಮಗಾರಿಯನ್ನು ಯಾವ ಯಾವ ಗುತ್ತಿಗೆದಾರರಿಗೆ ನೀಡಲಾಗಿತ್ತು ; ಕಾಮಗಾರಿ ಪೂರ್ಣಗೊಳಿಸಲು ನೀಡಲಾದ ಕಾಲಾವಧಿ ಎಷ್ಟು ; ನೀಡಲಾಗಿರುವ ಕಾಲಾವಧಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆಯೇ ;

(ಇ) ಸರ್ಕಾರ ನೀಡಿರುವ ಸಮಯಕ್ಕೆ ಸರಿಯಾಗಿ ಕಾಮಗಾರಿ ಪೂರೈಸದಿದ್ದರೆ, ಸರ್ಕಾರದ ನಿಯಮದಡಿ ಗುತ್ತಿಗೆದಾರರ ಮೇಲೆ ಯಾವ ಕ್ರಮ ತೆಗೆದುಕೊಳ್ಳಲಾಗುತ್ತದೆ ;

(ಈ) ಈ ಯೋಜನೆಗೆ ಪ್ರಾರಂಭದಲ್ಲಿ ಎಷ್ಟು ಕೋಟಿ ರೂಪಾಯಿಗೆ ಟೆಂಡರ್‌ಗೆ ಅನುಮತಿ ನೀಡಲಾಗಿದೆ ; ತದನಂತರ ಹೆಚ್ಚುವರಿಯಾಗಿ ಬಿಡುಗಡೆಯಾಗಿರುವ ಅನುದಾನದ ಮೊತ್ತವೆಷ್ಟು ; (ಕಾರಣಗಳೊಂದಿಗೆ ಪೂರ್ಣ ವಿವರ ಒದಗಿಸುವುದು)

(ಉ) ಈ ಯೋಜನೆಯು ಅವೈಜ್ಞಾನಿಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ; ಒಂದು ಕಡೆಯಿಂದ ರಸ್ತೆ ದೊಡ್ಡದಾಗಿದ್ದು, ತದನಂತರ ರಸ್ತೆ ಕಿರಿದಾಗಿರುವುದರಿಂದ, ಟ್ರಾಫಿಕ್ ಜಾಮ್ ಆಗುತ್ತಿರುವುದು ಹಾಗೂ ಮಳೆಯ ನೀರಿನಿಂದ ಸಂಚಾರ ಮಾಡಲು ಕಷ್ಟವಾಗುತ್ತಿದ್ದು ಇದನ್ನು ಸರಿಪಡಿಸಲು ಯಾವ ಕ್ರಮ ತೆಗೆದುಕೊಳ್ಳಲಾಗಿದೆ ;

(ಊ) ಸದರಿ ಕಾಮಗಾರಿ ಇದುವರೆಗೂ ಪೂರ್ಣಗೊಳಿಸದಿರಲು ಇರುವ ಕಾರಣಗಳೇನು ; ವಾಹನ ಸವಾರರಿಗೆ ಈ ರಸ್ತೆಯಲ್ಲಿ ಸಂಚರಿಸುವುದು ತುಂಬಾ ಕಷ್ಟವಾಗಿರುವುದನ್ನು ಗಮನಿಸಲಾಗಿದ್ದು, ಹಾಗಿದ್ದಲ್ಲಿ, ಸದಾಕಾಲ ಈ ರಸ್ತೆಟ್ರಾಫಿಕ್ ಜಾಮ್‌ನಿಂದ ಕೂಡಿರಲು ಕಾರಣಗಳೇನು ?

## ರಾಜ್ಯದ ತೆರಿಗೆ ಸಂಗ್ರಹ ಕುಂಠಿತಗೊಂಡಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧೯ (೩೭೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೧೦ ವರ್ಷಗಳ ರಾಜ್ಯದ ತಲಾವಾರು ಆದಾಯ ಎಷ್ಟು; ತಲಾವಾರು ಆದಾಯವನ್ನು ಪರಿಗಣಿಸಲು ಇರುವ ಮಾನದಂಡಗಳೇನು ; (ವಿವರವನ್ನು ವರ್ಷವಾರು ನೀಡುವುದು)

(ಆ) ೨೦೨೩–೨೪ ಮತ್ತು ೨೦೨೪–೨೫ರ ಆಯವ್ಯಯದಲ್ಲಿ ಸರ್ಕಾರ ನಿರೀಕ್ಷಿಸಿದ್ದ ತೆರಿಗೆ ಸಂಗ್ರಹ ಗುರಿ ಎಷ್ಟು ; ಆಗಿರುವ ತೆರಿಗೆ

ಸಂಗ್ರಹ ಎಷ್ಟು ; (ವರ್ಷವಾರು ಇಲಾಖಾವಾರು ವಿವರ ನೀಡುವುದು)

(ಇ) ೨೦೨೫–೨೬ನೇ ಸಾಲಿನಲ್ಲಿ ಸರ್ಕಾರ ನಿರೀಕ್ಷಿಸಿದ್ದ ತೆರಿಗೆ ಸಂಗ್ರಹ ಎಷ್ಟು ; ೨೦೨೫, ಡಿಸೆಂಬರ್ ಅಂತ್ಯಕ್ಕೆ ಆಗಿರುವ ತೆರಿಗೆ ಸಂಗ್ರಹ ಎಷ್ಟು ; (ಇಲಾಖಾವಾರು ವಿವರ ನೀಡುವುದು)

(ಈ) ತೆರಿಗೆ ಸಂಗ್ರಹ ಕುಂಠಿತಗೊಳ್ಳಲು ಕಾರಣಗಳೇನು ;

(ಉ) ೨೦೨೫–೨೬ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಎಲ್ಲಾ ಇಲಾಖೆ/ನಿಗಮ ಮಂಡಳಿಗಳಿಗೆ ಬಿಡುಗಡೆ ಮಾಡಿರುವ ಮತ್ತು ಬಿಡುಗಡೆ ಮಾಡಲು ಬಾಕಿ ಇರುವ ಅನುದಾನ ಎಷ್ಟು; (ಇಲಾಖಾವಾರು ವಿವರ ನೀಡುವುದು) ಬಾಕಿ ಇರುವ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ?

## ರೈತರು, ರಾಜಕಾರಣಿಗಳು ಮತ್ತು ಕನ್ನಡ ಪರ ಸಂಘಟನೆಗಳ ಕಾರ್ಯಕರ್ತರ ಮೇಲೆ ಹೂಡಿರುವ ಪ್ರಕರಣಗಳನ್ನು ಹಿಂಪಡೆಯುವ ಬಗ್ಗೆ

**ಶ್ರೀ ಸಿ. ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೦ (೩೭೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರು, ರಾಜಕಾರಣಿಗಳು ಮತ್ತು ಕನ್ನಡಪರ ಸಂಘಟನೆಗಳ ಹೋರಾಟಗಾರರ ವಿರುದ್ಧ ಬಾಕಿ ಇರುವ ಒಟ್ಟು ಪ್ರಕರಣಗಳ ಸಂಖ್ಯೆ ಎಷ್ಟು; (ವಿವರವನ್ನು ಜಿಲ್ಲಾವಾರು, ಪ್ರಕರಣವಾರು ಒದಗಿಸುವುದು)

(ಆ) ಕಳೆದ ೩ ವರ್ಷಗಳಿಂದ ರೈತರು, ರಾಜಕಾರಣಿಗಳು, ಕನ್ನಡಪರ ಸಂಘಟನೆಗಳ ಹೋರಾಟಗಾರರ ಮೇಲೆ ಮತ್ತು ಇನ್ನಿತರೆ ಕ್ರಿಮಿನಲ್ ಅಪರಾಧಗಳಿಗೆ ಸಂಬಂಧಪಟ್ಟಂತೆ ಹೂಡಿರುವ ಪ್ರಕರಣಗಳು ಎಷ್ಟು ; ಈ ಪೈಕಿ ಎಷ್ಟು ಪ್ರಕರಣಗಳನ್ನು ಹಿಂದಕ್ಕೆ ಪಡೆಯಲಾಗಿದೆ ; (ಹಿಂದಕ್ಕೆ ಪಡೆದಿರುವ ಪ್ರಕರಣವಾರು ವಿವರ ನೀಡುವುದು)

(ಇ) ರೈತರು, ರಾಜಕಾರಣಿಗಳು ಮತ್ತು ಕನ್ನಡಪರ ಸಂಘಟನೆಗಳ ಹೋರಾಟಗಾರರು ತಮ್ಮ ಮೇಲಿರುವ ಪ್ರಕರಣಗಳನ್ನು ಹಿಂದಕ್ಕೆ ಪಡೆಯುವಂತೆ ಕೋರಿ ಮನವಿ ಸಲ್ಲಿಸಿವೆಯೇ ; ಎಷ್ಟು ಮನವಿಗಳು ಬಂದಿವೆ; ಸದರಿ ಮನವಿಗಳ ಬಗ್ಗೆ ಸರ್ಕಾರ ಕೈಗೊಂಡಿರುವ ನಿರ್ಧಾರವೇನು ; (ಸಮಗ್ರ ವಿವರ ನೀಡುವುದು)

(ಈ) ಪ್ರಕರಣಗಳನ್ನು ಹಿಂದಕ್ಕೆ ಪಡೆಯುವಾಗ ಅನುಸರಿಸುತ್ತಿರುವ ಮಾನದಂಡಗಳೇನು ; ಪೊಲೀಸ್ ಠಾಣೆ ಮೇಲೆ ಮತ್ತು ಪೊಲೀಸರ ಮೇಲೆ ಹಲ್ಲೆ ನಡೆಸಿದವರ ಮೇಲಿನ ಗಂಭೀರ ಪ್ರಕರಣಗಳನ್ನು ಹಿಂದಕ್ಕೆ ಪಡೆದಿರುವುದನ್ನು ನ್ಯಾಯಾಲಯ ರದ್ದುಪಡಿಸಿರುವುದು ನಿಜವೇ ; ಈ ಪ್ರಕರಣಗಳನ್ನು ಹಿಂದಕ್ಕೆ ಪಡೆದಿರುವುದನ್ನು ಸರ್ಕಾರ ಯಾವ ರೀತಿ ಸಮರ್ಥಿಸಿಕೊಳ್ಳಲಿದೆ ?

## ನಿಗಮ/ಮಂಡಳಿಗಳಿಗೆ ಮಂಜೂರು ಮಾಡಿರುವ ಅನುದಾನದ ವಿವರ

**ಶ್ರೀ ಸಿ. ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೧ (೩೭೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ರ ಆಯವ್ಯಯದಲ್ಲಿ ನಿಗಮ/ಮಂಡಳಿಗಳಿಗೆ ಘೋಷಣೆ ಮಾಡಿದ ಅನುದಾನ ಎಷ್ಟು ; ಡಿಸೆಂಬರ್, ೨೦೨೫ರ

ಅಂತ್ಯಕ್ಕೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು; ಘೋಷಣೆ ಮಾಡಿದ ಅನುದಾನವನ್ನು ಪೂರ್ಣ ಪ್ರಮಾಣದಲ್ಲಿ ಬಿಡುಗಡೆ ಮಾಡದಿರಲು ಕಾರಣಗಳೇನು ;

(ಆ) ಆಯವ್ಯಯದಲ್ಲಿ ಮೀಸಲಿಟ್ಟಿದ್ದ ಅನುದಾನ ಬಿಡುಗಡೆಯಾಗದ ಕಾರಣ ನಿಗಮ/ಮಂಡಳಿಗಳ ಸಾಧನೆ ಶೂನ್ಯವಾಗಿರುವುದು ಮತ್ತು ನಿಗಮ/ಮಂಡಳಿಗಳು ಗುರಿ ಸಾಧಿಸಲು ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಜೆಟ್‌ನಲ್ಲಿ ಘೋಷಣೆ ಮಾಡಿರುವ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ?

## ಕೆರೆಗೆ ನೀರು ತುಂಬಿಸುವ ಯೋಜನೆ ಕಾಮಗಾರಿ ವಿಳಂಬವಾಗಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೨ (೩೭೩) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೇಲೂರು ತಾಲ್ಲೂಕು ರಣಘಟ್ಟ ಪಿಕಪ್‌ನಿಂದ ಹಳೇಬೀಡು, ದ್ವಾರಸಮುದ್ರ ಹಾಗೂ ಬೆಳವಾಡಿ ದೊಡ್ಡಕೆರೆ ಸೇರಿದಂತೆ ವಿವಿಧ ಕೆರೆಗಳನ್ನು ತುಂಬಿಸುವ ಯೋಜನೆ ಆರಂಭಗೊಂಡಿದ್ದು ಯಾವಾಗ ; ಯಾವಾಗ ಪೂರ್ಣಗೊಳ್ಳಬೇಕಿತ್ತು ;

(ಆ) ಕಾಮಗಾರಿ ಯಾವ ಹಂತದಲ್ಲಿದೆ ; ಎಷ್ಟು ಕಾಮಗಾರಿ ಬಾಕಿ ಇದೆ; ಕಾಮಗಾರಿಗೆ ಈವರೆಗೆ ಆಗಿರುವ ವೆಚ್ಚ ಎಷ್ಟು ; (ಮಾಹಿತಿ ನೀಡುವುದು)

(ಇ) ಕಾಮಗಾರಿ ಬಹಳ ನಿಧಾನಗತಿಯಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ನಿಧಾನಗತಿ ಕಾಮಗಾರಿಗೆ ಕಾರಣಗಳೇನು;

(ಈ) ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?

## ಪರಿಶಿಷ್ಟರ ಕಲ್ಯಾಣಕ್ಕಾಗಿ ಮೀಸಲಿಟ್ಟಿದ್ದ ಅನುದಾನವನ್ನು ಅನ್ಯ ಉದ್ದೇಶಕ್ಕೆ ಹಂಚಿಕೆ ಮಾಡಿರುವ ಬಗ್ಗೆ

**ಶ್ರೀ ಸಿ. ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೩ (೩೭೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪, ೨೦೨೪–೨೫ ಮತ್ತು ೨೦೨೫–೨೬ನೇ ಸಾಲಿನ ಆಯವ್ಯಯದಲ್ಲಿ ಪರಿಶಿಷ್ಟ ಪಂಗಡ ಉಪ ಯೋಜನೆಗಳಿಗೆ ಮೀಸಲಿಟ್ಟಿದ್ದ ಮತ್ತು ಬಿಡುಗಡೆ ಮಾಡಿದ ಹಣ ಎಷ್ಟು ; ಬಿಡುಗಡೆಗೆ ಬಾಕಿ ಇರುವ ಹಣ ಎಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಈ ಪೈಕಿ ವೆಚ್ಚ ಮಾಡಿರುವ ಹಣ ಎಷ್ಟು; ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; ಎಷ್ಟು ಜನ ಫಲಾನುಭವಿಗಳಿಗೆ ಅನುಕೂಲವಾಗಿದೆ ; (ಕಾರ್ಯಕ್ರಮವಾರು/ ಯೋಜನೆವಾರು ವಿವರ ನೀಡುವುದು)

(ಇ) ಪರಿಶಿಷ್ಟರ ಕಲ್ಯಾಣಕ್ಕಾಗಿ ಮೀಸಲಿಟ್ಟಿದ್ದ ಹಣ ಪೂರ್ಣ ಪ್ರಮಾಣದಲ್ಲಿ ವೆಚ್ಚ ಆಗಿದೆಯೇ ; ಹಣ ಪೂರ್ಣ ಪ್ರಮಾಣದಲ್ಲಿ ವೆಚ್ಚವಾಗದೇ ಇರಲು ಕಾರಣಗಳೇನು ;

(ಈ) ಈ ಅನುದಾನದಲ್ಲಿ ಎಷ್ಟು ಹಣವನ್ನು ಸರ್ಕಾರ ಅನ್ಯ ಉದ್ದೇಶಕ್ಕೆ ಹಂಚಿಕೆ ಮಾಡಿದೆ ; ಅನ್ಯ ಉದ್ದೇಶಕ್ಕೆ ಹಂಚಿಕೆ ಮಾಡಲು

ಕಾರಣಗಳೇನು: ಅನ್ಯ ಉದ್ದೇಶಕ್ಕೆ ಹಂಚಿಕೆ ಮಾಡಲು ಕಾನೂನಿನಲ್ಲಿ ಅವಕಾಶ ಇದೆಯೇ ? (ಸಂಪೂರ್ಣ ವಿವರ ನೀಡುವುದು)

## ಅರ್ಕಾವತಿ ಬಡಾವಣೆ ಡಿ–ನೋಟಿಫಿಕೇಷನ್ ಕುರಿತು.

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೪ (೩೭೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರ್ಕಾವತಿ ಬಡಾವಣೆಗೆ ಸಂಬಂಧಿಸಿದಂತೆ ನ್ಯಾಯಮೂರ್ತಿ ಕೆಂಪಣ್ಣ ಆಯೋಗ ನೀಡಿದ ವರದಿಯ ಸಾರಾಂಶಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ವರದಿಯನ್ನು ಸರ್ಕಾರ ಸ್ವೀಕರಿಸಿದೆಯೇ ; ಸ್ವೀಕರಿಸಿದ್ದಲ್ಲಿ. ಆ ವರದಿಯ ಪ್ರಕಾರ ಎಷ್ಟು ಪ್ರಮಾಣದ ಭೂಮಿಯನ್ನು ಡಿ–ನೋಟಿಫಿಕೇಶನ್ ಮಾಡಲಾಗಿದೆ ; ಮತ್ತು ಈ ಪ್ರಕರಣದಲ್ಲಿ ಭಾಗಿಯಾದ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಸದರಿ ಬಡಾವಣೆಯ ಥಣಿಸಂದ್ರ ಗ್ರಾಮದಲ್ಲಿ ಎಷ್ಟು ಎಕರೆ ಭೂಮಿಯನ್ನು ಭೂ ಸ್ವಾಧೀನ ಪ್ರಕ್ರಿಯೆಯಿಂದ ಕೈಬಿಡುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆ ; ಮತ್ತು ಈ ಭೂಮಿಯನ್ನು ಕೈಬಿಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಈ) ಥಣಿಸಂದ್ರ ಗ್ರಾಮದಲ್ಲಿ ಭೂಮಿಯನ್ನು ಭೂ ಸ್ವಾಧೀನ ಪ್ರಕ್ರಿಯೆಯಿಂದ ಕೈಬಿಡಲು ಬಂದಿರುವ ಪ್ರಸ್ತಾವನೆ ಮತ್ತು ಈ ಸಂಬಂಧಿತ ಸರ್ಕಾರ ನಡೆಸಿರುವ ಪತ್ರ ವ್ಯವಹಾರದ ವಿವರಗಳನ್ನು ನೀಡುವುದು ?

# ಮೈಸೂರು–ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಪ್ರಯಾಣಿಕರ ಸುಲಿಗೆ/ದರೋಡೆ ಕುರಿತು

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :–**

೩೨೫ (೩೮೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು–ಬೆಂಗಳೂರು ರಾಷ್ಟ್ರೀಯ ಹೆದ್ದಾರಿ ಹಾಗೂ ಇದಕ್ಕೆ ಹೊಂದಿಕೊಂಡಂತೆ ಇರುವ ಸರ್ವೀಸ್ ರಸ್ತೆಯಲ್ಲಿ ಪ್ರಯಾಣಿಕರನ್ನು ತಡೆದು ಸುಲಿಗೆ ಮತ್ತು ದರೋಡೆ ನಡೆಸುತ್ತಿರುವ ಪ್ರಕರಣಗಳು ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸಾರ್ವಜನಿಕ ಬಳಕೆಗೆ ಮುಕ್ತಗೊಂಡ ಬಳಿಕ ಮೈಸೂರು–ಬೆಂಗಳೂರು ರಾಷ್ಟ್ರೀಯ ಹೆದ್ದಾರಿ/ಸರ್ವೀಸ್ ರಸ್ತೆಯಲ್ಲಿ ದಾಖಲಾದ ಸುಲಿಗೆ ಮತ್ತು ದರೋಡೆ ಪ್ರಕರಣಗಳು, ಭೇದಿಸಲಾದ ಪ್ರಕರಣಗಳು ಹಾಗೂ ಬಂಧಿಸಲ್ಪಟ್ಟ ಆರೋಪಿಗಳ ಒಟ್ಟು ಸಂಖ್ಯೆ ಎಷ್ಟು ; (ವರ್ಷವಾರು, ಜಿಲ್ಲಾ ಘಟಕವಾರು ವಿವರ ನೀಡುವುದು)

(ಇ) ಈ ಹೆದ್ದಾರಿ ಹಾಗೂ ಇದಕ್ಕೆ ಹೊಂದಿಕೊಂಡಂತೆ ಇರುವ ಸರ್ವೀಸ್ ರಸ್ತೆಯಲ್ಲಿ ಪ್ರಯಾಣಿಕರಿಗೆ ಸುರಕ್ಷತೆ ಒದಗಿಸಲು ಹಾಗೂ ದರೋಡೆಕೋರರ ಕೃತ್ಯ ತಡೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ಸಂಪೂರ್ಣವಿವರ ನೀಡುವುದು)

(ಈ) ಮೈಸೂರು–ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ವಿವಿಧ ಸಂಚಾರಿ ನಿಯಮಗಳನ್ನು ಉಲ್ಲಂಘಿಸಿದಕ್ಕಾಗಿ ITMS Cameraಗಳ ಮೂಲಕ ದಾಖಲಿಸಲ್ಪಟ್ಟ ಹಾಗೂ ಮುಕ್ತಾಯಗೊಳಿಸಲ್ಪಟ್ಟ ಒಟ್ಟು ಪ್ರಕರಣಗಳ ಸಂಖ್ಯೆ ಎಷ್ಟು ; ಈ ಪ್ರಕರಣಗಳ ಸಂಬಂಧ ವಿಧಿಸಲಾದ, ಸಂಗ್ರಹಿಸಲಾದ ಮತ್ತು ಸಂಗ್ರಹಿಸಲು ಬಾಕಿ ಇರುವ ದಂಡದ ಮೊತ್ತ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಉ) ಈ ಹೆದ್ದಾರಿಯಲ್ಲಿ ಅಳವಡಿಸಲಾದ ITMS Cameraಗಳ ಒಟ್ಟು ಸಂಖ್ಯೆ ಎಷ್ಟು ; ಎಲ್ಲೆಲ್ಲಿ ಅಳವಡಿಸಲಾಗಿದೆ ; ಇವುಗಳ ವಿಶೇಷತೆ ಏನು ? (ವಿವರ ನೀಡುವುದು)

## ಪೊಲೀಸ್ ಇಲಾಖೆಯಲ್ಲಿರುವ ಶ್ವಾನಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೩೨೬ (೩೮೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೊಲೀಸ್ ಇಲಾಖೆಯಲ್ಲಿ ವಿವಿಧ ಅಪರಾಧಗಳ ಪತ್ತೆಗಾಗಿ ಪ್ರಸ್ತುತ ಬಳಸಲಾಗುತ್ತಿರುವ ಶ್ವಾನಗಳ ಒಟ್ಟು ಸಂಖ್ಯೆ ಎಷ್ಟು ಹಾಗೂ, ಈ ಶ್ವಾನಗಳಿಗೆ ನಾಮಕರಣ ಮಾಡಲಾಗಿರುವ ಹೆಸರುಗಳೇನು ; (ಜಿಲ್ಲಾವಾರು ಶ್ವಾನಗಳ ಸಂಖ್ಯೆ ಮತ್ತು ಹೆಸರಿನೊಂದಿಗೆ ಸಂಪೂರ್ಣ ವಿವರ ನೀಡುವುದು)

(ಆ) ಶ್ವಾನಗಳನ್ನು ಯಾವ್ಯಾವ ರೀತಿಯ ಅಪರಾಧ ಕೃತ್ಯಗಳನ್ನು ಪತ್ತೆ ಹಚ್ಚಲು ಬಳಸಲಾಗುತ್ತಿದೆ ;

(ಇ) ಅಪರಾಧ ಕೃತ್ಯಗಳ ಪತ್ತೆಗೆ ಯಾವ ತಳಿಯ ಶ್ವಾನಗಳನ್ನು ಬಳಸಲಾಗುತ್ತಿದೆ ; ಇವುಗಳ ವಿಶೇಷತೆಗಳೇನು ; (ವಿವರ ನೀಡುವುದು)

(ಈ) ಅಪರಾಧ ಕೃತ್ಯಗಳನ್ನು ಪತ್ತೆ ಹಚ್ಚಲು ಶ್ವಾನಗಳಿಗೆ ಯಾವ ರೀತಿಯ ಕಠಿಣ ತರಬೇತಿ ನೀಡಲಾಗುತ್ತಿದೆ ; ಇದಕ್ಕಾಗಿ, ನಿಯೋಜಿತಗೊಂಡ ಪೊಲೀಸರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಉ) ಕಳೆದ ೫ ವರ್ಷಗಳಲ್ಲಿ ರಾಜ್ಯದಾದ್ಯಂತ ಎಷ್ಟು ಅಪರಾಧ ಕೃತ್ಯಗಳನ್ನು ಪತ್ತೆ ಹಚ್ಚಲು ಈ ಶ್ವಾನಗಳು ನೆರವಾಗಿವೆ ; (ವರ್ಷವಾರು, ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಊ) ಶ್ವಾನಗಳಿಗೆ ಪತ್ರಿದಿನ ನೀಡುವ ಆಹಾರವೇನು ; ಪ್ರತಿ ಶ್ವಾನಕ್ಕೆ, ಪ್ರತಿದಿನಕ್ಕೆ ತಗಲುವ ವೆಚ್ಚ ಎಷ್ಟು ; ಕಳೆದ ೩ ವರ್ಷಗಳಲ್ಲಿ ಶ್ವಾನಗಳ ಆರೈಕೆ. ಪೋಷಣೆ ಮತ್ತು ತರಬೇತಿಗಾಗಿ ಖರ್ಚು ಮಾಡಲಾದ ಹಣವೆಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಋ) ಪೊಲೀಸ್ ಇಲಾಖೆಯಲ್ಲಿ ಕಾರ್ಯನಿರ್ವಹಿಸಿದ ಶ್ವಾನಗಳು ವೃದ್ಧಾಪ್ಯ ಅಥವಾ ಇತರ ಕಾರಣಗಳಿಗಾಗಿ ಕರ್ತವ್ಯ ನಿರ್ವಹಿಸಲು ಆಗದಿದ್ದಾಗ ಅವುಗಳ ಪಾಲನೆ, ಪೋಷಣೆಯನ್ನು ಹೇಗೆ ಮಾಡಲಾಗುತ್ತದೆ ?

## ನೀರು ಬಳಕೆದಾರರ ಸಹಕಾರ ಸಂಘಗಳ ಬಲವರ್ಧನೆ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೩೨೭ (೩೮೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾವೇರಿ ನೀರಾವರಿ ನಿಗಮದ ಯೋಜನಾ ಅಚ್ಚುಕಟ್ಟು ವ್ಯಾಪ್ತಿಯ ಪ್ರದೇಶದಲ್ಲಿರುವ ಸಕ್ರಿಯ ನೀರು ಬಳಕೆದಾರರ ಸಂಘಗಳ ಸಂಖ್ಯೆ ಎಷ್ಟು ; (ನಿಗಮ ವ್ಯಾಪ್ತಿಯ ಸಂಘಗಳ ಸಂಖ್ಯೆ ಹಾಗೂ ಸಂಘಗಳ ಹೆಸರನ್ನೊಳಗೊಂಡಂತೆ ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಆ) ಕಾರ್ಯನಿರತ ನೀರು ಬಳಕೆದಾರರ ಸಹಕಾರ ಸಂಘಗಳಿಂದಲೇ ನೀರಿನ ಕರ (ಸೇವಾ ಶುಲ್ಕ) ವಸೂಲಿ ಮಾಡಲು ಅವಕಾಶ ಕಲ್ಪಿಸಿದ್ದರೂ ನಿಗಮ ವ್ಯಾಪ್ತಿಯ ಯಾವುದೇ ಜಿಲ್ಲೆಗಳಲ್ಲಿ ಈ ಆದೇಶ ಪಾಲನೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸಕ್ರಿಯ ನೀರು ಬಳಕೆದಾರರ ಸಹಕಾರ ಸಂಘಗಳಿಂದಲೇ ನೀರಿನ ಕರ (ಸೇವಾ ಶುಲ್ಕ) ವಸೂಲಿ ಮಾಡಲು ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು ; (ವಿವರವಾದ ಮಾಹಿತಿ ನೀಡುವುದು)

(ಈ) ನೀರು ಬಳಕೆದಾರರ ಸಹಕಾರ ಸಂಘಗಳ ಬಲವರ್ಧನೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ತ.ಮ.ವಿಜಯಭಾಸ್ಕರ್ ಅವರ ಅಧ್ಯಕ್ಷತೆಯ ಕರ್ನಾಟಕ ಆಡಳಿತ ಸುಧಾರಣ ಆಯೋಗ–೨ರ ೬ನೇ ವರದಿಯಲ್ಲಿನ ಅಂಶಗಳನ್ನು ಜಾರಿಗೊಳಿಸುವ ಕುರಿತು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; ಒಟ್ಟು ಎಷ್ಟು ಅಂಶಗಳನ್ನು ಜಾರಿಗೊಳಿಸಲಾಗಿದೆ ; ಎಷ್ಟು ಬಾಕಿಯಿದೆ ? (ವಿವರ ನೀಡುವುದು)

## ಮಂಡ್ಯ ನಾಲೆಗಳ ಆಧುನೀಕರಣ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೩೨೮ (೩೮೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ಕಾವೇರಿ ನದಿ ನೀರು ಅಚ್ಚುಕಟ್ಟು ಪ್ರದೇಶ ವ್ಯಾಪ್ತಿಯಲ್ಲಿ ಒಟ್ಟು ಎಷ್ಟು ಕಿ.ಮೀ. ಉದ್ದದ ಮುಖ್ಯ ನಾಲೆ, ವಿತರಣಾ ನಾಲೆ. ಉಪ ನಾಲೆಗಳನ್ನು ಆಧುನೀಕರಣಗೊಳಿಸುವ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆಯೇ ;

(ಆ) ಯಾವ ಯಾವ ನಾಲಾ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ ; ಇವುಗಳ ಅಂದಾಜು ಮೊತ್ತ ಮತ್ತು ಉದ್ದ (ಕಿ.ಮೀ.ಗಳಲ್ಲಿ) ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕಳೆದ ವರ್ಷ ಎಷ್ಟು ಕಿ.ಮೀ. ದೂರದ ನಾಲಾ ಕಾಮಗಾರಿಗಳನ್ನು (ಎಲ್ಲಿಂದ ಎಲ್ಲಿಯವರೆಗೆ) ಪೂರ್ಣಗೊಳಿಸಲಾಗಿದೆ ; ಇದಕ್ಕೆ ಭರಿಸಿರುವ ವೆಚ್ಚ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ನಾಲೆಗಳ ಆಧುನೀಕರಣದಿಂದ ಸರಾಸರಿ ಎಷ್ಟು ಕ್ಯೂಸೆಕ್ಸ್ ನೀರು ಉಳಿತಾಯವಾಗಿದೆ ; (ವಿವರ ನೀಡುವುದು)

(ಉ) ಮಂಡ್ಯ ಜಿಲ್ಲೆಯಲ್ಲಿ ಕೆ.ಆರ್.ಎಸ್.ಅಚ್ಚುಕಟ್ಟು ಪ್ರದೇಶ ವ್ಯಾಪ್ತಿಯಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು ; ಇದರಲ್ಲಿ ಎಷ್ಟು ಕೆರೆಗಳಿಗೆ ನಾಲಾ ಸಂಪರ್ಕ ಕಲ್ಪಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಊ) ಮಂಡ್ಯ ಜಿಲ್ಲೆಯಲ್ಲಿ ಒಟ್ಟು ಕೆರೆಗಳ ಪೈಕಿ ಪ್ರಸಕ್ತ ವರ್ಷ ಎಷ್ಟು ಕೆರೆಗಳಿಗೆ ನೀರು ತುಂಬಿಸಲಾಗಿದೆ ? (ತಾಲ್ಲೂಕುವಾರು, ಶೇಕಡವಾರು ನೀರು ತುಂಬಿಸಲಾದ ಮಾಹಿತಿ ನೀಡುವುದು)

## ಮಂಡ್ಯ ಜಿಲ್ಲಾ ನ್ಯಾಯಾಂಗ ಘಟಕದಲ್ಲಿರುವ ಸಿವಿಲ್/ಕ್ರಿಮಿನಲ್ ಪ್ರಕರಣಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೩೨೯ (೩೮೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ (ಜುಡಿಷಿಯಲ್ ಯೂನಿಟ್) ದಾಖಲಾಗಿ ಪ್ರಸ್ತುತ ವಿಚಾರಣೆ ಹಂತದಲ್ಲಿರುವ ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳ ಒಟ್ಟು ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ (ಜನವರಿ–ಡಿಸೆಂಬರ್ ವರೆಗೆ ಇದ್ದಂತೆ) ಮಂಡ್ಯ ನ್ಯಾಯಾಂಗ ಘಟಕದಲ್ಲಿ ವರ್ಷದ ಆರಂಭದಲ್ಲಿದ್ದ ಬಾಕಿ ಪ್ರಕರಣಗಳು, ಹೊಸದಾಗಿ ದಾಖಲಾದ, ವಿಲೇಯಾದ ಮತ್ತು ಒಟ್ಟು ಬಾಕಿ ಇರುವ ಕ್ರೋಡೀಕೃತ ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳ ಒಟ್ಟು ಸಂಖ್ಯೆ ಎಷ್ಟು; (ವರ್ಷವಾರು, ನ್ಯಾಯಾಲಯವಾರು ಮಾಹಿತಿ ನೀಡುವುದು)

(ಇ) ಮಂಡ್ಯ ನ್ಯಾಯಾಂಗ ಘಟಕದಲ್ಲಿ ೧೦, ೨೦ ಮತ್ತು ೩೦ ವರ್ಷಗಳಿಗೂ ಮೇಲ್ಪಟ್ಟು ವಿಚಾರಣೆ ಹಂತದಲ್ಲಿರುವ ಸಿವಿಲ್ ಮತ್ತು ಕ್ರಿಮೀನಲ್ ಪ್ರಕರಣಗಳ ಸಂಖ್ಯೆ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಈ) ಮಂಡ್ಯ ನ್ಯಾಯಾಂಗ ಘಟಕಕ್ಕೆ ಮಂಜೂರಾದ. ಭರ್ತಿಯಾದ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳ ಭರ್ತಿಗೆ ಸರ್ಕಾರದ ಕ್ರಮವೇನು ;

(ಉ) ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳನ್ನು ತ್ವರಿತಗತಿಯಲ್ಲಿ ಇತ್ಯರ್ಥಪಡಿಸುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು ?

## ತೆರಿಗೆ ಹಣ ಪಾವತಿಸುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೩೩೦ (೩೮೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿರುವ ಚಿತ್ರಮಂದಿರ, ರಂಗಮಂದಿರ, ಕ್ಲಬ್, ಮಾಲ್ ಮತ್ತು ಅಪಾರ್ಟ್‌ಮೆಂಟ್‌ಗಳ ಸಂಖ್ಯೆಯೆಷ್ಟು;

(ಆ) ಪ್ರತಿ ವರ್ಷ ಇವುಗಳಿಂದ ಬರುತ್ತಿರುವ ಆಸ್ತಿ ತೆರಿಗೆಯ ಹಣವೆಷ್ಟು; ಹಾಗೂ ತೆರಿಗೆಯನ್ನು ನಿಗದಿಪಡಿಸುವಾಗ ಯಾವ ಮಾನದಂಡವನ್ನು ಅನುಸರಿಸಲಾಗುತ್ತಿದೆ ; (ಪ್ರತ್ಯೇಕವಾಗಿ ವಿವರ ಒದಗಿಸುವುದು)

(ಇ) ಅಪಾರ್ಟ್‌ಮೆಂಟ್‌ನಲ್ಲಿ ವಾಸಿಸುತ್ತಿರುವ ಎಲ್ಲರೂ ಪ್ರತ್ಯೇಕವಾಗಿ ಆಸ್ತಿ ತೆರಿಗೆ ಕಟ್ಟಬೇಕೇ ಅಥವಾ ಒಟ್ಟಾರೇ ಆಸ್ತಿಯ ಮೇಲೆ ತೆರಿಗೆ ಹಣವನ್ನು ಪಡೆಯಲಾಗುತ್ತಿದೆಯೇ ;

(ಈ) ಕಳೆದ ೫ ವರ್ಷಗಳದಿಂದ ಚಿತ್ರಮಂದಿರ, ರಂಗಮಂದಿರ, ಕ್ಲಬ್, ಮಾಲ್ ಮತ್ತು ಅಪಾರ್ಟ್‌ಮೆಂಟ್‌ಗಳಿಂದ ಬರಬೇಕಾಗಿರುವ ಬಾಕಿ ಕಂದಾಯದ ಹಣವೆಷ್ಟು ಬಾಕಿ ಉಳಿಸಿಕೊಂಡಿದ್ದಲ್ಲಿ ಇದನ್ನು ವಸೂಲಿ ಮಾಡುವ ಜವಾಬ್ದಾರಿ ಯಾರದ್ದು ; (ವಿವರ ನೀಡುವುದು)

(ಉ) ಕಂದಾಯವನ್ನು ಸರಿಯಾಗಿ ಕಟ್ಟದವರ ಮೇಲೆ ಸರ್ಕಾರ ಇದುವರೆಗೂ ತೆಗೆದುಕೊಂಡಿರುವ ಕ್ರಮವೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಊ) ಬೆಂಗಳೂರಿನಲ್ಲಿರುವ ಖಾಸಗಿ ಮೆಡಿಕಲ್ ಕಾಲೇಜು ಹಾಗೂ ಇಂಜಿನಿಯರಿಂಗ್ ಕಾಲೇಜುಗಳಿಗೆ ಆಸ್ತಿ ತೆರಿಗೆಯಲ್ಲಿ ರಿಯಾಯಿತಿನ್ನು ನೀಡಲಾಗಿದೆಯೇ ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ರಿಯಾಯಿತಿ ನೀಡಲಾಗಿದೆ ಹಾಗೂ ಸಂಸ್ಥೆಗಳ ವಿವರಗಳನ್ನು ಮತ್ತು ಅವರಿಗೆ ನೀಡಲಾಗಿರುವ ರಿಯಾಯಿತಿಯ ಪ್ರಮಾಣವನ್ನು ತಿಳಿಸುವುದು ? (ಸರ್ಕಾರದ ಆದೇಶ ಪ್ರತಿ ನೀಡುವುದು)

## ಎತ್ತಿನ ಹೊಳೆ ಯೋಜನೆಯ ಬಗ್ಗೆ

**ಶ್ರೀ ಶಿವಕುಮಾರ್ ಕೆ (ನಾಮನಿರ್ದೇಶನ ಹೊಂದಿದವರು) :–**

೩೩೧ (೩೯೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಏಳು ಜಿಲ್ಲೆಗಳಿಗೆ ಕುಡಿಯುವ ನೀರು ಹಾಗೂ ಐದು ಜಿಲ್ಲೆಗಳ ಕೆರೆ ತುಂಬಿಸುವ ಮಹತ್ವಾಕಾಂಕ್ಷಿ ಎತ್ತಿನಹೊಳೆ

ಯೋಜನೆಯು ಪ್ರಸ್ತುತ ಯಾವ ಹಂತದಲ್ಲಿದೆ ; ಈವರೆಗೆ ಎಷ್ಟು ಹಣವನ್ನು ಈ ಯೋಜನೆಗಾಗಿ ವ್ಯಯಿಸಲಾಗಿದೆ ;

(ಆ) ಈ ಯೋಜನೆಯಲ್ಲಿ ಲಭ್ಯವಾಗಬಹುದಾದ ನೀರಿನ ಪ್ರಮಾಣವೆಷ್ಟು ;

(ಇ) ಎಷ್ಟು ಹಂತಗಳಲ್ಲಿ ಈ ಯೋಜನೆಯನ್ನು ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ ; ಈವರೆಗೆ ಎಷ್ಟು ಹಂತಗಳ ಕಾಮಗಾರಿ ಪೂರ್ಣಗೊಂಡು ಕಾರ್ಯಾರಂಭವಾಗಿದೆ ;

(ಈ) ಯೋಜನೆ ಪೂರ್ಣಗೊಳ್ಳಲು ನಿಗದಿಪಡಿಸಿರುವ ಕಾಲಮಿತಿಯೇನು ; ತಾಂತ್ರಿಕವಾಗಿ ಕಾಡುತ್ತಿರುವ ಸಮಸ್ಯೆಗಳು ಹಾಗೂ ಕಂಡುಕೊಂಡ ಪರಿಹಾರೋಪಾಯಗಳೇನು ? (ಮಾಹಿತಿ ಒದಗಿಸುವುದು)

## ಸರ್ಕಾರದ ಅನುದಾನ ಪಡೆಯುತ್ತಿರುವ ನಿಗಮ ಮಂಡಳಿಗಳ ಬಗ್ಗೆ

**ಶ್ರೀ ಶಿವಕುಮಾರ್ ಕೆ (ನಾಮನಿರ್ದೇಶನ ಹೊಂದಿದವರು) :–**

೩೩೨ (೩೯೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರದ ಅನುದಾನ ಪಡೆಯುತ್ತಿರುವ ಇಲಾಖೆ ಮತ್ತು ನಿಗಮ ಮಂಡಳಿಗಳೆಷ್ಟು ; ಸದರಿ ಇಲಾಖೆ ಮತ್ತು ನಿಗಮ ಮಂಡಳಿಗಳಲ್ಲಿ ಎಷ್ಟು ಜನ ಖಾಯಂ ಮತ್ತು ಗುತ್ತಿಗೆ ನೌಕರರು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ ;

(ಆ) ನಿಗಮ ಮಂಡಳಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ನೌಕರರಿಗೆ ೭ನೇ ವೇತನ ಆಯೋಗದ ಪ್ರಕಾರ ವೇತನ ನೀಡಲಾಗುತ್ತಿದೆಯೇ ;

(ಇ) ೭ನೇ ವೇತನ ಆಯೋಗದ ವೇತನವನ್ನು ಪಡೆಯಲು ಎಷ್ಟು ನಿಗಮ ಮಂಡಳಿಗಳಿಗೆ ಅನುಮೋದನೆ ನೀಡಲಾಗಿದೆ ;

(ಈ) ಸಾರ್ವಜನಿಕ ಸೇವಾ ವಲಯದ ಹಿಂದುಳಿದ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುವ ಜಾತಿವಾರು ನಿಗಮಗಳ ಖಾಯಂ ನೌಕರರಿಗೆ ೭ನೇ ವೇತನ ಆಯೋಗದ ವೇತನವನ್ನು ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ಹಾಗಿದ್ದಲ್ಲಿ, ಸದರಿ ನಿಗಮಗಳ ಖಾಯಂ ನೌಕರರಿಗೆ ಯಾವ ತಿಂಗಳಿನಿಂದ ವೇತನ ಪಡೆಯಲು ಅನುಮತಿಸಲಾಗುವುದು ?

## ಸೈಬರ್ ಕ್ರೈಂ ಪ್ರಕರಣಗಳ ಬಗ್ಗೆ.

**ಶ್ರೀ ಶಿವಕುಮಾರ್ ಕೆ (ನಾಮನಿರ್ದೇಶನ ಹೊಂದಿದವರು) :–**

೩೩೩ (೩೯೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಐದು ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಸೈಬರ್ ಕ್ರೈಂ ಪ್ರಕರಣಗಳು ದಾಖಲಾಗಿವೆ ಹಾಗೂ ಎಷ್ಟು ಪ್ರಮಾಣದಲ್ಲಿ ಹೆಚ್ಚಾಗಿವೆ ; ಇದನ್ನು ಪತ್ತೆ ಹಚ್ಚಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಎಷ್ಟು ಆರೋಪಿಗಳನ್ನು ಬಂಧಿಸಲಾಗಿದೆ ;

(ಆ) ಸೈಬರ್ ಕ್ರೈಂ ಪ್ರಕರಣಗಳನ್ನು ಪತ್ತೆ ಹಚ್ಚಲು ಗೃಹ ಇಲಾಖೆಯಿಂದ ಹೊಸ ಸಾಫ್ಟ್‌ವೇರ್ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳಲಾಗಿದೆಯೇ ?

## ಚಾಮರಾಜನಗರದ ಜಲಾಶಯಗಳ ಬಗ್ಗೆ

**ಶ್ರೀ ಶಿವಕುಮಾರ್ ಕೆ (ನಾಮನಿರ್ದೇಶನ ಹೊಂದಿದವರು) :–**

೩೩೪ (೩೯೫) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರ ಜಿಲ್ಲೆಯ ಚಿಕ್ಕಹೊಳೆ, ಸುವರ್ಣವತಿ, ಗುಂಡಾಲ್ ಜಲಾಶಯಗಳನ್ನು ಕೆರೆ ತುಂಬಿಸುವ ಯೋಜನೆಗೆ ಸೇರಿಸಲಾಗಿದೆಯೇ ; ಕೆರೆ ತುಂಬಿಸುವ ಯೋಜನೆಯಡಿ ಕಬಿನಿ ಜಲಾಶಯದಿಂದ ನೀರನ್ನು ಯಾವಾಗ ತುಂಬಿಸಲಾಗುವುದು ;

(ಆ) ಚಿಕ್ಕಹೊಳೆ ಜಲಾಶಯದ ಮುಖ್ಯ ಗೇಟ್ ಶಿಥಿಲಗೊಂಡಿದ್ದು, ಗೇಟ್ ಬದಲಾಯಿಸಲು ಕ್ರಮ ಕೈಗೊಳ್ಳಲಾಗಿದೆಯೇ ; ಈ ಹಿಂದೆ ಕಳಪೆ ಗೇಟ್ ಅಳವಡಿಸಿದ ಅಧಿಕಾರಿ ಮತ್ತು ಗುತ್ತಿಗೆದಾರರ ವಿರುದ್ಧ ತನಿಖೆ ನಡೆಸಿ ಕ್ರಮ ಕೈಗೊಳ್ಳಲಾಗಿದೆಯೇ ?

## ಕೃಷ್ಣ ಮೇಲ್ದಂಡೆ ಯೋಜನೆಯಿಂದ ಪುನರ್ ವಸತಿ/ಪುನರ್ ನಿರ್ಮಾಣ ಮಾಡಿಕೊಳ್ಳುವ ದಿಶೆಯಲ್ಲಿ ಹಕ್ಕು ಪತ್ರ ದೊರೆಯದೆ ಇರುವುದು ಹಾಗೂ ಹುದ್ದೆಗಳನ್ನು ಖಾಯಂ ಮಾಡುವ ಬಗ್ಗೆ

**ಶ್ರೀ ಪಿ. ಹೆಚ್ ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೫ (೩೯೮) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೀರಾವರಿ ಯೋಜನೆಗಳಲ್ಲಿ ಕೃಷ್ಣ ಮೇಲ್ದಂಡೆ ಯೋಜನೆ ಅತ್ಯಂತ ಪ್ರಮುಖವಾಗಿದ್ದು, ಇಲ್ಲಿಯವರೆಗೆ ಶೇ ೫೦ರಷ್ಟನ್ನು ಕೂಡಾ ಈ ೬೦ ವರ್ಷಗಳ ಅವಧಿಯಲ್ಲಿ ಸಾಧನೆ ಮಾಡಲಾಗಿಲ್ಲ ಹಾಗೂ ಸಂತ್ರಸ್ತರ ಪುನರ್ವಸತಿ, ಪುನರ್ ನಿರ್ಮಾಣ ಕಾರ್ಯಗಳು ಕೂಡಾ ಆಮೆಗತಿಯಲ್ಲಿ ಸಾಗುತ್ತಿದ್ದು, ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್ ನಿರ್ಮಾಣ (ಆರ್&ಆರ್) ಆಯುಕ್ತರು ಹುದ್ದೆ ಸೇರಿದಂತೆ ಜವಾನರವರೆಗೂ ಬಹುಪಾಲು ಹುದ್ದೆಗಳಲ್ಲಿ ಪ್ರಭಾರಿಗಳೇ ಕಾರ್ಯನಿರ್ವಹಿಸುತ್ತಿರುವುದರಿಂದ ಸಂಪ್ರಸ್ತರು ಖಾಯಂ ಅಧಿಕಾರಿಗಳು ಇಲ್ಲದ ಕಾರಣಕ್ಕಾಗಿ ಸಮಯಕ್ಕೆ ಸರಿಯಾಗಿ ಅವಶ್ಯಕ ದಾಖಲೆಗಳನ್ನು (ಹಕ್ಕು ಪತ್ರ NOC) ದೊರೆಯದೇ ಪುನರ್ವಸತಿ/

ಪುನರ್ ನಿರ್ಮಾಣ ಮಾಡಿಕೊಳ್ಳುವ ದಿಶೆಯಲ್ಲಿ ತೀವ್ರವಾದ ತೊಂದರೆ ಅನುಭವಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ?

(ಆ) ಈ ವಿಭಾಗದಲ್ಲಿ ಎಷ್ಟು ಮತ್ತು ಯಾವ ಯಾವ ಗ್ರೇಡ್ ಹುದ್ದೆಗಳು ಖಾಲಿ ಇವೆ ;

(ಇ) ಈ ಹುದ್ದೆಗಳನ್ನು ಖಾಯಂ ಆಗಿ ಭರ್ತಿ ಮಾಡುವುದು ಯಾವಾಗ ?

## ರಾಜ್ಯದ ಪೊಲೀಸ್ ಇಲಾಖೆಯ ಬೆರಳು ಮುದ್ರೆ ಸಂಗ್ರಹಾಲಯವನ್ನು ನ್ಯಾಯ ವಿಜ್ಞಾನ ಪ್ರಯೋಗಾಲಯದ ವಿಲೀನಗೊಳಿಸುವ ಬಗ್ಗೆ

**ಶ್ರೀ ಪಿ. ಹೆಚ್ ಪೂಜಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೬ (೪೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪೊಲೀಸ್ ಇಲಾಖೆಯ ಬೆರಳು ಮುದ್ರೆ ಸಂಗ್ರಹಾಲಯ ವಿಭಾಗವು ಸಮವಸ್ತ್ರ ಧರಿತ ಪೊಲೀಸ್ ಅಧಿಕಾರಿ/ಸಿಬ್ಬಂದಿಗಳನ್ನು ಒಳಗೊಂಡಿದ್ದು, ಬೆರಳು ಮುದ್ರೆ ಸಂಗ್ರಹಾಲಯ ವಿಭಾಗವನ್ನು ನ್ಯಾಯ ವಿಜ್ಞಾನ ಪ್ರಯೋಗಾಲಯದ ಜೊತೆ ವಿಲೀನಗೊಳಿಸಲು ಸರ್ಕಾರ ತೀರ್ಮಾನಿಸಿದ್ದು ರಾಜ್ಯದಲ್ಲಿ ಸಮರ್ಪಕವಾಗಿ ಜಾರಿಗೊಳಿಸಲಾಗಿದೆಯೇ ; ಆಗದಿದ್ದಲ್ಲಿ ಕಾರಣಗಳೇನು ; ಯಾವಾಗ ಮಾಡಲಾಗುವುದು ; (ಪ್ರತ್ಯೇಕವಾಗಿ ವಿವರ ನೀಡುವುದು)

(ಆ) ವಿಲೀನ ಜಾರಿಗೊಳಿಸುವ ಪ್ರಕ್ರಿಯೆ ಯಾವ ಹಂತದಲ್ಲಿದೆ ಅಥವಾ ವಿಲೀನಗೊಳಿಸುವ ಪ್ರಕ್ರಿಯೆಯನ್ನು ಕೈ ಬಿಡಲಾಗಿದೆಯೇ ; ಕೈಬಿಡಲು ತೀರ್ಮಾನಿಸಿದ್ದಲ್ಲಿ ಕಾರಣಗಳೇನು ?

## ರಾಜ್ಯದಲ್ಲಿ SC/ST ದೌರ್ಜನ್ಯ ಪ್ರಕರಣಗಳನ್ನು ತಡೆಗಟ್ಟುವ ಬಗ್ಗೆ

**ಶ್ರೀ ಪಿ. ಹೆಚ್ ಪೂಜಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೭ (೪೦೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲೆಗಳಲ್ಲಿ ಸ್ಥಾಪಿಸಿದ ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯ (ಡಿಸಿಆರ್‌ಇ) ಸೆಲ್ ಪೊಲೀಸ್ ಠಾಣೆಗಳಿಗೆ ಡಿವೈಎಸ್‌ಪಿಗಳ ನೇಮಕವಾಗದೇ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ದೌರ್ಜನ್ಯ ಪ್ರಕರಣಗಳ ನಿಯಂತ್ರಣ ತನಿಖೆಗೆ ಹಿನ್ನಡೆಯಾಗುತ್ತಿದೆ ಎಂಬ ಗಂಭೀರವಾದ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ರಾಜ್ಯದಲ್ಲಿನ ಎಸ್.ಸಿ/ಎಸ್.ಟಿ ದೌರ್ಜನ್ಯ ಪ್ರಕರಣಗಳ ಸಂಖ್ಯೆಯನ್ನು ತಡೆಗಟ್ಟಲು ಪ್ರಭಾರಿಗಳನ್ನು ನೇಮಿಸಲಾಗಿದೆಯೇ ಹಾಗೂ ರಾಜ್ಯದಲ್ಲಿನ ದೌರ್ಜನ್ಯ ಪ್ರಕರಣಗಳ ಸಂಖ್ಯೆ ಎಷ್ಟು ?

## ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸುವ ಬಗ್ಗೆ

**ಶ್ರೀ ಪಿ. ಹೆಚ್ ಪೂಜಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೩೮ (೪೦೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಶ್ವ ಪರಂಪರೆ ತಾಣ ಪಟ್ಟದಕಲ್ಲನ್ನು ವೀಕ್ಷಣೆ ಮಾಡಲು ಪ್ರವಾಸಿಗರು ಹೆಚ್ಚುತ್ತಿದ್ದು, ಸ್ಮಾರಕಗಳನ್ನು ವೀಕ್ಷಿಸಲು ಬರುತ್ತಿರುವ ಪ್ರವಾಸಿಗರ ವಾಹನ ನಿಲುಗಡೆ ಮಾಡಲು ಪಾರ್ಕಿಂಗ್ ವ್ಯವಸ್ಥೆ ಇಲ್ಲದೇ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಪಟ್ಟದಕಲ್ಲಿನ ಪ್ರವಾಸೋದ್ಯಮ ಇಲಾಖೆಯಲ್ಲಿ ನಿವೇಶನ ಲಭ್ಯವಿದ್ದರೂ, ಪಾರ್ಕಿಂಗ್ ವ್ಯವಸ್ಥೆ ಆಗದೇ ಇರಲು ಕಾರಣಗಳೇನು ; ಪಾರ್ಕಿಂಗ್ ವ್ಯವಸ್ಥೆಯನ್ನು ಯಾವಾಗ ಕಲ್ಪಿಸಲಾಗುತ್ತದೆ ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ವಾಹನ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

ಃ೩೯ (೪೦೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಾಹನ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಅ) ಹಾಗಿದ್ದಲ್ಲಿ, ಸಂಚಾರ ನಿಯಮ ಉಲ್ಲಂಘನೆಗಳಿಗೆ ಕಡಿವಾಣ ಹಾಕಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಮತ್ತು ಸಾರ್ವಜನಿಕರಿಗೆ ಸಂಚಾರ ನಿಯಮಗಳ ಬಗ್ಗೆ ಅರಿವು ಮೂಡಿಸಲು ಯಾವ ಕ್ರಮ ಕೈಗೊಂಡಿದೆ ;

(ಇ) ಕಳೆದ ಮೂರು ವರ್ಷಗಳಿಂದ ಸಂಚಾರಿ ನಿಯಮ ಉಲ್ಲಂಘನೆಗೆ ವಿಧಿಸಿರುವ ದಂಡದ ಮೊತ್ತವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಶೇಕಡ ಎಷ್ಟು ಪ್ರಮಾಣದ ದಂಡ ವಸೂಲಾತಿ ಮಾಡಲಾಗಿದೆ ;

(ಉ) ದಂಡ ವಸೂಲಾತಿ ಮೊತ್ತವನ್ನು ಯಾವ ಉದ್ದೇಶಕ್ಕಾಗಿ ಬಳಸಲಾಗುತ್ತಿದೆ ; ಬಳಕೆಯಾಗಿರುವ ಮೊತ್ತ ಎಷ್ಟು ? (ಕಳೆದ ಮೂರು ವರ್ಷಗಳ ಮಾಹಿತಿ ನೀಡುವುದು)

# ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನ ನಾಗಾವಿ ಐತಿಹಾಸಿಕ ಸ್ಥಳವನ್ನು ಸಂರಕ್ಷಿಸುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೩೪೦ (೪೦೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನ ನಾಗಾವಿ ಪ್ರಾಚೀನ ಕಾಲದ ವಿಶ್ವವಿದ್ಯಾಲಯವಾಗಿದ್ದು ಪ್ರಸ್ತುತ ನಾಗಾವಿಯಲ್ಲಿರುವ ಸ್ಮಾರಕಗಳಿಗೆ ಸಂರಕ್ಷಣೆ ಇಲ್ಲದಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನಾಗಾವಿಯು ವಿಶ್ವವಿದ್ಯಾಲಯುವಿದ್ದ ಜಮೀನು ಅತಿಕ್ರಮಣವಾಗುತ್ತಿದ್ದು ಇದನ್ನು ತಡೆಗಟ್ಟಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ನಾಗಾವಿಯಲ್ಲಿ ಮರಾತತ್ವ ಇಲಾಖೆ ಪ್ರಕಾರ ಮಸೀದಿ ಎಲ್ಲಿ ಬರುತ್ತದೆ ; (ಮಸೀದಿಯ ಒಟ್ಟು ಸುತ್ತಳತೆ ಮತ್ತು ಫೋಟೋಗ್ರಾಫಿ ಒದಗಿಸುವುದು)

(ಈ) ನಾಗಾವಿಯ ಪ್ರಾಚೀನ ಸ್ಮಾರಕಗಳ ಸಂರಕ್ಷಣೆಗೆ ಕೈಗೊಂಡ ಯೋಜನೆಗಳೇನು ; (ಪೂರ್ಣ ಯೋಜನೆಯ ಮಾಹಿತಿ ನೀಡುವುದು)

(ಉ) ನಾಗಾವಿಯಲ್ಲಿ ಪುರಾತತ್ವ ಇಲಾಖೆ ಪ್ರಕಾರ ವಕ್ಫ್‌ಗೆ ಸಂಬಂಧಿಸಿದ ಆಸ್ತಿ ಇದೆಯೇ ? (ಮಾಹಿತಿ ನೀಡುವುದು)

## ಕಲಬುರಗಿ ಜಿಲ್ಲೆಯಲ್ಲಿರುವ ಏತ ನೀರಾವರಿಗಳ ನಿಷ್ಕ್ರಿಯತೆ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೩೪೧ (೪೦೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಯಾವ ನದಿಗಳಿಗೆ ಎಷ್ಟು ಏತ ನೀರಾವರಿಗಳಿವೆ ಮತ್ತು ಎಷ್ಟು ಪ್ರಮಾಣದ ಭೂಮಿಗೆ ನೀರಾವರಿ ಸೌಲಭ್ಯ ಒದಗಿಸಲಾಗಿದೆ ; (ವಿವರ ನೀಡುವುದು)

(ಆ) ಸರ್ಕಾರ ಕೋಟಿಗಟ್ಟಲೆ ಹಣ ಖರ್ಚು ಮಾಡಿದ್ದರೂ ರೈತರ ಹೊಲಗಳಿಗೆ ನೀರಿನ ಪೂರೈಕೆ ಮಾಡದೆ ನಿಷ್ಕ್ರಿಯಗೊಂಡಿರುವ ಏತ ನೀರಾವರಿಗಳೆಷ್ಟು ;

(ಇ) ನಿಷ್ಕ್ರಿಯಗೊಂಡಿದ್ದರು ಅವುಗಳನ್ನು ಅಭಿವೃದ್ಧಿಪಡಿಸಿ ಬರಗಾಲದ ಜಿಲ್ಲೆಯಾದ ಕಲಬುರಗಿ ರೈತರ ಹೊಲಗಳಿಗೆ ನೀರು ಪೂರೈಕೆ ಮಾಡದಿರಲು ಕಾರಣಗಳೇನು ;

(ಈ) ಜಿಲ್ಲೆಯಲ್ಲಿ ಹಲವು ವರ್ಷಗಳು ಚೆನ್ನಾಗಿ ಮಳೆ ಬಂದರೂ ಏತ ನೀರಾವರಿಗಳ ನಿಷ್ಕ್ರಿಯತೆಯಿಂದ ನೀರು ಬಳಸದೆ ರೈತರ ಬದುಕಿನೊಂದಿಗೆ ಚೆಲ್ಲಾಟವಾಡಿದಂತಲ್ಲವೇ ; ದುರಸ್ತಿ ಹೆಸರಲ್ಲಿ ಕೋಟಿಗಟ್ಟಲೆ ಹಣ ವ್ಯಯ ಮಾಡಿದವರ ಕುರಿತು ತನಿಖೆ ಕೈಗೊಳ್ಳಬಹುದೇ ;

(ಉ) ಜಿಲ್ಲೆಯಲ್ಲಿ ನಿಷ್ಕ್ರಿಯಗೊಂಡಿರುವ ಏತ ನೀರಾವರಿಗಳನ್ನು ತಕ್ಷಣವೇ ಸೂಕ್ತ ದುರಸ್ತಿ/ಯಂತ್ರಗಳನ್ನು ಅಳವಡಿಸಿ ಕಂಗಾಲಾದ ರೈತರ ಹೊಲಗಳಿಗೆ ನೀರು ಹರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಕಣ್ವ ಏತ ನೀರಾವರಿ ಯೋಜನೆಯಿಂದ ಮರ ಮುಟ್ಟುಗಳನ್ನು ಸ್ವಾಧೀನಪಡಿಸಿಕೊಂಡಿರುವುದಕ್ಕೆ ಹಣ ನೀಡದೆ ಇರುವ ಕುರಿತು

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೩೪೨ (೪೦೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ದಕ್ಷಿಣ ಜಿಲ್ಲೆ ಚನ್ನಪಟ್ಟಣ್ಣ ತಾಲ್ಲೂಕಿನಲ್ಲಿ ಕಣ್ವ ಏತ ನೀರಾವರಿ (ಇಗ್ಗಲೂರು ಬ್ಯಾರೇಜ್‌ನಿಂದ ಕಣ್ವ ಜಲಾಶಯದವರೆಗೆ) ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗಿದೆ ; ಸದರಿ ಯೋಜನೆಗೆ ನಿಗದಿಪಡಿಸಿದ್ದ ಹಣವೆಷ್ಟು ; (ವಿವರ ನೀಡುವುದು)

(ಆ) ಸದರಿ ಯೋಜನೆಯನ್ನು ಕಾರ್ಯಗತಗೊಳಿಸಲು ಯಾವ ಗ್ರಾಮಗಳಲ್ಲಿ ಜಮೀನು ಸ್ವಾಧೀನ ಪಡಿಸಿಕೊಳ್ಳಲಾಗಿದೆ ಹಾಗೂ ಸ್ವಾಧೀನಪಡಿಸಿಕೊಂಡ ಜಮೀನುಗಳೆಷ್ಟು ; ಮರ ಮುಟ್ಟುಗಳೆಷ್ಟು ; (ಗ್ರಾಮವಾರು ವಿವರ ನೀಡುವುದು)

(ಇ) ಸ್ವಾಧೀನ ಪಡಿಸಿಕೊಂಡಿರುವ ಜಮೀನುಗಳಿಗೆ ಹಣ ಬಿಡುಗಡೆ ಮಾಡಲಾಗಿದ್ದು ಸದರಿ ಜಮೀನುಗಳಲ್ಲಿರುವ ಮರ ಮುಟ್ಟುಗಳಿಗೆ ಹಣ ಬಿಡುಗಡೆ ಮಾಡದಿರಲು ಕಾರಣಗಳೇನು ;

(ಈ) ನೀರಾವರಿ ಇಲಾಖೆಯಿಂದ ಹಣ ಬಿಡುಗಡೆಯಾಗಿದ್ದರೂ ಕಳೆದ ೫ ವರ್ಷಗಳಿಂದ ಸ್ವಾಧೀನ ಪಡಿಸಿಕೊಂಡಿರುವ ಜಮೀನುಗಳಲ್ಲಿರುವ ಮರ ಮುಟ್ಟಗಳಿಗೆ ಹಣ ಬಿಡುಗಡೆ ಮಾಡದೆ ವಿಳಂಬ ಮಾಡಲು ಕಾರಣವಾಗಿರುವ ಅಧಿಕಾರಿಗಳ ಮೇಲೆ ಕ್ರಮ ಕೈಗೊಂಡು ಕೂಡಲೇ ಹಣ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ ? (ವಿವರ ನೀಡುವುದು)

## ರಾಜ್ಯದಲ್ಲಿನ ಡಿಜಿಟಲ್ ದೋಖಾ ದಾಖಲೆಯ ಬಗ್ಗೆ

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೪೩ (೪೧೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಡಿಜಿಟಲ್ ದೋಖಾ ಕೇಸ್‌ಗಳು ಏರಿಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಯಾವ ಯಾವ ರೀತಿಯಲ್ಲಿ ವಂಚನೆಗಳಿಂದ ಸಾರ್ವನಿಕರು ತಮ್ಮ ದುಡ್ಡನ್ನು ಕಳೆದುಕೊಳ್ಳುತ್ತಿದ್ದಾರೆ ;

(ಇ) ಕಳೆದ ಮೂರು ವರ್ಷಗಳಲ್ಲಿ ಡಿಜಿಟಲ್ ದೋಖಾ ದಾಖಲಾದ ಕೇಸ್‌ಗಳೆಷ್ಟು ಹಾಗೂ ನಷ್ಟದ ಪ್ರಮಾಣವೆಷ್ಟು ;

(ಈ) ಡಿಜಿಟಲ್ ದೋಖಾ ಕೇಸ್‌ಗಳ ವಂಚನೆಯನ್ನು ತಗ್ಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ಡಿಜಿಟಲ್ ದೋಖಾ ಕೇಸ್‌ಗಳನ್ನು ಶೂನ್ಯಕ್ಕೆ ಇಳಿಸುವ ಯೋಜನೆಯನ್ನು ಸರ್ಕಾರ ಕೈಗೊಂಡಿದೆಯೇ ?

## ಕರ್ನಾಟಕ ನೀರಾವರಿ ನಿಗಮ ನಿಯಮಿತದಿಂದ ಕೈಗೊಂಡ ಯೋಜನೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೪೪ (೨೭೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ನೀರಾವರಿ ನಿಗಮ ನಿಯಮಿತದಿಂದ ಕಳೆದ ೨ ವರ್ಷಗಳಲ್ಲಿ ಕೈಗೊಂಡ ಯೋಜನೆಗಳಾವುವು ;

(ಆ) ಅವುಗಳಲ್ಲಿ ಎಷ್ಟು ಯೋಜನೆಗಳ ಕಾಮಗಾರಿಯನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗಿದೆ ; ಬಾಕಿ ಇರುವ ಕಾಮಗಾರಿಗಳಾವುವು ;

(ಇ) ಬಾಕಿ ಇರುವ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ; (ಪೂರ್ಣ ಮಾಹಿತಿ ಒದಗಿಸುವುದು)

(ಈ) ಸದರಿ ಕೈಗೊಂಡ ಯೋಜನೆಗಳಲ್ಲಿ ದಾವಣಗೆರೆ ಜಿಲ್ಲೆಗೆ ಮೀಸಲಿಟ್ಟು ಕೈಗೊಂಡ ನೀರಾವರಿ ಕಾಮಗಾರಿಗಳಾವುವು ; ಅವುಗಳಲ್ಲಿ ಪೂರ್ಣಗೊಂಡ ಮತ್ತು ಅಪೂರ್ಣಗೊಂಡ ಯೋಜನೆಗಳಾವುವು ?

## ಕುಮಾರಕೃಪ ಅತಿಥಿ ಗೃಹದ ನಿರ್ವಹಣೆ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೪೫ (೨೭೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕುಮಾರ ಕೃಪ ಅತಿಥಿ ಗೃಹದಲ್ಲಿ ನಿರ್ಮಿಸಿರುವ ಕೊಠಡಿಗಳು ಮತ್ತು ಅದರ ನಿರ್ವಹಣೆ ಹೇಗೆ ನಡೆಯುತ್ತದೆ ;

(ಆ) ಅತಿಥಿ ಗೃಹದ ಕೊಠಡಿಗಳನ್ನು ಮೀಸಲು/ಕಾಯ್ದಿರಿಸಬಹುದಾದ ವ್ಯಕ್ತಿ ಅಥವಾ ಅಧಿಕಾರಿಗಳು ಯಾರು ; ( ಪದನಾಮಗಳ ಮಾಹಿತಿ ನೀಡುವುದು)

(ಇ) ಜನಪ್ರತಿನಿಧಿಗಳು ಮತ್ತು ಗಣ್ಯ ವ್ಯಕ್ತಿಗಳನ್ನು ಹೊರತುಪಡಿಸಿ, ಖಾಸಗಿ ವ್ಯಕ್ತಿಗಳಿಗೆ ಕೊಠಡಿ ಕಾಯ್ದಿರಿಸಲು ಅವಕಾಶ ಇದೆಯೇ ;

(ಈ) ಕೊಠಡಿಗಳನ್ನು ಕಾಯ್ದಿಸಬಹುದಾದ ಗರಿಷ್ಠ ಅವಧಿ ಹಾಗೂ ಕೊಠಡಿ ಬಳಕೆಗೆ ದರ ನಿಗದಿಪಡಿಸಿರುವ ಮಾನದಂಡಗಳು ಯಾವುವು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಚಿಂಚೋಳಿ ತಾಲ್ಲೂಕಿನಲ್ಲಿರುವ ಚಂದ್ರಪಳ್ಳಿ ಜಲಾಶಯ ಹಾಗೂ ಇನ್ನಿತರ ಫಾಲ್ಸ್‌ಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೪೬ (೨೮೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ಚಿಂಚೋಳಿ ತಾಲ್ಲೂಕಿನ ಚಂದ್ರಪಳ್ಳಿ ಜಲಾಶಯ ಹಾಗೂ ಏತ್ತಿ ಪೊತ್ತಾ ಫಾಲ್ಸ್, ಗೋಟಮಗೂಟ ಫಾಲ್ಸ್, ಮಾಣಿಕಪುರ ಫಾಲ್ಸ್ ಹಾಗೂ ಎತ್ತರದ ಪರ್ವತಗಳ ಜೊತೆಗೆ ಗಿಡ ಮರಗಳ ಸುಂದರ ಪರಿಸರವನ್ನು ಹೊಂದಿರುವ ಈ ತಾಣಗಳನ್ನು ಪರಿಸರಕ್ಕೆ ತಕ್ಕಂತೆ ಅಭಿವೃದ್ಧಿ ಪಡಿಸಲು ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯು ಸಂಬಂಧಪಟ್ಟ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ವರದಿ ನೀಡಲು ಸರ್ಕಾರ ಜಿಲ್ಲಾಡಳಿತಕ್ಕೆ ಸೂಚಿಸಿದೆಯೇ ; ಸೂಚಿಸದಿದ್ದಲ್ಲಿ, ಕೂಡಲೇ ವರದಿ ನೀಡುವಂತೆ ಯಾವಾಗ ಸೂಚನೆ ನೀಡಲಾಗುವುದು ;

(ಅ) ಈ ಮೇಲ್ಕಂಡ ಪ್ರವಾಸೋದ್ಯಮ ತಾಣಗಳನ್ನು ಅಭಿವೃದ್ಧಿ ಪಡಿಸಲು, ವಿಶೇಷ ಪ್ರಕರಣವೆಂದು ಪರಿಗಣಿಸಿ ಕೆ.ಕೆ.ಆರ್.ಡಿ.ಬಿ ಯಿಂದ ಗರಿಷ್ಠ ಅನುದಾನ ಬಿಡುಗಡೆ ಮಾಡಿ ಅಭಿವೃದ್ಧಿ ಪಡಿಸಿ ಪ್ರವಾಸಿಗರನ್ನು ಸೆಳೆಯುವ ಬಗ್ಗೆ ಸರ್ಕಾರ ಚಿಂತಿಸಿದೆಯೇ ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಸಣ್ಣ ಕೆರೆಗಳಿಗೆ ನೀರು ತುಂಬಿಸುವ ಯೋಜನೆಯ ಬಗ್ಗೆ

**ಶ್ರೀ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೪೭ (೨೮೩) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಎಷ್ಟು ಸಣ್ಣ ಕೆರೆಗಳಿವೆ ; ಎಷ್ಟು ಕೆರೆಗಳಿಗೆ ಕಳೆದ ೫ ವರ್ಷಗಳಲ್ಲಿ ನೀರು ತುಂಬಿಸುವ ಯೋಜನೆ ಕಾಮಗಾರಿ ಮಂಜೂರಾಗಿದೆ ಹಾಗೂ ಬಿಡುಗಡೆಯಾದ ಅನುದಾನ ಮತ್ತು ಕಾಮಗಾರಿ ಪೂರ್ಣಗೊಳಿಸಲು ನಿಗದಿಯಾಗಿರುವ ಸಮಯ ಎಷ್ಟು ;

(ಆ) ಸಣ್ಣ ನೀರಾವರಿ ಕೆರೆಗಳಿಗೆ ನೀರು ತುಂಬಿಸುವ ಯೋಜನೆಯ ಕಾಮಗಾರಿಯನ್ನು ಯಾವ ಯಾವ ಗುತ್ತಿಗೆದಾರರಿಗೆ ನೀಡಲಾಗಿದೆ ;

(ಉ) ಸದರಿ ಯೋಜನೆಯಡಿ ಭೂಮಿ ಕಳೆದುಕೊಂಡ ರೈತರ ಸಂಖ್ಯೆ ಎಷ್ಟು ; ಭೂ ಸ್ವಾಧೀನದ ಅಡಿಯಲ್ಲಿ ಪರಿಹಾರ ನೀಡಲಾಗಿದೆಯೇ ; ನೀಡಿದ್ದಲ್ಲಿ ಎಷ್ಟು ನೀಡಲಾಗಿದೆ ?

## ೪ಜಿ ವಿನಾಯಿತಿಯ ಬಗ್ಗೆ

**ಡಾ. ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೪೮ (೩೦೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಂಗ್ರಹಣಾ ಕೋಶದಲ್ಲಿ ಪ್ರಚಲಿತವಿರುವ “೪ಜಿ ವಿನಾಯಿತಿ” ಎಂದರೇನು ; ಹಾಲಿ ಇರುವ ನಿಯಮಗಳೇನು ; (ವಿವರವಾದ ಮಾಹಿತಿ ನೀಡುವುದು)

(ಆ) ಯಾವ ಕಾಮಗಾರಿಗಳಿಗೆ ಹಣಕಾಸು ಇಲಾಖೆಯು ೪ಜಿ ವಿನಾಯಿತಿ ನೀಡಬಹುದು ; (ವಿವರವಾದ ಮಾಹಿತಿ ನೀಡುವುದು)

(ಇ) ಹೊಸ ಸರ್ಕಾರ ಬಂದಾಗಿನಿಂದ ಇಲ್ಲಿಯುವರೆಗೆ ಎಷ್ಟು ಕಾಮಗಾರಿಗಳಿಗೆ ೪ಜಿ ವಿನಾಯಿತಿ ನೀಡಲಾಗಿದೆ ; (ವರ್ಷವಾರು, ಕಾಮಗಾರಿಯ ಹೆಸರು, ಅನುಷ್ಠಾನ ಏಜೇನ್ಸಿ ಬಿಡುಗಡೆಯಾದ ಹಣ ಹಾಗೂ ಆಡಳಿತ ಇಲಾಖೆಯ ಹೆಸರಿನೊಂದಿಗೆ ಮಾಹಿತಿಯನ್ನು ನೀಡುವುದು)

(ಈ) ೪ಜಿ ವಿನಾಯಿತಿಯನ್ನು ಪಡೆಯಲು ಇಲಾಖೆಗಳು ಅನುಸರಿಸಬೇಕಾದ ಮಾರ್ಗಸೂಚಿ/ಪ್ರಕ್ರಿಯೆಗಳೇನು ? (ವಿವರವಾದ ಮಾಹಿತಿ ನೀಡುವುದು)

## ಜಲಸಂಪನ್ಮೂಲ ಇಲಾಖೆಗೆ ಹಂಚಿಕೆ/ಬಿಡುಗಡೆ ಮತ್ತು ವೆಚ್ಚವಾಗಿರುವ ಅನುದಾನದ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೪೯ (೩೧೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪, ೨೦೨೪–೨೫, ೨೦೨೫–೨೬ನೇ ಸಾಲಿನಲ್ಲಿ ಜಲಸಂಪನ್ಮೂಲ ಇಲಾಖೆಗೆ ಹಂಚಿಕೆ ಮಾಡಿರುವ ಅನುದಾನದ ಮೊತ್ತವೆಷ್ಟು ; ಬಿಡುಗಡೆಯಾಗಿರುವ ಮತ್ತು ವೆಚ್ಚವಾಗಿರುವ ಮೊತ್ತವೆಷ್ಟು ; ಯಾವ ಉದ್ದೇಶಕ್ಕಾಗಿ/ಯೋಜನೆಗಾಗಿ ಅನುದಾನವನ್ನು ಹಂಚಿಕೆ ಹಾಗೂ ವೆಚ್ಚ ಮಾಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ೨೦೨೩–೨೪, ೨೦೨೪–೨೫, ೨೦೨೫–೨೬ನೇ ಸಾಲಿನಲ್ಲಿ ನೀರಾವರಿ ಉದ್ದೇಶ ಕಲ್ಪಿಸುವುದಕ್ಕಾಗಿ ಯಾವ ಹೊಸ ಯೋಜನೆಗಳನ್ನು ಜಾರಿಗೆ ತರಲಾಗಿದೆ ; ಯೋಜನೆಗಳನುಸಾರ ಎಷ್ಟು ಮೊತ್ತವನ್ನು ಹಂಚಿಕೆ ಹಾಗೂ ಬಿಡುಗಡೆ ಮಾಡಲಾಗಿದೆ ಹಾಗೂ ವೆಚ್ಚ ಮಾಡಲಾಗಿದೆ ; ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು ?

## ವಿವಿಧ ಇಲಾಖೆಗಳಿಗೆ ಹಂಚಿಕೆಯಾಗಿರುವ ಅನುದಾನದ ಬಿಡುಗಡೆ ಮತ್ತು ವೆಚ್ಚಗಳ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೫೦ (೩೧೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಇಲಾಖೆಗಳೆಷ್ಟು ; ಸದರಿ ಇಲಾಖೆಗಳಿಗೆ ೨೦೨೫–೨೬ನೇ ಸಾಲಿನ

ಬಜೆಟ್‌ನಲ್ಲಿ ಎಷ್ಟು ಮೊತ್ತವನ್ನು ಯಾವ ಯಾವ ಉದ್ದೇಶಕ್ಕಾಗಿ ಹಂಚಿಕೆ ಮಾಡಲಾಗಿದೆ ;

(ಆ) ಹಂಚಿಕೆ ಮಾಡಿದ ಮೊತ್ತದಲ್ಲಿ ಎಷ್ಟು ಮೊತ್ತವನ್ನು ಬಿಡುಗಡೆಗೊಳಿಸಲಾಗಿದೆ ; ಯಾವ ದಿನಾಂಕದಂದು ಎಷ್ಟು ಮೊತ್ತವನ್ನು ಯಾವ ಇಲಾಖೆಗೆ ಬಿಡುಗಡೆಗೊಳಿಸಲಾಗಿದೆ ; ಹಣ ಬಿಡುಗಡೆ ಮಾಡಲು ಅನುಸರಿಸುವ ಕ್ರಮಗಳೇನು ;

(ಇ) ಹಂಚಿಕೆ ಮಾಡಿದ ಮೊತ್ತವನ್ನು ಇಲಾಖೆಗಳಿಗೆ ಸರಿಯಾದ ಸಮಯದಲ್ಲಿ ಬಿಡುಗಡೆ ಮಾಡಲಾಗಿದೆಯೇ ; ಒಂದು ವೇಳೆ ಬಿಡುಗಡೆ ಮಾಡದಿದ್ದಲ್ಲಿ, ಯಾವ ಕಾರಣಕ್ಕಾಗಿ ಹಣ ಬಿಡುಗಡೆ ಮಾಡಲಾಗಿರುವುದಿಲ್ಲ ;

(ಈ) ಬಿಡುಗಡೆಯಾದ ಹಣವನ್ನು ಇಲಾಖೆಗಳು ವೆಚ್ಚ ಮಾಡುತ್ತಿವೆಯೇ ; ವೆಚ್ಚ ಮಾಡುವಲ್ಲಿ ವಿಳಂಬ ನೀತಿಯನ್ನು ಅನುಸರಿಸಿದರೆ ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ; ಯಾವ ಯಾವ ಇಲಾಖೆಗಳು ವಿಳಂಬ ನೀತಿಯನ್ನು ಅನುಸರಿಸಿವೆ ; ಬಿಡುಗಡೆಯಾದ ಮೊತ್ತವನ್ನು ಉಪಯೋಗಿಸಿಕೊಳ್ಳುವಲ್ಲಿ ಇಲಾಖೆಗಳ ಕಾರ್ಯಕ್ಷಮತೆಯ ವಿವರವನ್ನು ನೀಡುವುದು ?

## ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ವತಿಯಿಂದ ಜಾರಿಯಲ್ಲಿರುವ ಯೋಜನೆಗಳ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೫೧ (೩೧೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ನಿಗಮ ಮಂಡಳಿಗಳೆಷ್ಟು ; ಸದರಿ ನಿಗಮ ಮಂಡಳಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಫಲಾನುಭವಿಗಳಿಗೆ ಲಭ್ಯವಿರುವ ಯೋಜನೆಗಳಾವುವು ; ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸುತ್ತಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ೨೦೨೩-೨೪, ೨೦೨೪-೨೫, ಹಾಗೂ ೨೦೨೫-೨೬ನೇ ಸಾಲುಗಳಲ್ಲಿ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಜಾರಿಯಲ್ಲಿರುವ ಎಲ್ಲಾ ಯೋಜನೆಗಳಲ್ಲಿ ಎಷ್ಟು ಜನ ಫಲಾನುಭವಿಗಳಿಗೆ ಸಹಾಯ ಧನವನ್ನು ನೀಡಲಾಗಿರುತ್ತದೆ ; ಯಾವ ಯೋಜನೆಗಳಲ್ಲಿ ಎಷ್ಟು ಜನ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿರುತ್ತದೆ ; ಆಯ್ಕೆಯಾದ ಫಲಾನುಭವಿಗಳಿಗೆ ಸಹಾಯಧನದ ಅನುದಾನವನ್ನು ಯಾವ ಕಾಲಮಿತಿಯೊಳಗೆ ನೀಡಲಾಗಿರುತ್ತದೆ ; ಪ್ರತಿಯೊಂದು ಯೋಜನೆಗಳಲ್ಲಿರುವ ಫಲಾನುಭವಿಗಳ ಸಂಖ್ಯೆಯೊಂದಿಗೆ ಪ್ರತ್ಯೇಕವಾಗಿ ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು ;

(ಈ) ೨೦೨೧-೨೨, ೨೦೨೨-೨೩ನೇ ಸಾಲಿನಲ್ಲಿ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಜಾರಿಯಲ್ಲಿರುವ ಯೋಜನೆಗಳು ಯಾವುವು ; ಪ್ರತಿಯೊಂದು ಯೋಜನೆಗಳಲ್ಲಿರುವ ಫಲಾನುಭವಿಗಳ ಸಂಖ್ಯೆಯೊಂದಿಗೆ ಪ್ರತ್ಯೇಕವಾಗಿ ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು ?

## ರಾಜಕೀಯ ನಾಯಕರುಗಳಿಗೆ ಒದಗಿಸಿರುವ ಭದ್ರತೆಯನ್ನು ಹೆಚ್ಚಿಸುವ ಮತ್ತು ಹಿಂಪಡೆದಿರುವ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೫೨ (೩೧೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ರಾಜಕೀಯ ನಾಯಕರು, ವಿಐಪಿ ಸೇರಿ ಇತರರ ಭದ್ರತೆಗಾಗಿ ನಿಯೋಜಿಸಿರುವ ಒಟ್ಟು ಅಂಗರಕ್ಷಕರ ಸಂಖ್ಯೆ ಎಷ್ಟು ; ಯಾವ ನಿಯಮಗಳ ಅನುಸಾರ ಅಂಗರಕ್ಷಕರನ್ನು ನೇಮಿಸಲಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ರಾಜಕೀಯ ನಾಯಕರು (ಹೆಸರು ಸಮೇತ) ಸೇರಿ ಇತರರ ವಾಸದ ಮನೆಗಳ ಭದ್ರತೆ ಸೇವೆಗಾಗಿ ಎಷ್ಟು ಜನ ಪೊಲೀಸ್ ಗಾರ್ಡ್‌ಗಳನ್ನು ನೇಮಿಸಲಾಗಿದೆ ; ಯಾರ ಯಾರ ಮನೆಗೆ ಭದ್ರತೆ ಒದಗಿಸಲಾಗಿದೆ ; ಯಾವ ನಿಯಮಗಳ ಅನುಸಾರ ನೇಮಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿ ರಾಜಕೀಯ ನಾಯಕರು ಸೇರಿ ಇತರರ ಭದ್ರತೆಗಾಗಿ, ವಾಸದ ಮನೆಯ ಭದ್ರತೆಗಾಗಿ ನೇಮಿಸಲಾಗಿದ್ದ ಪೊಲೀಸರನ್ನು/ ಗಾರ್ಡ್‌ಗಳನ್ನೂ ವಾಪಸ್ ತೆಗೆದುಕೊಳ್ಳಲು ಅಥವಾ ಭದ್ರತೆಯನ್ನು ಹೆಚ್ಚಿಸಲು ಅನುಸರಿಸಲಾಗುತ್ತಿರುವ ಮಾನದಂಡದ ವಿವರಗಳೇನು ; ಯಾವ ಮಾನದಂಡಗಳ ಅನುಸಾರ ಭದ್ರತೆಯನ್ನು ಹೆಚ್ಚಿಸಲಾಗುತ್ತದೆ ;

(ಈ) ಒಂದು ವೇಳೆ ನೀಡಿರುವ ಭದ್ರತೆಯನ್ನು ಹಿಂಪಡೆದಿದ್ದರೆ, ಯಾವ ರಾಜಕೀಯ ನಾಯಕರ ಭದ್ರತೆಯನ್ನು ಹಿಂಪಡೆಯಲಾಗಿದೆ ; ಹಿಂಪಡೆಯಲು ಕಾರಣಗಳೇನು ; ಯಾವ ನಿಯಮಗಳ ಅನುಸಾರ ಹಿಂಪಡೆಯಲಾಗಿದೆ ; ಭದ್ರತೆಯನ್ನು ಹಿಂಪಡೆಯಲು ಸರ್ಕಾರ ಅನುಸರಿಸುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ ರಾಜಕೀಯ ನಾಯಕರು ಸೇರಿ ಇತರರ ಭದ್ರತೆಗಾಗಿ ನೇಮಿಸಲು ರಚಿಸಲಾಗಿರುವ ಸಮಿತಿ ವಿವರ ನೀಡುವುದು ?

## ಕೋಗಿಲು ಬಡಾವಣೆ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ.) (ವಿಧಾನಸಭೆಯಿಂದ ಚುನಾಯಿತರಾದವರು) :–**

೩೫೩ (೩೩೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಕೋಗಿಲು ಬಡಾವಣೆಯಲ್ಲಿ ನೆಲೆಸಿದ್ದವರಲ್ಲಿ ಎಷ್ಟು ಜನರನ್ನು ಅಕ್ರಮ ವಲಸಿಗರೆಂದು ಗುರುತಿಸಲಾಗಿದೆ ;

(ಆ) ಈ ವಲಸಿಗರಿಗೆ ಆಧಾರ್ ಕಾರ್ಡ್, ವೋಟರ್ ಐಡಿ ಮತ್ತು ರೇಷನ್ ಕಾರ್ಡ್ ಯಾವ ಆಧಾರದ ಮೇಲೆ ಮತ್ತು ಯಾವ ಅಧಿಕಾರಿಗಳ ಶಿಫಾರಸ್ಸಿನ ಮೇರೆಗೆ ವಿತರಿಸಲ್ಪಟ್ಟಿದೆ ;

(ಇ) ಇಂತಹ ಸೂಕ್ಷ್ಮ ದಾಖಲೆಗಳನ್ನು ಅಕ್ರಮವಾಗಿ ಒದಗಿಸಿದ ಸರ್ಕಾರಿ ಸಿಬ್ಬಂದಿ ಅಥವಾ ಮಧ್ಯವರ್ತಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಶಿಸ್ತು ಕ್ರಮಗಳೇನು ; ಈ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸಲಾಗಿದೆಯೇ ?

## ಕೆರೆಗಳ ಅಭಿವೃದ್ಧಿಗೆ ಅನುದಾನದ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ.) (ವಿಧಾನಸಭೆಯಿಂದ ಚುನಾಯಿತರಾದವರು) :–**

೩೫೪ (೩೩೪) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಣ್ಣ ನೀರಾವರಿ ವ್ಯಾಪ್ತಿಯಲ್ಲಿ ಬರುವ ಕೆರೆಗಳ ಅಭಿವೃದ್ಧಿಗೆ ಮಂಜೂರಾದ ಅನುದಾನವೆಷ್ಟು ; (ವಿಧಾನಸಭಾವಾರು ಮಾಹಿತಿ ನೀಡುವುದು)

(ಆ) ಮಂಜೂರಾದ ಅನುದಾನದ ಪೈಕಿ ಬಿಡುಗಡೆಗೊಳಿಸಿರುವ ಮೊತ್ತವೆಷ್ಟು ; ಬಾಕಿ ಇರುವ ಮೊತ್ತವೆಷ್ಟು ? (ವಿಧಾನಸಭವಾರು ಮಾಹಿತಿ ನೀಡುವುದು)

## ಅನುದಾನದ ಬಿಡುಗಡೆ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೫ (೩೩೯) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆ ಹುಮನಾಬಾದ್ ತಾಲ್ಲೂಕಿಗೆ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಮತ್ತು ಇತರೆ ಯೋಜನೆಗಳಿಗೆ ಬಿಡುಗಡೆಯಾದ ಅನುದಾನ ವೆಷ್ಟು ; (ವಿವರ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿ ಕೈಗೊಳ್ಳಲಾಗಿದೆ ; (ಮಾಹಿತಿ ನೀಡುವುದು)

(ಇ) ೨೦೨೪–೨೫ ಮತ್ತು ೨೦೨೫–೨೬ನೇ ಸಾಲಿನಲ್ಲಿ ಜಿಲ್ಲೆಯಿಂದ ಹೊಸ ಕಾಮಗಾರಿಗೆ ಎಷ್ಟು ಪ್ರಸ್ತಾವನೆ ಬಂದಿದೆ ; ಬಂದಿದ್ದಲ್ಲಿ, ಮಾಹಿತಿ ನೀಡುವುದು ?

## ಹುದ್ದೆಗಳ ಭರ್ತಿ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೬ (೩೪೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆ ವ್ಯಾಪ್ತಿಯಲ್ಲಿ ವಿವಿಧ ಇಲಾಖೆಯಲ್ಲಿ ಗ್ರೂಪ್ ಸಿ ಮತ್ತು ಗ್ರೂಪ್ ಡಿ ಹುದ್ದೆಗಳು ಖಾಲಿ ಇರುವುದರಿಂದ ಜಿಲ್ಲೆಯಲ್ಲಿ ಸಾರ್ವಜನಿಕರ ಕೆಲಸಗಳು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದ್ದಲ್ಲಿ, ಸರ್ಕಾರ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮವೇನು ;

(ಇ) ಕಳೆದ ೧ ವರ್ಷದಲ್ಲಿ ಜಿಲ್ಲೆಯಲ್ಲಿ ಎಷ್ಟು ಸರ್ಕಾರಿ ಹುದ್ದೆಗಳು ಭರ್ತಿಯಾಗಿವೆ ? (ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಕೆರೆ ಮತ್ತು ನದಿಗಳ ಒತ್ತುವರಿ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೩೫೭ (೩೬೪) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಒಟ್ಟು ಎಷ್ಟು ಕೆರೆ ಹಾಗೂ ನದಿಗಳಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಒಟ್ಟು ಭಾಗಶಃ ನಾಶಗೊಂಡ ಹಾಗೂ ಸಂಪೂರ್ಣವಾಗಿ ನಾಶಗೊಂಡಿರುವ ಕೆರೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ಐದು ವರ್ಷಗಳಲ್ಲಿ ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟು ಕೆರೆ–ನದಿಗಳನ್ನು ಪುನಶ್ಚೇತನ, ಹೂಳು ತೆಗೆಯುವಿಕೆ, ತಡೆಗೋಡೆ ದುರಸ್ಥಿ, ನೀರು ತುಂಬಿಸುವ ಹಾಗೂ ಪರಿಸರ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಅಕ್ರಮ ಒತ್ತುವರಿಯಿಂದ ಹಾನಿಗೊಳಗಾದ ಕೆರೆ ಹಾಗೂ ನದಿಗಳ ಸಂಖ್ಯೆ ಎಷ್ಟು ; ಕಳೆದ ಮೂರು ವರ್ಷಗಳಲ್ಲಿ ಎಷ್ಟು ಎಕರೆ ಪ್ರದೇಶವನ್ನು ತೆರವುಗೊಳಿಸಲಾಗಿದೆ ; ಇನ್ನೂ ತೆರವುಗೊಳಿಸಬೇಕಾಗಿರುವ ಒತ್ತುವರಿ ಪ್ರಮಾಣ ಎಷ್ಟು ;

(ಉ) ರಾಜ್ಯದ ಎಲ್ಲಾ ಕೆರೆ–ಸರೋವರಗಳ ಡಿಜಿಟಲ್ ಮ್ಯಾಪಿಂಗ್,ಗಡಿ ಗುರುತು, ರಕ್ಷಣಾ ವಲಯ ಘೋಷಣೆ ಹಾಗೂ ಸ್ಥಳೀಯ ಸಂಸ್ಥೆಗಳ ಮೂಲಕ ನಿರಂತರ ನಿರ್ವಹಣೆಗೆ ಸರ್ಕಾರದ ಬಳಿ ಸಮಗ್ರ ಮಾಹಿತಿ ಇದೆಯೇ ? (ವಿವರ ನೀಡುವುದು)

## ಖಾಲಿ ಇರುವ ಹುದ್ದೆಗಳ ಭರ್ತಿ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೩೫೮ (೩೬೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಇಲಾಖೆ ಹಾಗೂ ನಿಗಮ ಮಂಡಳಿಗಳಲ್ಲಿ ಕಳೆದ ಐದು ವರ್ಷಗಳಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ಮತ್ತು ಇನ್ನೂ ಎಷ್ಟು ಹುದ್ದೆಗಳು ಭರ್ತಿಗೆ ಬಾಕಿ ಉಳಿದಿವೆ ;

(ಆ) ಪ್ರಸ್ತುತ ಯಾವ ಯಾವ ಇಲಾಖೆಗಳ ಯಾವ ಯಾವ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ನಡೆಯುತ್ತಿದೆ ; ಕೆ.ಪಿ.ಎಸ್.ಸಿ, ಕೆ.ಇ.ಎ, ಮತ್ತು ಇತರೆ ನೇಮಕಾತಿ ಸಂಸ್ಥೆಗಳ ಮೂಲಕ ನಡೆಯುತ್ತಿರುವ ನೇಮಕಾತಿಗಳ ವಿವರ ಹಾಗೂ ಪ್ರಗತಿಯ ವಿವರ ನೀಡುವುದು ;

(ಇ) ನೇಮಕಾತಿ ಪ್ರಕ್ರಿಯೆಯಲ್ಲಿ ಆಗುತ್ತಿರುವ ವಿಳಂಬ, ನ್ಯಾಯಾಲಯ ಪ್ರಕರಣಗಳನ್ನು, ನಿಯಮಾವಳಿ ಗೊಂದಲ ಹಾಗೂ ತಾಂತ್ರಿಕ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ರಾಜ್ಯದಲ್ಲಿ ಖಾಲಿ ಹುದ್ದೆಗಳ ಪ್ರಮಾಣ ಕಡಿಮೆ ಮಾಡಿ, ಯುವಕರಿಗೆ ಉದ್ಯೋಗಾವಕಾಶ ಸೃಷ್ಟಿಸುವ ಉದ್ದೇಶದಿಂದ ಸರ್ಕಾರ ಹೊಸ ವಿಶೇಷ ನೇಮಕಾತಿ ಅಭಿಯಾನ ಆರಂಭಿಸುವ ಕುರಿತು ನಿರ್ಧಾರ ಕೈಗೊಂಡಿದೆಯೇ ? (ಸಂಪೂರ್ಣ ವಿವರ ನೀಡುವುದು)

## ಪೊಲೀಸ್ ಇಲಾಖೆಯಲ್ಲಿ ಅಧಿಕಾರಿ/ಸಿಬ್ಬಂದಿಗಳ ಭ್ರಷ್ಟಾಚಾರದ ಬಗ್ಗೆ

**ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೯ (೪೦೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ರಾಜ್ಯದ ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ಲೋಪ ಮತ್ತು ಭ್ರಷ್ಟಾಚಾರದಡಿಯಲ್ಲಿ ಸಿಲುಕಿ ಅವಮಾನತ್ತುಗೊಂಡವರ ಸಂಖ್ಯೆ ಎಷ್ಟು ; (ಅವರ ಹುದ್ದೆಗಳೊಂದಿಗೆ ಪ್ರಕರಣಗಳ ವಿವರ, ಜಿಲ್ಲಾವಾರು ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

(ಆ) ಆ ಪೈಕಿ ಲೋಪ ರುಜುವಾತು ಆಗಿರುವ ಪ್ರಕರಣಗಳೆಷ್ಟು; ಅವರುಗಳ ಮೇಲೆ ಕೈಗೊಂಡ ಕಠಿಣ ಕಾನೂನು ಕ್ರಮಗಳೇನು ; (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

(ಇ) ಶಿಸ್ತು/ದಕ್ಷತೆ/ ಪ್ರಮಾಣಿಕತೆಯಿಂದ ಇರಬೇಕಾದ ಪೊಲೀಸರು ಭ್ರಷ್ಟಾಚಾರದಡಿಯಲ್ಲಿ ಸಿಲುಕಿ ಕರ್ತವ್ಯ ಲೋಪ ಎದುರಿಸಲು ಕಾರಣಗಳೇನು; ಇದನ್ನು ನಿವಾರಿಸಲು ಇಲಾಖೆಯು ಕೈಗೊಂಡ ಕ್ರಮಗಳೇನು ? (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

## ಆಸ್ತಿ ತೆರಿಗೆ ದುರುಪಯೋಗ ಪ್ರಕರಣಗಳ ಕುರಿತು

**ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೦ (೪೦೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಮಹಾನಗರ ಪಾಲಿಕೆ ವಾರ್ಡ್ ನಂ.೧೯ರಲ್ಲಿನ ಆಸ್ತಿ ತೆರಿಗೆಯ ಸುಮಾರು ೩ ಲಕ್ಷಗಳಷ್ಟು ಹಣ ದುರುಪಯೋಗಕ್ಕೆ ಸಂಬಂಧಿಸಿದಂತೆ ಬಳ್ಳಾರಿಯ ಗಾಂಧಿ ನಗರ ಪೊಲೀಸ್ ಠಾಣೆಯಲ್ಲಿ ಪ್ರಥಮ ವರ್ತಮಾನ ವರದಿ ಸಂಖ್ಯೆ: ೦೧೩೫/ ೨೦೨೪ ವರದಿಯಾಗಿರುವುದು ನಿಜವೇ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಈ ಪ್ರಕಣದಲ್ಲಿ ಇಲ್ಲಿಯವರೆಗೆ ಆಗಿರುವ ವಿಚಾರಣಾ ಪ್ರಗತಿ ಏನು; ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ಸಲ್ಲಿಸಲಾಗಿದೆಯೇ ; (ಪ್ರತಿಯೊಂದಿಗೆ ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ಸಲ್ಲಿಸದಿದ್ದಲ್ಲಿ ವಿಳಂಬಕ್ಕೆ ಕಾರಣಗಳೇನು; ಯಾವ ಕಾಲಮಿತಿಯಲ್ಲಿ ಚಾರ್ಜ್‌ಶೀಟ್ ಸಲ್ಲಿಸಲಾಗುವುದು ? (ಮಾಹಿತಿ ಒದಗಿಸುವುದು)

## ಅರ್ಕಾವತಿ ನದಿಯ ಒತ್ತುವರಿ ತೆರವುಗಳೊಂದಿಗೆ ಜಲಮೂಲ ಉಳಿಸಿಕೊಳ್ಳುವ ಬಗ್ಗೆ

**ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೬೧ (೪೦೫) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಗ್ರಾಮಾಂತರ, ನಗರ ಹಾಗೂ ಬೆಂಗಳೂರು ದಕ್ಷಿಣ ಜಿಲ್ಲೆಗಳಲ್ಲಿ ಹರಿದು ಕಾವೇರಿ ನದಿ ಸೇರುವ ಅರ್ಕಾವತಿ ನದಿ ಉದ್ದ, ನದಿ ಪಾತ್ರದ ವಿಸ್ತಾರ, ಇದರ ಉಪನದಿ ಮತ್ತು ಇದರ ನಡುವೆ ಬರುವ ಕೆರೆಗಳಾವುವು ; (ವಿವರಗಳೊಂದಿಗೆ ಮಾಹಿತಿ ಒದಗಿಸಿ)

(ಆ) ಈ ನದಿಯ ಪಾತ್ರದಲ್ಲಿ ಬರುವ ಕೆರೆಗಳು, ಕಾಲುವೆಗಳನ್ನು ಖಾಸಗಿಯುವರು ಒತ್ತುವರಿ ಮಾಡಿರುವುದು ನಿಜವೇ ; (ವಿವರಗಳನ್ನು ಒದಗಿಸುವುದು)

(ಇ) ಸದರಿ ನದಿ ಪಾತ್ರದ ಕೆರೆ, ಕಾಲುವೆ ಒತ್ತುವರಿಗಳನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಈ) ಬೆಂಗಳೂರಿನ ಒಂದು ಜಲಮೂಲವಾಗಬಲ್ಲ ಅರ್ಕಾವತಿ ನದಿಯನ್ನು ಕಲುಷಿತವಾಗದಂತೆ, ಒತ್ತುವರಿಗಳನ್ನು ತೆರವುಗೊಳಿಸಿ ಉತ್ತಮ ಜಲಮೂಲವನ್ನು ಕಾಪಾಡಲು ಸರ್ಕಾರದ ಸ್ಪಷ್ಟ ನಿರ್ಧಾರಗಳೇನು ? (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O 154/500 ಪ್ರತಿಗಳು/23–01–2026